ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

KB 12 YEARS 2013

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು , ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 163
12–12–2025 ಶುಕ್ರವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 163

## ರಾಜ್ಯದ ಎಲ್ಲಾ ತಾಲ್ಲೂಕು ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರಗಳು 24 ಗಂಟೆಗಳ ಸೇವೆ– ದಿನೇಶ್ ಗುಂಡೂರಾವ್



**ಬೆಳಗಾವಿ:** ರಾಜ್ಯದ ಎಲ್ಲಾ ತಾಲೂಕು ಆಸ್ಪತ್ರೆಗಳು ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ 24 ಗಂಟೆಗಳ ಸೇವೆಯ ಖಾತ್ರಿಗುರಿಯನ್ನು ರಾಜ್ಯ ಸರ್ಕಾರ ಹೊಂದಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಗುರುವಾರ ವಿಧಾನಸಭೆಗೆ ತಿಳಿಸಿದರು.

ಪ್ರಶ್ನೋತ್ತರ ವೇಳೆಯಲ್ಲಿ ಕುಷ್ಟಗಿಯ ಬಿಜೆಪಿ ಶಾಸಕ ದೊಡ್ಡನಗೌಡ ಹೆಚ್ ಪಾಟೀಲ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಅಗತ್ಯ ಸಂಖ್ಯೆಯ ವೈದ್ಯರು, ತಜ್ಞರು ಮತ್ತು ವೈದ್ಯಕೀಯ ಸಿಬ್ಬಂದಿಗಳ ನೇಮಕಾತಿ ಮೂಲಕ ಈ ಗುರಿ ಸಾಧಿಸಲಾಗುತ್ತಿದೆ ಎಂದರು.

ಪ್ರತಿ ತಾಲೂಕು ಆಸ್ಪತ್ರೆಯು 24 ಗಂಟೆ ಸೇವೆ ಒದಗಿಸುವುದು ನಮ್ಮ ಉದ್ದೇಶವಾಗಿದೆ. 24 ಗಂಟೆಗಳ ಸೇವೆಯ ಖಾತ್ರಿಗೆ ಈಗ ಪ್ರತಿ ತಾಲೂಕು ಆಸ್ಪತ್ರೆಯಲ್ಲಿ ಇಬ್ಬರು ಪ್ರಸೂತಿ ತಜ್ಞರು, ಅರಿವಳಿಕೆ ತಜ್ಞರು, ಮಕ್ಕಳ ತಜ್ಞರು, ಒಬ್ಬ ರೇಡಿಯಾಲಜಿಸ್ಟ್ ಮತ್ತು ಒಬ್ಬ ವೈದ್ಯರನ್ನು ಖಚಿತಪಡಿಸಿಕೊಳ್ಳುತ್ತೇವೆ. ಜನರು ಅವರಿಗೆ ಅಗತ್ಯವಿರುವಾಗ ಸೇವೆ ಪಡೆಯಬಹುದಾಗಿದೆ ಎಂದು ತಿಳಿಸಿದರು.

ಸಮಯೋಚಿತ ವೈದ್ಯಕೀಯ ಆರೈಕೆಯ ಕೊರತೆಯಿಂದ ಬಾಣಂತಿಯರ ಸಾವುಗಳು ಹೆಚ್ಚಾಗಿ ಸಂಭವಿಸುತ್ತಿವೆ.

ತಾಲೂಕು ಆಸ್ಪತ್ರೆಗಳಲ್ಲಿ ಸೇವೆಗಳನ್ನು ಸುಧಾರಿಸುವುದರಿಂದ ಜನರು ಜಿಲ್ಲಾ ಆಸ್ಪತ್ರೆಗಳಿಗೆ ಹೋಗುವುದನ್ನು ತಪ್ಪಿಸಬಹುದು. ಕಾರ್ಯನಿರ್ವಹಣೆ ಕಡಿಮೆ ಇರುವ ತಾಲ್ಲೂಕ್ ಆಸ್ಪತ್ರೆಗಳಲ್ಲಿ 30 ಕ್ಕಿಂತ ಕಡಿಮೆ ಹೆರಿಗೆಗಳಾದರೆ, ಇಬ್ಬರು ಎಂಬಿಬಿಎಸ್ ವೈದ್ಯರೊಂದಿಗೆ ಇಬ್ಬರು ಸ್ತ್ರೀ ರೋಗ ತಜ್ಞರನ್ನು ಬದಲಾವಣೆ ಮಾಡುತ್ತೇವೆ. ಒಬ್ಬರು ಫಿಜಿಸಿಯನ್ ಇರಲಿದ್ದಾರೆ. ಸಂಜೆ 4 ಗಂಟೆ ನಂತರ ಬಾಗಿಲು ಬಂದ್ ಮಾಡಲಾಗುತ್ತಿದ್ದ ಸಮುದಾಯ ಆರೋಗ್ಯ ಕೇಂದ್ರಗಳು ಇದೀಗ 24 ಗಂಟೆಗಳ ಸೇವೆ ಒದಗಿಸಬೇಕಾಗುತ್ತದೆ ಎಂದು ತಿಳಿಸಿದರು.

ರಾಜ್ಯದ ಸಮುದಾಯ ಆರೋಗ್ಯ ಕೇಂದ್ರಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳು ಹಾಗೂ ತಾಲ್ಲೂಕು ಆಸ್ಪತ್ರೆಗಳಲ್ಲಿ ಖಾಲಿ ಇರುವ ತಜ್ಞವೈದ್ಯರು, ಕರ್ತವ್ಯ ವೈದ್ಯಾಧಿಕಾರಿಗಳು, ನರ್ಸ್‌ಗಳು ಹಾಗೂ ಫಾರ್ಮಸಿಸ್ಟ್ ಹುದ್ದೆಗಳನ್ನು ಒಂದು ತಿಂಗಳೊಳಗೆ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

# ರಾಜ್ಯದಲ್ಲಿ 2.88 ಲಕ್ಷ ಸರ್ಕಾರಿ ಉದ್ಯೋಗ ಖಾಲಿ ಇವೆ : ಸಿಎಂ





**ಬೆಳಗಾವಿ, ಡಿ. 12:** ರಾಜ್ಯದ ವಿವಿಧ ಇಲಾಖೆಗಳಲ್ಲಿ 2 ಲಕ್ಷದ 84 ಸಾವಿರದ 881 ಹುದ್ದೆಗಳು ಖಾಲಿ ಇವೆ ಇವುಗಳನ್ನು ಆರ್ಥಿಕ ಇಲಾಖೆಯ ಅನುಮತಿ ಪಡೆದು ಹಂತಹಂತವಾಗಿ ಭರ್ತಿ ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ

ವಿಧಾನ ಪರಿಷತ್ತಿನ ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿಯ ಸದಸ್ಯ ನಿರಾಣಿ ಹಣಮಂತ ಅವರ ಪ್ರಶ್ನೆಗೆ ಉತ್ತರಿಸಿದ ಅವರು ಇಂಧನ, ಲೋಕೋಪಯೋಗಿ ಆರೋಗ್ಯ ಶಿಕ್ಷಣ ಸೇರಿದಂತೆ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಎಲ್ಲಾ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ಎಂದು ಹೇಳಿದರು.

ವಿವಿಧ ನಿಗಮ ಮಂಡಳಿಗಳಲ್ಲಿ101420 ಹುದ್ದೆಗಳು, ವಿಶ್ವವಿದ್ಯಾಲಯಗಳಲ್ಲಿ 14677 ಹುದ್ದೆಗಳು ಒಟ್ಟು188037 ಹುದ್ದೆಗಳು ಖಾಲಿಯಿದೆ. ಈಗಾಗಲೇ 24,300 ಹುದ್ದೆಗಳ ನೇಮಕಾತಿ ಪ್ರಕ್ರಿಯೆಗೆ ಆರ್ಥಿಕ ಇಲಾಖೆಯಿಂದ ಅನುಮತಿ ದೊರೆತಿದೆ. ಹೈದ್ರಾಬಾದ್ ಕರ್ನಾಟಕಕ್ಕೆ 371 ಜೆ ಅಡಿ 32,132 ಹುದ್ದೆಗಳು ಭರ್ತಿಯಾಗಬೇಕಿದೆ. ಒಟ್ಟು 56432 ಹುದ್ದೆಗಳ ಭರ್ತಿಗೆ ಈಗಾಗಲೇ ಕ್ರಮ ಕೈಗೊಳ್ಳಲಾಗಿದೆ ಎಂದರು.

ಒಳಮೀಸಲಾತಿಯ ಬಿಕ್ಕಟ್ಟಿನಿಂದಾಗಿ ನೇಮಕಾತಿ ಪ್ರಕ್ರಿಯೆಯಲ್ಲಿ ವಿಳಂಬವುಂಟಾಗಿತ್ತು. ಈಗ ಈ ಸಮಸ್ಯೆಗೆ ಬಗೆಹರಿದಿದ್ದು, ಆರ್ಥಿಕ ಇಲಾಖೆಯ ಅನುಮತಿ ಪಡೆದು ಹಂತ ಹಂತವಾಗಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ಎಂದು ಹೇಳಿದರು

**ಕ್ರೀಡಾ ಮೀಸಲಾತಿ:** ಕಾಂಗ್ರೆಸ್ ನ ಐವಾನ್ ಡಿಸೋಜಾ ಅವರ ಮತ್ತೊಂದು ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಗಳು ರಾಜ್ಯದಲ್ಲಿ

ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡುವ ದಿಸೆಯಲ್ಲಿ ಅರಣ್ಯ ಇಲಾಖೆಯಲ್ಲಿ ಶೇ. 3 ಪೊಲೀಸ್ ಇಲಾಖೆಯಲ್ಲಿ ಶೇ.3 ಹಾಗೂ ವಿವಿಧ ಇಲಾಖೆಗಳಲ್ಲಿ ಶೇ. 2 ರಷ್ಟು ಮೀಸಲಾತಿಯನ್ನು ಅನುಷ್ಠಾನಗೊಳಿಸಲಾಗುವುದು ಎಂದು ತಿಳಿಸಿದರು.

ರಾಜ್ಯ ಸರ್ಕಾರ ಒಲಂಪಿಕ್ಸ್, ಪಾರಾಒಲಂಪಿಕ್ಸ್, ಕಾಮನ್ವೆಲ್ತ್, ಏಷಿಯನ್ ಗೇಮ್ಸ್ ಕ್ರೀಡಾಕೂಟಗಳಲ್ಲಿ ಪದಕವಿಜೇತರಾದ 13 ಕ್ರೀಡಾಪಟುಗಳಿಗೆ ನೇಮಕಾತಿ ಮಾಡಿಕೊಳ್ಳಲಾಗಿದೆ. ಪೊಲೀಸ್ ಇಲಾಖೆಯಲ್ಲಿ 70 ಕಾನ್ಸ್ಟೇಬಲ್ ಗಳಿಗೆ ನೇರ ನೇಮಕಾತಿ ಹಾಗೂ 14 ಪಿಎಸ್ ಐ ಗಳನ್ನು ನೇಮಕಾತಿ ಮಾಡಿಕೊಳ್ಳಲಾಗಿದೆ. ಅಲ್ಲದೇ ಅರಣ್ಯ ಇಲಾಖೆಯಲ್ಲಿ ಶೇ. 3 ಪೊಲೀಸ್ ಇಲಾಖೆಯಲ್ಲಿ ಶೇ.3 ಹಾಗೂ ವಿವಿಧ ಇಲಾಖೆಗಳಲ್ಲಿ ಶೇ. 2 ರಷ್ಟು ಮೀಸಲಾತಿ ನೀಡಿ ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡಲಾಗುವುದು. ಕಬ್ಬಡಿ ಕ್ರೀಡೆಗೆ ಹೆಚ್ಚಿನ ಪ್ರೋತ್ಸಾಹ ನೀಡುವ ಬಗ್ಗೆ ಪರಿಶೀಲನೆ ನಡೆಸಲಾಗುವುದು ಎಂದು ತಿಳಿಸಿದರು.

**ವಸತಿ ನಿಲಯ:** ಬಿಜೆಪಿಯ ಶಾಂತರಾಮ ಸಿದ್ದಿ ಅವರ ಮತ್ತೊಂದು ಪ್ರಶ್ನೆಗೆ ಉತ್ತರಿಸಿದ ಅವರು ಉತ್ತರಕನ್ನಡ ಜಿಲ್ಲೆಯ ಯಲ್ಲಾಪುರದಲ್ಲಿ ವಸತಿ ನಿಲಯ ನಿರ್ಮಿಸುವ ಬಗ್ಗೆ ಮುಂದಿನ ಆಯವ್ಯಯದಲ್ಲಿ ತೀರ್ಮಾನಿಸಲಾಗುವುದು ಎಂದು ತಿಳಿಸಿದರು.

ಉತ್ತರಕನ್ನಡ ಜಿಲ್ಲೆಯ ಯಲ್ಲಾಪುರ ಭಾಗದ ಹಿಂದುಳಿದ ವರ್ಗ ಮತ್ತು ಪರಿಶಿಷ್ಟ ವರ್ಗಕ್ಕೆ ಸೇರಿದ ವಿವಿಧ ಸಮುದಾಯದ ವಿದ್ಯಾರ್ಥಿಗಳ ಶಿಕ್ಷಣಕ್ಕೆ ನೆರವಾಗುವಂತೆ ಯಲ್ಲಾಪುರದಲ್ಲಿ ವಸತಿ ನಿಲಯವನ್ನು ನಿರ್ಮಿಸಲು, ಮುಂದಿನ ಆಯವ್ಯಯದಲ್ಲಿ ಒಳಪಡಿಸಲು ಸೂಕ್ತ ತೀರ್ಮಾನ ಕೈಗೊಳ್ಳುವುದಾಗಿ ತಿಳಿಸಿದರು.

## ಸಿದ್ದರಾಮಯ್ಯ ಬದಲಾಯಿಸಲು ಗಟ್ಸ್ ಯಾರಿಗಿದೆ? : ಗುಡುಗಿದ ಸಚಿವ ಜಮೀರ್



**ಬೆಳಗಾವಿ :** ಸಿಎಂ–ಡಿಸಿಎಂ ನಡುವೆ ಬ್ರೇಕ್ ಫಾಸ್ಟ್ ಮೀಟಿಂಗ್ ನಡೆದರೂ ಸಹ ಕಾಂಗ್ರೆಸ್ ಮನೆಯಲ್ಲಿ ಕುರ್ಚಿ ಕ್ರಾಂತಿಯ ಕಿಚ್ಚು ಮಾತ್ರ ಆರಿಲ್ಲ. ಎಲ್ಲವೂ ಕೂಲ್ ಆಯ್ತು ಎನ್ನುವಾಗಲೇ ಮತ್ತೆ ಸಿಎಂ ಪುತ್ರ ಯತೀಂದ್ರ ಪವರ್ ಶೇರಿಂಗ್ ವಿಚಾರವಾಗಿ ಮಾತನಾಡಿದ್ದಾರೆ. ನಾಯಕತ್ವದಲ್ಲಿ ಯಾವುದೇ ಬದಲಾವಣೆ ಇಲ್ಲ ಎಂದು ಹೈಕಮಾಂಡ್ ಕೂಡ ಸ್ಪಷ್ಟವಾಗಿ ಹೇಳಿದೆ ಅಂತಾ ಯತೀಂದ್ರ ಪುನರುಚ್ಚರಿಸಿದ್ದಾರೆ. ಇದರ ಬೆನ್ನಲ್ಲೇ ಕಾಂಗ್ರೆಸ್‌ನಲ್ಲಿ ಸಂಚಲನ ಸೃಷ್ಟಿಸಿದ್ದು, ಡಿಕೆ ಶಿವಕುಮಾರ್ ಆಪ್ತ ಬಣದ ಕಣ್ಣು ಕೆಂಪಾಗಿಸಿದೆ.

ಇನ್ನು ಇದೇ ವಿಚಾರವಾಗಿ ಸಿಎಂ ಬಣದ ಸಚಿವ ಜಮೀರ್ ಅಹಮ್ಮದ್ ಖಾನ್ ಪ್ರತಿಕ್ರಿಯಿಸಿ ಸಿದ್ದರಾಮಯ್ಯ ಬದಲಾವಣೆ ಯಾರಿಂದಲೂ ಸಾಧ್ಯವಿಲ್ಲ. 2028ರವರೆಗೂ ಸಿದ್ದರಾಮಯ್ಯನವರು ಸಿಎಂ ಆಗಿರಬೇಕು. ಇದು ನನ್ನ ವೈಯಕ್ತಿಕ ಹೇಳಿಕೆ. ಸಿದ್ದರಾಮಯ್ಯ ಬದಲಾಯಿಸಲು ಯಾರಿಗೆ ಗಟ್ಸ್ ಇದೆ? ಆ ಗಟ್ಸ್ ಇರುವುದು ಪಕ್ಷದ ಹೈಕಮಾಂಡ್‌ಗೆ ಮಾತ್ರ ಎಂದು ಗುಡುಗಿದ್ದಾರೆ. ಈ ಮೂಲಕ ಪರೋಕ್ಷವಾಗಿ ಡಿಕೆಶಿ ಬಣಕ್ಕೆ ಟಾಂಗ್ ಕೊಟ್ಟಿದ್ದಾರೆ. ಇದು ಉರಿಯುವ ಬೆಂಕಿಗೆ ಮತ್ತಷ್ಟು ತುಪ್ಪ ಸುರಿದಂತಾಗಿದೆ.

## ಎಐಕೆಕೆಎಂಎಸ್ ಮುಖಂಡರ ಬಂಧನ ಖಂಡಿಸಿ, ಮಾಯಕೊಂಡದಲ್ಲಿ ಪ್ರತಿಭಟನೆ




**ದಾವಣಗೆರೆ:** ಎಐಕೆಕೆಎಂಎಸ್ ದಾವಣಗೆರೆ ಜಿಲ್ಲಾ ಸಮಿತಿ ವತಿಯಿಂದ ಮಾಯಕೊಂಡ ಗ್ರಾಮದಲ್ಲಿ ಅಖಿಲ ಭಾರತ ಪ್ರತಿರೋಧ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿತ್ತು. ಪ್ರತಿಭಟನೆಯನ್ನು ಉದ್ದೇಶಿಸಿ ಎಐಕೆಕೆಎಂಎಸ್ ರಾಷ್ಟ್ರೀಯ ಉಪಾಧ್ಯಕ್ಷ ಡಾ.ಟಿ.ಎ.ಸುನಿಲ್ ಕುಮಾರ್ ಮಾತನಾಡಿದರು.


ಸಂಯುಕ್ತ ಕಿಸಾನ್ ಮೋರ್ಚಾ ರಾಷ್ಟ್ರೀಯ ನಾಯಕ ಮತ್ತು ನಮ್ಮ ಸಂಘಟನೆಯ ಅಧ್ಯಕ್ಷ ಸತ್ಯವಾನ್ ಮತ್ತು ಎಐಕೆಕೆಎಂಎಸ್‌ನ ಒಡಿಶಾ ರಾಜ್ಯ ಅಧ್ಯಕ್ಷ ಸದಾಶಿವ್ ದಾಸ್ ಮತ್ತು ಇತರ ಕಾಮ್ರೇಡ್‌ಗಳನ್ನು ಜಿಂದಾಲ್–ಪೋಸ್ಕೊ ಕಂಪನಿಯ ಗೂಂಡಾಗಳು ಅಪಹರಿಸಿ ಒಡಿಶಾದ ಕಿಯೋಂಝಾರ್ ಜಿಲ್ಲೆಯ ತುರುಮುಂಗಾ ಪೊಲೀಸ್ ಠಾಣೆಯಲ್ಲಿ ಬಂಧಿಸಿದ್ದಾರೆ ಇದು ಖಂಡನೀಯ ಎಂದರು.

ಒಡಿಶಾದ ಕಿಯೋಂಝಾರ್ ಜಿಲ್ಲೆಯ ಜಮುನಾಪೋಸಿ ಗ್ರಾಮದಲ್ಲಿ ಜಿಂದಾಲ್ ಪೋಸ್ಕೊ ವಿರೋಧಿ ಮಂಚ್ ಆಯೋಜಿಸಿದ್ದ ಸಭೆಯಿಂದ ಹಿಂತಿರುಗುತ್ತಿದ್ದಾಗ ಈ ಘಟನೆ ಸಂಭವಿಸಿದೆ. ಜಿಂದಾಲ್ ಮತ್ತು ಪೋಸ್ಕೊದಂತಹ ಬಹುರಾಷ್ಟ್ರೀಯ ಕಂಪನಿಗಳು ಬಡ ರೈತರಿಂದ ಕೃಷಿ ಭೂಮಿಯನ್ನು ಕಸಿದುಕೊಳ್ಳಲು ಸಹಾಯ ಮಾಡಲು ಸ್ಥಳೀಯ ಪೊಲೀಸ್ ಆಡಳಿತವು ಈ ಹೇಯ ಯೋಜನೆಯನ್ನು ಆಯೋಜಿಸಿದೆ ಎಂದು ಕಿಡಿಕಾರಿದರು.

ಆಡಳಿತ ಗುಂಪಿನ ಈ ಜನವಿರೋಧಿ, ರೈತವಿರೋಧಿ ನಡೆಯನ್ನು ಬಲವಾಗಿ ವಿರೋಧಿಸುತ್ತೇವೆ, ಅಲ್ಲದೇ ಈ ಕೂಡಲೇ ಬಂಧಿತ ನಾಯಕರನ್ನು ಬಿಡುಗಡೆ ಮಾಡಬೇಕೆಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಎಐಕೆಕೆಎಂಎಸ್‌ನ ಜಿಲ್ಲಾಧ್ಯಕ್ಷ ಮಧು ತೊಗಲೇರಿ, ಜಿಲ್ಲಾ ಉಪಾಧ್ಯಕ್ಷರಾದ ಭೀಮಣ್ಣ, ಮಾಯಕೊಂಡ ರಾಜು, ಕರ್ನಾಟಕ ರಾಜ್ಯ ರೈತ ಸಂಘದ ತಾಲೂಕು ಮುಖಂಡರಾದ ಅಶೋಕ್, ಪ್ರತಾಪ್ ಭೀಮಣ್ಣ ಇತರರು ಇದ್ದರು.

## ಸಂವಿಧಾನ ಬದ್ಧವಾದ ಹಕ್ಕು ಪಡೆಯಲು ಕಾನೂನು ಅರಿವು ಅಗತ್ಯ : ವಿ.ಹನುಮಂತಪ್ಪ




**ಚಿಕ್ಕಮಗಳೂರು:** ಸಂವಿಧಾನದ ಆಶಯದಂತೆ ಸರ್ವರಿಗೂ ಸಮಾನತೆ, ಸಮಬಾಳು, ವ್ಯಕ್ತಿ ಗೌರವ, ಸಮಪಾಲು ಎಂಬಂತೆ ಸಮಾಜದಲ್ಲಿ ಎಲ್ಲರನ್ನು ಗೌರವದಿಂದ ಕಾಣುವ ಜೊತೆಗೆ ಜಾತಿಭೇದ ಮಾಡಬಾರದು ಎಂದು ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ವಿ. ಹನುಮಂತಪ್ಪ ಕರೆ ನೀಡಿದರು.

ಅವರು ನಗರಸಭೆಯಲ್ಲಿ ಮಾನವ ಹಕ್ಕುಗಳ ದಿನಾಚರಣೆ ಅಂಗವಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ, ನಗರಸಭೆ ಹಾಗೂ ವಾರ್ತಾ ಇಲಾಖೆ ಇವರುಗಳ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾಗಿದ್ದ ಪೌರ ಕಾರ್ಮಿಕರಿಗಾಗಿ ಕಾನೂನು ಅರಿವು ಕಾರ್ಯಕ್ರಮವನ್ನು ಗಿಡಕ್ಕೆ ನೀರೆರೆಯುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಸಂವಿಧಾನದ ಪೀಠಿಕೆಯಲ್ಲಿ ಹೇಳಿರುವಂತೆ ಭಾರತದ ಪ್ರಜೆಗಳಾದ ನಾವು ಎಲ್ಲರೂ ಒಂದು ಎಂಬ ಮನೋಭಾವ ಮೂಡಬೇಕು, ವಿವಿಧತೆಯಲ್ಲಿ ಏಕತೆ, ಭಾಷೆ, ಭಿನ್ನವಾದ ಸಂಸ್ಕೃತಿ ಇವೆಲ್ಲವನ್ನು ಮೀರಿ ನಾವು ಭಾರತೀಯರು ಎಂಬ ಭಾವನೆ ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

ಸಂವಿಧಾನ ಶಿಲ್ಪಿ ಡಾ. ಬಿ.ಆರ್ ಅಂಬೇಡ್ಕರ್ ಸಂವಿಧಾನದಲ್ಲಿ ಈ ದೇಶದ ನಾಗರೀಕರಿಗೂ ಮೂಲಭೂತವಾದ ಸಾಕಷ್ಟು ಹಕ್ಕುಗಳನ್ನು ನೀಡಿ–ದ್ದಾರೆ. ಸಾಮಾಜಿಕ ನ್ಯಾಯ, ರಾಜಕೀಯ ನ್ಯಾಯ, ಆರ್ಥಿಕ ನ್ಯಾಯ ಎಂಬ ಮೂರು ನ್ಯಾಯಗಳನ್ನು ಉಲ್ಲೇಖಿಸಿದ್ದಾರೆಂದರು.

ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸ್ಪರ್ಧೆ ಮಾಡುವವರನ್ನು ಮತದಾರನ ಬಳಿಗೆ ಕರೆಸುವ ಮತದಾನ ಸಾರ್ವಜನಿಕರ ಒಂದೇ ಮೌಲ್ಯ ಇರುವ ಆಯುಧವಿದ್ದಂತೆ. ಇದು ರಾಜಕೀಯ ಸಮಾನತೆ ಎಂದ ಅವರು, ಇತ್ತೀಚೆಗೆ ಮದ್ಯಪಾನ ಮಾಡಿ ಮತದಾನ ಮಾಡುತ್ತಿರುವುದು ವಿಷಾಧನೀಯ ಎಂದರು.

ಪವಿತ್ರವಾದ ಮತದಾನ ತಾಯಿಯಂತೆ. ಅದನ್ನು ಐದು, ಹತ್ತು ಸಾವಿರಕ್ಕೆ ಹಾಗೂ ಉಡುಗೊರೆಗಳಿಗೆ ಮದ್ಯಪಾನಕ್ಕೆ ಮಾರಾಟ ಮಾಡಬಾರದು. ಇದು ಬದಲಾಗದಿದ್ದರೆ ಸಂವಿಧಾನದ ಆಶಯಗಳು ಬದಲಾಗಲು ಸಾಧ್ಯವಿಲ್ಲ ಎಂದು ಹೇಳಿದರು.

ಸ್ವಚ್ಚತೆ ಕಾಯಕ ಮಾಡುವವರು ಕೇವಲ ಕೆಲವೇ ಸಮುದಾಯದ ಜನರು ಮಾಡುತ್ತಿದ್ದಾರೆ. ಇಂತಹ ಕೆಲಸಕ್ಕೆ ನಗರಸಭೆಯಿಂದ ಅರ್ಜಿ ಆಹ್ವಾನಿಸಿದರೆ ಎಷ್ಟುಮಂದಿ ಅರ್ಜಿ ಸಲ್ಲಿಸುತ್ತೀರಿ ಎಂದು ಪ್ರಶ್ನಿಸಿದ ಅವರು, ಯಾರೂ ಅರ್ಜಿ ಸಲ್ಲಿಸುವುದಿಲ್ಲ. ತಾಯಿ ಸ್ಥಾನದಲ್ಲಿದ್ದು, ಸಮಾಜದ ಹೊಲಸನ್ನು ತೆಗೆದು ಸ್ವಚ್ಚತೆ ಕಾಯಕ ಮಾಡುತ್ತಿರುವವರು ಪೌರಕಾರ್ಮಿಕರು ಎಂದು ಶ್ಲಾಘಿಸಿದರು.


## ಡಿ.17 ರಂದು ಸುವರ್ಣಸೌಧದ ಎದುರು ಪ್ರತಿಭಟನೆ

**ದಾವಣಗೆರೆ:** ವಿಕಲಚೇತನರಿಗೆ ಪ್ರಸ್ತುತ ನೀಡುತ್ತಿರುವ ಮಾಸಾಶನವನ್ನು ಕನಿಷ್ಠ 5 ಸಾವಿರ ರೂ, ಗಳಿಗೆ ಹೆಚ್ಚಿಸುವುದು, ವಿಕಲಚೇತನರಿಗೆ ರಾಜಕೀಯ ಪ್ರಾತಿನಿಧ್ಯ, ಹಾಗೂ ವಿಕಲಚೇತನರ ಪ್ರತ್ಯೇಕ ನಿಗಮ ಮಂಡಳಿ ಸ್ಥಾಪನೆ ಮಾಡಬೇಕು ಎಂಬುದು ಸೇರಿದಂತೆ ಇತರೆ ಬೇಡಿಕೆಗಳಿಗೆ ಒತ್ತಾಯಿಸಿ ಕರ್ನಾಟಕ ರಾಜ್ಯ ವಿಕಲಚೇತನರ ಆರ್ ಪಿಡಿ ಟಾಸ್ಕ್ ಫೋರ್ಸ್ ಸಂಘಟನೆಯು ಡಿ.17 ರಂದು ಬೆಳಗಾವಿಯ ಸುವರ್ಣ ಸೌಧದ ಎದುರು ಪ್ರತಿಭಟನೆ ಹಮ್ಮಿಕೊಂಡಿದೆ.

ಕೇಂದ್ರ ಸರ್ಕಾರ ವಿಕಲಚೇತನರ ಹಕ್ಕುಗಳ ಕಾಯಿದೆ ಜಾರಿಗೊಳಿಸಿ 9 ವರ್ಷಗಳು ಕಳೆದರು ಕರ್ನಾಟಕ ರಾಜ್ಯ ಸರ್ಕಾರದ ಇಚ್ಛಾಶಕ್ತಿ ಕೊರತೆಯಿಂದ ಕಾಯಿದೆ ಸಂಪೂರ್ಣವಾಗಿ ಜಾರಿಗೆ ಬರದ ಕಾರಣ ವಿಕಲಚೇತನರು ಶೈಕ್ಷಣಿಕ, ಸಾಮಾಜಿಕ, ಆರ್ಥಿಕ ಹಾಗೂ ರಾಜಕೀಯವಾಗಿ ಮುಖ್ಯವಾಹಿನಿಗೆ ಬರುವಲ್ಲಿ ಸಾಧ್ಯವಾಗಿಲ್ಲ ಎಂದು ಸಂಘಟನೆಯ ರಾಜ್ಯ ಗೌರವಾಧ್ಯಕ್ಷರಾದ ಎಂ. ವಿಜಯಲಕ್ಷ್ಮಿ ಪತ್ರಿಕಾ ಹೇಳಿಕೆಯಲ್ಲಿ ಬೇಸರ ಹೊರಹಾಕಿದ್ದಾರೆ.

## ಹೊನ್ನಾಳಿ ಪಟ್ಟಣದಲ್ಲಿ ಬೆಳ್ಳಂಬೆಳಗ್ಗೆ ಜೆಸಿಬಿ ಸದ್ದು ಜೋರು

# ಕಟ್ಟಡ ತೆರವುಗೊಳಿಸಲಿಕ್ಕೆ ಕೂಡಿ ಬಂತು ಮುಹೂರ್ತ









**ವರದಿ : ಬಿ.ಸಿ.ಪವಿತ್ರ ಮಲ್ಲೇಶ್**

**ಹೊನ್ನಾಳಿ :** ಪಟ್ಟಣದಲ್ಲಿ ನಡೆಯುತ್ತಿರುವ ಗದಗ ಟು ಹೊನ್ನಾಳಿ ಚತುಷ್ಪಥ ರಸ್ತೆ ಅಗಲಿಕರಣ ಕಾರ್ಯದ ಹಿನ್ನಲೆಯಲ್ಲಿ ಗುರುವಾರ ಬೆಳ್ಳಂಬೆಲಗ್ಗೆ ಜೆಸಿಬಿ ಸದ್ದು ಜೋರಾಗಿತ್ತು, ಈಗಾಗಲೆ ರಸ್ತೆ ಅಗಲಿಕರಣಕ್ಕೆ ಸಂಬಂಧ ಪಟ್ಟ ಕಟ್ಟಡ ಮಾಲೀಕರಿಗೆ ಪರಿಹಾರ ನೀಡಲಾಗಿತ್ತು ಕೆಲವರು ಮಾಲೀಕರು ಮಾತ್ರ ತಮ್ಮ ಕಟ್ಟಡವನ್ನೇ ತಾವೇ ಹೊಡೆದು ಕೊಂಡಿದ್ದರು.

ಇನ್ನೂ ಕೆಲವು ಹೊಡೆದುಕೊಂಡಿರಲಿಲ್ಲ. ಬಹುಮುಖ್ಯವಾಗಿ ಖಾಸಗಿ ಬಸ್ ನಿಲ್ದಾಣ ಸಮೀಪ ಇರುವ ಪುರಸಭೆಗೆ ಸೇರಿದ್ದ ವಾಣಿಜ್ಯ ಮಳಿಗೆಗಳನ್ನು ಸಹ ತೆರವುಗೊಳಿಸಬೇಕಿತ್ತು, ಅದಕ್ಕೂ ಗುರುವಾರವೇ ಕಟ್ಟಡಗಳನ್ನು ತೆರವುಗೊಳಿಸಲಿಕ್ಕೆ ಮುಹರ್ತ ಕೂಡಿ ಬಂದಿತು, ಹಿಂದಿನ ದಿನ ಅಂ–ದರೆ ಬುಧವಾರವೇ ಹೊನ್ನಾಳಿ ಉಪವಿಭಾಗಾಧಿಕಾರಿ ಎಚ್.ಬಿ.ಚನ್ನಪ್ಪ,ತಹಸೀಲ್ದಾರ್ ರಾಜೇಶ್ ಕುಮಾರ್,ಪೊಲೀಸ್ ಇನ್ಸ್‌ಪೆಕ್ಟರ್ ಸುನಿಲ್‌ಕುಮಾರ್ ತುಮ್ಮಿನಕಟ್ಟೆ ರಸ್ತೆ ರಾಜ ಮಾರ್ಗ ಹಾಗೂ ಖಾಸಗಿ ಪುರಸಭೆಗೆ ಸೇರಿದ್ದ ಮಳಿಗೆಯಲ್ಲಿರುವ ವರ್ತಕರಿಗೆ ಗುರುವಾರ ಕಟ್ಟಡ ತೆರವು ಮಾಡುತ್ತೇನೆ ನಿಮ್ಮ ಶಾಪ್‌ಗಳಲ್ಲಿರುವ ನಿಮ್ಮ ನಿಮ್ಮ ಸರಕು ಸಾಮಾನುಗಳನ್ನು ತೆಗೆದುಕೊಳ್ಳಿ ಎಂದು ತಿಳಿಸಿದ್ದರು.

ಗುರುವಾರ ಬೆಳ್ಳಂ ಬೆಳಗ್ಗೆ ಹೊನ್ನಾಳಿ ಉಪವಿಭಾಗಾಧಿಕಾರಿ ಎಚ್.ಬಿ.ಚನ್ನಪ್ಪ,ತಹಸೀಲ್ದಾರ್ ರಾಜೇಶ್‌ಕುಮಾರ್ ,ಪೊಲೀಸ್ ಇನ್ಸ್‌ಪೆಕ್ಟರ್ ಸುನಿಲ್‌ಕುಮಾರ್ ನೇತೃತ್ವದಲ್ಲಿ ಕೆಶಿಪ್ ಅಧಿಕಾರಿಗಳು ಕಟ್ಟಡಗಳನ್ನು ತೆರವು ಮಾಡಿಸಿದ್ದರು. ಈ ನಡುವೆ ಯಾವುದೇ ವಿರೋಧ ವ್ಯಕ್ತವಾಗಲಿಲ್ಲ. ಇದರ ಮಧ್ಯ ಬಯಲು ಸೀಮೆ ನಿಗಮದ ಅಧ್ಯಕ್ಷ ಎಚ್.ಬಿ.ಮಂಜಪ್ಪ ಅವರು ಸ್ಥಳಕ್ಕೆ ಧಾವಿಸಿ ಪರಿಶೀಲಿಸಿ.ನಾನು ಪಟ್ಟಣ ಪಂಚಾಯಿತಿ ಅಧ್ಯಕ್ಷನಾಗಿದ್ದಾಗ ಇಲ್ಲಿ ಗೂಡಂಗಡಿಗಳನ್ನು ತೆರವು ಮಾಡಿಸಿ ಖಾಸಗಿ ಬಸ್ ನಿಲ್ದಾಣ ಹಾಗೂ ಮಳಿಗೆಗಳನ್ನು ನಿರ್ಮಿಸಿದ್ದೆ ಎಂದರು.

ಏತ್ಮಧ್ಯೆ ಪುರಸಭೆಗೆ ಸೇರಿದ ಮಳಿಗೆಯಲ್ಲಿ ವ್ಯಾಪಾರ ಮಾಡುತ್ತಿರುವ ಕೆಲ ವರ್ತಕರು ಸ್ವಲ್ಪ ಜಾಗ ಬಿಟ್ಟು ಕಟ್ಟಡ ತೆರವು ಮಾಡಿ,ನಮಗೆ ಇದು ಬಿಟ್ಟರೆ ಬೇರೆ ಕಡೆ ಸ್ಥಳ ಇಲ್ಲ,ಇದು ಇಲ್ಲದಿದ್ದರೆ ನಮ್ಮ ಬದುಕು ಮೂರಾಬಟ್ಟೆಯಾಗುತ್ತೆ ಎಂದು ಬಯಲು ಸೀಮೆ ನಿಗಮದ ಅಧ್ಯಕ್ಷ ಎಚ್.ಬಿ.ಮಂಜಪ್ಪ ಹಾಗೂ ಉಪವಿಭಾಗಾಧಿಕಾರಿ ಎಚ್.ಬಿ.ಚನ್ನಪ್ಪ ಅವರ ಬಳಿ ಮನವಿ ಮಾಡಿದರು.

ಆಗ ಎಚ್.ಬಿ.ಮಂಜಪ್ಪ ಮತನಾಡಿ, ಈ ಮಳಿಗೆಗಳನ್ನೇ ನಂಬಿ ಕೆಲವರು ಬದುಕು ಸಾಗಿಸುತ್ತಿದ್ದಾರೆ ಯಾರಿಗೂ ತೊಂದರೆಯಾಗದಂತೆ ಸ್ವಲ್ಪ ಬಿಟ್ಟು ಕಟ್ಟಡ ತೆರವು ಮಾಡಿ ಎಂದು ಅಧಿಕಾರಿಗಳಿಗೆ ತಿಳಿಸಿದರು.

ಕೆಶಿಪ್ ಎಇಇ ಪರಮೇಶ್ವರನಾಯ್ಕ್ ಮಾತನಾಡಿ, ಮಧ್ಯ ರಸ್ತೆಯಿಂದ 11.5 ಮೀಟರ್‌ಗೆ ರಸ್ತೆ ಅಗಲೀಕರಣ ಮಾಡಲಾಗುವುದು.ಈಗಾಗಲೆ ಹೊನ್ನಾಳಿ ಪಟ್ಟಣದ ಏಕೆ ಕಾಲೋನಿಯಿಂದ ಸಂಗೊಳ್ಳಿ ರಾಯಣ್ಣ ವೃತ್ತದವರೆಗೆ ಬರುವ ಎಲ್ಲಾ ಕಟ್ಟಡಗಳಿಗೆ ಈಗಾಗಲೆ ಪರಿಹಾರ ಘೋಷಣೆ ಮಾಡಿ ಪರಿಹಾರವೂ ಎರಡು ಕಂತುಗಳಲ್ಲಿ ವಿತರಣೆಯಾಗಿದೆ. ಈ ಮಧ್ಯೆ ಒಂದೆರಡು ಕಟ್ಟಡದ ಮಾಲೀಕರು ನ್ಯಾಯಾಲಯಕ್ಕೆ ಹೋಗಿದ್ದಾರೆ,ಅದೂ ಸಹ ಶೀಘ್ರವೇ ಪರಿಹಾರ ಆಗುತ್ತೆ ಎಂದರು.

ಪುರಸಭೆ ಅಧ್ಯಕ್ಷ ಮೈಲಪ್ಪ ಅವರ ಅಧ್ಯಕ್ಷತೆಯಲ್ಲಿ ಪುರಸಭೆಗೆ ಸೇರಿದ್ದ ಕೆಲವು ಮಳಿಗೆಗಳನ್ನು ತೆರವುಗೊಳಿಸುವುದಕ್ಕೆ ಸಭೆಯಲ್ಲೇ ತೀರ್ಮಾನ ಮಾಡಿ ಸಭಾ ನಡವಳಿಕೆಯಲ್ಲಿ ಎಲ್ಲರೂ ಸಹಿ ಮಾಡಿದ್ದೇವೆ,ಈಗ ನೋಡಿದರೆ ಅರ್ಧಂಬರ್ಧ ಕಟ್ಟಡವನ್ನು ತೆರವುಗೊಳಿಸಿದರೆ ಹೇಗೆ ಎಂದು ಪುರಸಭಾ ಮಾಜಿ ಸದಸ್ಯ ಹೊಸಕೇರಿ ಸುರೇಶ್ ಪ್ರಶ್ನಿಸಿದರು.

ಪತ್ರಕರ್ತರೊಂದಿಗೆ ಮಾತನಾಡಿದ ಅವರು,ಒಬ್ಬರಿಗೆ ಸುಣ್ಣ.ಒಬ್ಬರಿಗೆ ಬೆಣ್ಣೆ ಏಕೆ, ರಸ್ತೆಗೆ ಹೊಂದಿಕೊಂಡಿರುವ ಎಲ್ಲಾ ಮಳಿಗೆಗಳನ್ನು ತೆರವುಗೊಳಿಸಿ,ಇಲ್ಲದಿದ್ದರೆ ನಾವು ಶುಕ್ರವಾರದಿಂದ ಪ್ರತಿಭಟನೆ ಮಾಡುತ್ತೇವೆ ಹಾಗು ತೆರವುಗೊಂಡ ಮಳಿಗೆಗಳ ಮುಂದೆ ಅದೇ ಮಳಿಗೆಯ ವರ್ತಕರಿಗೆ ವ್ಯಾಪಾರ ಮಾಡಲು ಅನುವು ಮಾಡಿಕೊಡಬೇಕಾಗುತ್ತದೆ ಎಂದು ವಿಭಾಗಾಧಿಕಾರಿಗಳಿಗೆ ತಿಳಿಸಿದ್ದೇವೆ ಎಂದರು.

ಈಗಾಗಲೆ ಪುರಸಭೆ ಕಟ್ಟಡದಲ್ಲಿರುವ ಕೆಲ ಮಳಿಗೆಗಳು ಶಿಥಿಲಗೊಂಡಿದೆ,ಈಗ ತೆರವು ಮಾಡಿರುವ ಮಳಿಗೆಗಳ ಪಕ್ಕದ ಕಟ್ಟಡಗಳು ಬಿರುಕು ಬಿಟ್ಟಿರುತ್ತದೆ,ಇಂತಹ ಕಟ್ಟಡಗಳಲ್ಲಿ ಹೇಗೆ ಅಲ್ಲೇ ಇರುವವರು ವ್ಯಾಪಾರ ಮಾಡಲಿಕ್ಕೆ ಸಾಧ್ಯ ಎಂದು ಪ್ರಶ್ನಿಸಿದರು.

ಹೊನ್ನಾಳಿ ಉಪವಿಭಾಗಾಧಿಕಾರಿ ಎಚ್.ಬಿ.ಚನ್ನಪ್ಪ, ತಹಸೀಲ್ದಾರ್ ರಾಜೇಶ್‌ಕುಮಾರ್, ಪೊಲೀಸ್ ಇನ್ಸ್‌ಪೆಕ್ಟರ್ ಸುನಿಲ್‌ಕುಮಾರ್,ಪುರಸಭಾ ಮುಖ್ಯಾಧಿಕಾರಿ ಲೀಲಾವತಿ,ಇಂಜಿನಿಯರ್ ದೇವರಾಜ್,ಪಿಎಸ್‌ಐ ಕುಮಾರ್,ಎಎಸ್‌ಐ ಹರೀಶ್,ಕೆಶಿಪ್ ಅಧಿಕಾರಿಗಳಾದ ಪರಮೇಶ್ವರ್ ನಾಯ್ಕ್,ಮಂಜುನಾಥ್,ಜೆಇ ಶಶಿಕಲಾ ಹಾಗೂ ಇತರರು ಇದ್ದರು.

### ಪುರಸಭೆಗೆ ಸೇರಿದ ಮಳಿಗೆಗಳನ್ನು ಪೂರ್ಣ ಹೊಡೆಯಿರಿ

ಸಂಗೊಳ್ಳಿ ರಾಯಣ್ಣ ವೃತ್ತದ ಹಿಂಭಾದಿ ಹಾಗೂ ಖಾಸಾಗಿ ಬಸ್ ನಿಲ್ದಾಣದ ಎಡಬಾಗದಲ್ಲಿ ಐದು ಮಳಿಗೆಗಳನ್ನು ಬಿಟ್ಟು ಉಳಿದ ಮಳಿಗೆಗಳನ್ನು ತೆರವು ಮಾಡಿರುವುದಕ್ಕೆ ಸಾರ್ವಜನಿಕರಿಂದ ಅಕ್ಷೇಪ ವ್ಯಕ್ತವಾಗುತ್ತಿದೆ ಸಂಗೊಳ್ಳಿ ರಾಯಣ್ಣ ವೃತ್ತದಲ್ಲಿರು ಎಲ್ಲಾ ಮಳಿಗೆಗಳನ್ನು ತೆರವುಗೊಳಿಸಿದರೆ ಬಸ್ ನಿಲ್ದಾಣದ ಅಂದ ಹೆಚ್ಚಾಗುತ್ತದೆ ಅದ್ದರಿಂದ ಎಲ್ಲಾ ಮಳಿಗೆಗಳನ್ನು ತೆರವು ಗೋಳಿಸಬೇಕು ಎಂದು ಸರ್ವಾಜನಿಕರು ಒತ್ತಾಯಿಸುತಿದ್ದಾರೆ.

**ಬಿಗಿ ಪೊಲಿಸ್ ಬಂದೋಬಸ್ತ್;** ಹೊನ್ನಾಳಿ ಪಟ್ಟಣದಲ್ಲಿ ಪರುಸಭೆ ವ್ಯಾಪ್ತಿಯಲ್ಲಿರುವ ಕಟ್ಟಡಗಳನ್ನು ತೆರವು ಕಾರ್ಯ ಪ್ರಾರಂಭ ವಾಗುತ್ತಿದ್ದಂತೆ ಪೊಲಿಸ್‌ಇನ್ಸ್‌ಪೆಕ್ಟರ್ ಸುನಿಲ್ ಕುಮಾರ್ ನೇತೃತ್ವದಲ್ಲಿ ಬಸವಪಟ್ಟಣ,ಹೊನ್ನಾಳಿ ಹಾಗೂ ನ್ಯಾಮತಿ ಪೊಲೀಸರು ಬಿಗಿ ಬಂದೋಬಸ್ತ್ ಮಾಡಿದ್ದರು. ಡಿಆರ್‌ಎ ಕೂಡ ಸ್ಥಳದಲ್ಲಿ ಮೊಕ್ಕಾಂ ಮಾಡಿತ್ತು.

# ಎಸ್ಸೆಸ್, ಎಸೆಸ್ಸೆಂ, ಅಧಿಕಾರಾವಧಿಯಲ್ಲಿ ನಗರ, ಜಿಲ್ಲೆ ಸಾಕಷ್ಟು ಅಭಿವೃದ್ಧಿಯಾಗಿದೆ : ನಗರಸಭೆ ಮಾಜಿ ಅಧ್ಯಕ್ಷ ಆರ್.ಹೆಚ್.ನಾಗಭೂಷಣ

**ದಾವಣಗೆರೆ:** ಜಿಲ್ಲೆಯ ಅಭಿವೃದ್ಧಿಗೆ ಶ್ರಮಿಸುತ್ತಿರುವ ಶಾಮನೂರು ಕುಟುಂಬದ ವಿರುದ್ಧ ಬಿಜೆಪಿ ಮುಖಂಡರು ಸುಳ್ಳು ಆರೋಪ ಮಾಡುವುದನ್ನು ನಿಲ್ಲಿಸಬೇಕು ಎಂದು ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡ, ನಗರಸಭೆ ಮಾಜಿ ಅಧ್ಯಕ್ಷ ಆರ್.ಹೆಚ್.ನಾಗಭೂಷಣ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶಾಸಕ ಶಾಮನೂರು ಶಿವಶಂಕರಪ್ಪ, ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಅಧಿಕಾರಾವದಿಯಲ್ಲಿ ನಗರ, ಜಿಲ್ಲೆ ಸಾಕಷ್ಟು ಅಭಿವೃದ್ಧಿಯಾಗಿದೆ. ಮುಂದಿನ 50 ವರ್ಷ ಗಮನದಲ್ಲಿಟ್ಟುಕೊಂಡು, ನಗರವನ್ನು ಅಭಿವೃದ್ಧಿಪಡಿಸುವ ಜೊತೆಗೆ 15 ಸಾವಿರಕ್ಕೂ ಅಧಿಕ ಆಶ್ರಯ ಮನೆ ಕೊಡುವ ಮೂಲಕ ಸಚಿವ ಮಲ್ಲಿಕಾರ್ಜುನ್ ಲಕ್ಷಾಂತರ ಜನರಿಗೆ ನೆಮ್ಮದಿಯ ಬದುಕು ಕಟ್ಟಿಕೊಟ್ಟಿದ್ದಾರೆ ಎಂದರು.

ಜೆಜೆಎಂ ಮೆಡಿಕಲ್ ಕಾಲೇಜು ಮಾತ್ರವಿದ್ದ ಬಾಪೂಜಿ ವಿದ್ಯಾಸಂಸ್ಥೆಯು ಇವರ ಕೈಗೆ ಬಂದ ನಂತರ 52ಕ್ಕೂ ಅಧಿಕ ಶಾಲಾ–ಕಾಲೇಜು ಹೊಂದಿ ನಗರಕ್ಕೆ ವಿದ್ಯಾಕಾಶಿ ಎಂಬ ಹೆಸರು ತಂದುಕೊಟ್ಟಿದೆ. ಸಂಸ್ಥೆಯಲ್ಲಿ 18 ಸಾವಿರಕ್ಕೂ ಹೆಚ್ಚು ನೌಕರರಿಗೆ ಉದ್ಯೋಗ ನೀಡಿದ್ದಾರೆ. ಇಂತಹ ಕುಟುಂಬದ ಬಗ್ಗೆ ಬಿಜೆಪಿಯ ಯಶವಂತರಾವ್ ಜಾಧವ್ ಆರೋಪ ಮಾಡುವುದನ್ನು ಕೈಬಿಡಬೇಕು ಎಂದರು.

ನಾಲ್ಕು ಸಲ ಶಾಸಕರಾಗಿ, ಮೂರು ಸಲ ಸಚಿವರಾಗಿರುವ ಎಸ್.ಎಸ್.ಮಲ್ಲಿಕಾರ್ಜುನ ಅಭಿವೃದ್ಧಿಗೆ ಮತ್ತೊಂದು ಹೆಸರು ಎಂದರೂ ಅತಿಶಯೋಕ್ತಿಯಲ್ಲ. ದಾವಣಗೆರೆ ನಗರ, ಜಿಲ್ಲೆಯ ಅಭಿವೃದ್ಧಿಗೆ ಕಂಕಣಬದ್ಧರಾದ ಇವರು ಜಿಲ್ಲಾ ಕೇಂದ್ರವನ್ನು ಮಾದರಿಯಾಗಿ ಅಭಿವೃದ್ಧಿಪಡಿಸಿದ್ದಾರೆ. ಸ್ವತಃ ಬಿಜೆಪಿಯ ಅನೇಕ ನಾಯಕರು ಮಲ್ಲಿಕಾರ್ಜುನರ ಅಭಿವೃದ್ಧಿ ಕೆಲಸಗಳನ್ನು ಶ್ಲಾಘಿಸುತ್ತಾರೆ. ಸರ್ವ ಜಾತಿ, ಧರ್ಮೀರನ್ನೂ ಒಗ್ಗೂಡಿಸಿಕೊಂಡು ಅಭಿವೃದ್ಧಿ ಕಾರ್ಯ ಕೈಗೊಂಡಿರುವ ಇಂತಹವರ ಬಗ್ಗೆ ಯಶವಂತರಾವ್ ಸುಳ್ಳು ಆರೋಪ ಮಾಡುತ್ತಿರುವುದು ಬೇಸರ ತಂದಿದೆ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು.

ಶಾಮನೂರು ಶಿವಶಂಕರಪ್ಪ, ಎಸ್.ಎಸ್. ಮಲ್ಲಿಕಾರ್ಜುನ ಶಾಸಕ, ಸಚಿವರಾಗುವ ಮುನ್ನ ನಗರದ ಒಂದೇ ಒಂದು ರಸ್ತೆಯೂ ಸರಿಯಾಗಿರಲಿಲ್ಲ. ಇದೀಗ ಜಿಲ್ಲೆಯಾದ್ಯಂತ ಸಿಮೆಂಟ್ ರಸ್ತೆಗಳು, ಆಕರ್ಷಕ ಬೀದಿದೀಪ, ಪೊಲೀಸ್ ವಸತಿಗೃಹ, ಕೆರೆಗಳ ಅಭಿವೃದ್ಧಿ ಹೀಗೆ ಅಸಂಖ್ಯ ಕೆಲಸಗಳಾಗಿವೆ. ಇನ್ನಾದರೂ ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಯಶವಂತರಾವ್ ಜಾಧವ್ ಸುಳ್ಳು ಆರೋಪ, ದ್ವೇಷ ರಾಜಕಾರಣ ಕೈಬಿಟ್ಟು, ಜಿಲ್ಲೆಯ ಅಭಿವೃದ್ಧಿಗೆ ಸಹಕರಿಸಲಿ ಎಂದು ಅವರು ಸಲಹೆ ನೀಡಿದರು.

ಪಕ್ಷದ ಉತ್ತರ ಬ್ಲಾಕ್ ಅಧ್ಯಕ್ಷ ಕೆ.ಜಿ.ಶಿವಕುಮಾರ, ಜಿಲ್ಲಾ ಕಾರ್ಯದರ್ಶಿ ಎಸ್.ಮಲ್ಲಿಕಾರ್ಜುನ, ಮುಖಂಡರಾದ ಮಂಗಳಮ್ಮ, ಆನಗೋಡು ನಾಗರಾಜ, ನಿಟುವಳ್ಳಿ ಪ್ರವೀಣ, ಪರಶುರಾಮ, ವಿಜಯಕುಮಾರ, ನೂರುಲ್ಲಾ, ಹನುಮಂತರಾಜ ಮತ್ತಿತರರು ಸುದ್ದಿಗೋಷ್ಠಿಯಲ್ಲಿದ್ದರು.

# ಡಿ.21 ರಿಂದ 24ರವರೆಗೆ ರಾಷ್ಟ್ರೀಯ ಪಲ್ಸ್ ಪೋಲಿಯೊ ಲಸಿಕಾ ಕಾರ್ಯಕ್ರಮ



**ಚಿಕ್ಕಮಗಳೂರು:** ಜಿಲ್ಲೆಯಲ್ಲಿ ಇದೇ ಡಿಸೆಂಬರ್ 21 ರಿಂದ 24ರವರೆಗೆ ರಾಷ್ಟ್ರೀಯ ಪಲ್ಸ್ ಪೋಲಿಯೊ ಕಾರ್ಯಕ್ರಮ ನಡೆಯಲಿದ್ದು, ಐದು ವರ್ಷದೊಳಗಿನ ಎಲ್ಲಾ ಮಕ್ಕಳಿಗೂ ಪಲ್ಸ್ ಪೋಲಿಯೊ ಲಸಿಕೆ ಹಾಕಿಸುವಂತೆ ಜಿ.ಪಂ. ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಹೆಚ್.ಎಸ್. ಕೀರ್ತನಾ ತಿಳಿಸಿದ್ದಾರೆ.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಿನ್ನೆ ರಾಷ್ಟ್ರೀಯ ಪಲ್ಸ್ ಪೋಲಿಯೊ ಲಸಿಕಾ ಕಾರ್ಯಕ್ರಮ ಆಯೋಜಿಸುವ ಸಂಬಂಧ ನಡೆದ ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಇದೇ ಡಿಸೆಂಬರ್ 21 ರಂದು ಬೂತ್ ಮಟ್ಟದಲ್ಲಿ ಪಲ್ಸ್ ಪೋಲಿಯೊ ಲಸಿಕಾ ಕಾರ್ಯಕ್ರಮ ನಡೆಯಲಿದ್ದು, ಡಿಸೆಂಬರ್ 22 ರಿಂದ 23 ರವರೆಗೆ ಗ್ರಾಮೀಣ ಪ್ರದೇಶದಲ್ಲಿ ಹಾಗೂ ಡಿಸೆಂಬರ್ 22 ರಿಂದ 24ರವರೆಗೆ ನಗರ ಪ್ರದೇಶದ ಬೂತ್‌ಗಳಲ್ಲಿ ಬಿಟ್ಟು ಹೋದ ಮಕ್ಕಳಿಗೆ ಮನೆ ಮನೆಗೆ ಭೇಟಿ ನೀಡಿ ಪಲ್ಸ್ ಪೋಲಿಯೊ ಹನಿ ಹಾಕಲಾಗುವುದು. ಅದರಂತೆ ಡಿಸೆಂಬರ್ 21 ರಿಂದ 24ರವರೆಗೆ ವಿಶೇಷ ಪ್ರದೇಶಗಳು ಹಾಗೂ ಟ್ರಾನ್ಸಿಟ್ ಸ್ಥಳಗಳಲ್ಲಿ ಈ ಕಾರ್ಯಕ್ರಮ ನಡೆಯಲಿದೆ. ಯಾವುದೇ ಅರ್ಹ ಮಗು ಈ ಲಸಿಕೆಯಿಂದ ವಂಚಿತವಾಗದಂತೆ ನಿಗಾ ವಹಿಸಲು ಅಧಿಕಾರಿಗಳಿಗೆ ಸೂಚಿಸಿದರು.

ಪಲ್ಸ್ ಪೋಲಿಯೊ ಕಾರ್ಯಕ್ರಮಕ್ಕೆ ಸಂಬಂಧಿಸಿದ ತಂಡಗಳು ಪರಸ್ಪರ ಸಮನ್ವಯತೆಯಿಂದ ಕಾರ್ಯ ನಿರ್ವಹಿಸಬೇಕು. ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಆರ್‌ಸಿಹೆಚ್ ಅಧಿಕಾರಿಗಳು, ತಹಸೀಲ್ದಾರರು, ಅಂಗನವಾಡಿ ಕಾರ್ಯಕರ್ತೆಯರು, ಆರೋಗ್ಯ ಇಲಾಖೆ ಅಧಿಕಾರಿ, ಸಿಬ್ಬಂದಿಗಳು, ಗ್ರಾಮೀಣ ಪ್ರದೇಶಗಳಲ್ಲಿ ಪಿ.ಡಿ.ಒ.ಗಳು ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳ ತಂಡ ಸಮನ್ವಯತೆಯಿಂದ ಕಾರ್ಯ ನಿರ್ವಹಿಸಿ 0.5 ವರ್ಷದೊಳಗಿನ ಮಕ್ಕಳು ಪಲ್ಸ್ ಪೋಲಿಯೊ ಲಸಿಕೆಯಿಂದ ವಂಚಿತರಾಗದಂತೆ ನಿಗಾ ವಹಿಸಬೇಕು ಎಂದ ಅವರು, ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ, ಜನನಿಬಿಡ ಸ್ಥಳಗಳು, ದೂರದ ಪ್ರದೇಶ, ವಲಸಿಗ ಕಾರ್ಮಿಕರ ಮಕ್ಕಳು, ಜಿಲ್ಲೆಗೆ ಆಗಮಿಸುವ ಕಾರ್ಮಿಕರ ಹಾಗೂ ವಿವಿಧ ಸಮುದಾಯ ವ್ಯಾಪ್ತಿಯಲ್ಲಿನ ಮಕ್ಕಳನ್ನು ಗುರುತಿಸಿ ಲಸಿಕೆ ಹಾಕಬೇಕು ಎಂದರು.

ಪಲ್ಸ್ ಪೋಲಿಯೊ ಕಾರ್ಯಕ್ರಮದ ಬಗ್ಗೆ ಶಾಲಾ ಮಕ್ಕಳ ಮೂಲಕ ಜಾಗೃತಿ ಜಾಥಾ, ಪಾಲಕರಲ್ಲಿ ಅರಿವು, ಶಿಕ್ಷಕರ ಮೂಲಕ ಮಕ್ಕಳಿಗೆ ಲಸಿಕೆ ಹಾಕಿಸಲು ಅರಿವು ಮೂಡಿಸುವ ಮೂಲಕ ಅಗತ್ಯ ಕ್ರಮ ಕೈಗೊಳ್ಳಬೇಕು.

ಲಸಿಕಾ ಸಿಬ್ಬಂದಿಗಳಿಗೆ ಸೂಕ್ತ ವಾಹನದ ವ್ಯವಸ್ಥೆ ಮಾಡುವಂತೆ ಹಾಗೂ ಬೂತ್‌ಗಳಿಗೆ ನಿರಂತರ ವಿದ್ಯುತ್ ಸಂಪರ್ಕ ಕಲ್ಪಿಸುವಂತೆ ತಿಳಿಸಿದರು.

ಜಿಲ್ಲೆಯಲ್ಲಿ ಈ ರಾಷ್ಟ್ರೀಯ ಪಲ್ಸ್ ಪೋಲಿಯೊ ಕಾರ್ಯಕ್ರಮದಲ್ಲಿ 0.5 ವರ್ಷದೊಳಗಿನ 92,230 ಮಕ್ಕಳಿಗೆ ಲಸಿಕೆ ಹಾಕುವ ಗುರಿ ಹೊಂದಲಾಗಿದೆ. ಇದಕ್ಕಾಗಿ ಗ್ರಾಮೀಣ ಪ್ರದೇಶದಲ್ಲಿ 784 ಸ್ಥಿರ ಬೂತ್‌ಗಳು, ನಗರ ಪ್ರದೇಶದಲ್ಲಿ 82 ಸ್ಥಿರ ಬೂತ್‌ಗಳನ್ನು ಗುರುತಿಸಲಾಗಿದೆಯಲ್ಲದೆ, ನಗರ ಪ್ರದೇಶದಲ್ಲಿ 17 ಮತ್ತು ಗ್ರಾಮೀಣ ಪ್ರದೇಶದಲ್ಲಿ 24 ಬೂತ್‌ಗಳನ್ನು ಟ್ರಾನ್ಸಿಟ್ ಪಾಯಿಂಟ್‌ಗಳೆಂದು ಗುರುತಿಸಿದ್ದು, ನಗರ ಪ್ರದೇಶದಲ್ಲಿ 2 ಮತ್ತು ಗ್ರಾಮೀಣ ಪ್ರದೇಶದಲ್ಲಿ 72 ಮೊಬೈಲ್ ಟೀಮ್‌ಗಳನ್ನು ರಚಿಸಲಾಗಿದೆ. ಕಾರ್ಯಕ್ರಮದ ಮೇಲ್ವಿಚಾರಣೆಗಾಗಿ ನಗರ ಪ್ರದೇಶದಲ್ಲಿ 19, ಗ್ರಾಮೀಣ ಪ್ರದೇಶದಲ್ಲಿ 177 ಮೇಲ್ವಿಚಾರಕರನ್ನು ನೇಮಿಸಲಾಗಿದೆ.

ಲಸಿಕಾ ಕಾರ್ಯಕ್ರಮದಲ್ಲಿ ಲಸಿಕೆ ನೀಡಲು ನಗರ ಪ್ರದೇಶಕ್ಕೆ 392, ಗ್ರಾಮೀಣ ಪ್ರದೇಶಕ್ಕೆ 3368 ಲಸಿಕಾ ಕಾರ್ಯಕರ್ತರನ್ನು ನೇಮಿಸಲಾಗಿದೆ ಎಂದ ಅವರು, ಸಾರ್ವಜನಿಕರು ತಮ್ಮ 0.5 ವರ್ಷದೊಳಗಿನ ಮಕ್ಕಳಿಗೆ ತಪ್ಪದೆ ಪಲ್ಸ್ ಪೋಲಿಯೊ ಲಸಿಕಾ ಬೂತ್‌ಗಳಿಗೆ ತೆರಳಿ ಹನಿ ಹಾಕಿಸುವಂತೆ ಹೇಳಿದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಅಶ್ವತ್ಥಬಾಬು, ಜಿಲ್ಲಾ ಆರ್.ಸಿ.ಹೆಚ್. ಅಧಿಕಾರಿ ಡಾ.ಮಂಜುನಾಥ್, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಬಾಲಕೃಷ್ಣ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಭರತ್, ಜಿಲ್ಲಾ ಕ್ಷಯ ರೋಗ ನಿಯಂತ್ರಣಾಧಿಕಾರಿ ಡಾ.ಹರೀಶ್ ಬಾಬು, ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ.ಶಶಿಕಲಾ, ಚಿಕ್ಕಮಗಳೂರು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಸೀಮಾ ಸೇರಿದಂತೆ ಎಲ್ಲಾ ತಾಲ್ಲೂಕುಗಳ ತಾಲ್ಲೂಕು ಆರೋಗ್ಯಾಧಿಕಾರಿಗಳು ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ಪ.ಜಾ. ಪತ್ರಿಕೋದ್ಯಮ ವಿದ್ಯಾರ್ಥಿಗಳಿಂದ ಅಪ್ರೆಂಟಿಸ್‌ಶಿಪ್ ತರಬೇತಿಗೆ ಅರ್ಜಿ ಆಹ್ವಾನ

**ಶಿವಮೊಗ್ಗ:** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು 2025–26ನೇ ಸಾಲಿನ ಪರಿಶಿಷ್ಟ ಜಾತಿ ವಿಶೇಷ ಘಟಕ ಯೋಜನೆಯಡಿ ಜಿಲ್ಲಾ ಕಚೇರಿಯಲ್ಲಿ ಕ್ಷೇತ್ರ ಪ್ರಚಾರ ಕಾರ್ಯಕ್ರಮ ಹಾಗೂ ಮಾಧ್ಯಮ ಚಟುವಟಿಕೆಗಳ ನಿರ್ವಹಣೆ ಕುರಿತು ತರಬೇತಿ ಪಡೆಯಲಿಚ್ಛಿಸುವ ಪರಿಶಿಷ್ಟ ಜಾತಿಯ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ.

ತರಬೇತಿ ಪಡೆಯಲಿಚ್ಛಿಸುವ ಅಭ್ಯರ್ಥಿಯು ಪತ್ರಿಕೋದ್ಯಮ ಹಾಗೂ ಮಾಧ್ಯಮ ಕ್ಷೇತ್ರದ ವಿಷಯದಲ್ಲಿ ಪದವಿ/ಸ್ನಾತಕೋತ್ತರ ಪದವಿ ಪಡೆದವರಾಗಿರಬೇಕು. ಕನ್ನಡ, ಇಂಗ್ಲೀಷ್ ಭಾಷೆಯ ಓದು ಮತ್ತು ಬರಹ ಬಲ್ಲವರಾಗಿದ್ದು, ಕಂಪ್ಯೂಟರ್ ಜ್ಞಾನ ಹೊಂದಿದವರಾಗಿರಬೇಕು. ಜನವರಿ–2026 ರಿಂದ ಡಿಸೆಂಬರ್–2026ರವರೆಗಿನ 12 ತಿಂಗಳ ತರಬೇತಿ ಇದಾಗಿದ್ದು, ಪರಿಶಿಷ್ಟ ಜಾತಿಯ ಇಬ್ಬರು ಅಭ್ಯರ್ಥಿಗಳನ್ನು ಮೆರಿಟ್ ಹಾಗೂ ಸಂದರ್ಶನದ ಮೂಲಕ ಆಯ್ಕೆ ಮಾಡಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳಿಗೆ ಮಾಸಿಕವಾಗಿ 15,000/–ರೂ.ಗಳ ಶಿಷ್ಯವೇತನ ನೀಡಲಾಗುವುದು.

ಅಭ್ಯರ್ಥಿಗಳು ಶಿವಮೊಗ್ಗ ಜಿಲ್ಲೆಯವರಾಗಿರಬೇಕು. ಶಿವಮೊಗ್ಗ ಜಿಲ್ಲೆಯ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ನೆರೆಯ ಜಿಲ್ಲೆಯ ಅಭ್ಯರ್ಥಿಗಳನ್ನು ಪರಿಗಣಿಸಲಾಗುವುದು. ಆದರೆ ಆಯ್ಕೆಯಾದ ಅಭ್ಯರ್ಥಿಗಳಿಗೆ ಇಲಾಖೆಯಿಂದ ಯಾವುದೇ ರೀತಿ ವಾಸ್ತವ್ಯ/ವಸತಿ ನೀಡಲು ಅವಕಾಶವಿರುವುದಿಲ್ಲ. ಈ ಹಿಂದೆ ಅರ್ಜಿ ಸಲ್ಲಿಸಿ, ಆಯ್ಕೆಯಾಗಿ ತರಬೇತಿ ಪಡೆದ ಅಭ್ಯರ್ಥಿಗಳಿಗೆ ಅವಕಾಶವಿರುವುದಿಲ್ಲ.

ಅಸಕ್ತರು ತಮ್ಮ ಸ್ವವಿವರ ಹಾಗೂ ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿಯನ್ನು ದಿ:25/12/2025 ರೊಳಗಾಗಿ ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಸರ್.ಎಂ.ವಿ.ರಸ್ತೆ, ಶಿವಮೊಗ್ಗ–577201 ವಿಳಾಸಕ್ಕೆ ಸಲ್ಲಿಸಬಹುದಾಗಿದೆ. ಮಾಹಿತಿಗಾಗಿ ಇಲಾಖೆಯ ಮಿಂಚೆಂಚೆ: varthabhavansmg1@gmail.com ನ್ನು ಸಂಪರ್ಕಿಸಿ.

# ಜಾತಿ ಪ್ರಮಾಣ ಪತ್ರ ರದ್ದು

**ಶಿವಮೊಗ್ಗ:** ತೀರ್ಥಹಳ್ಳಿ ತಾಲೂಕು ಅಗ್ರಹಾರ ಹೋಬಳಿ, ಕೋಣಂದೂರು ಗ್ರಾಮ ವಾಸಿ ಕೆ.ಜೆ. ಉಮಾಕಾಂತ ಬಿನ್ ಗಂಗಪ್ಪ ಕೆ ಇವರು ಪರಿಶಿಷ್ಟ ಜಾತಿ "ಭೋವಿ" ಜಾತಿಯವರೆಂದು ಪಡೆದಿರುವ ಜಾತಿ ಪ್ರಮಾಣ ಪತ್ರವನ್ನು ತೀರ್ಥಹಳ್ಳಿ ತಾಲೂಕು ತಹಶೀಲ್ದಾರ್ ರಂಜಿತ್ ಎಸ್. ರವರು ರದ್ದುಪಡಿಸಿರುತ್ತಾರೆ.

ಅಡಿಷನಲ್ ಡೈರಕ್ಟರ್ ಜನರಲ್ ಆಫ್ ಪೊಲೀಸ್, ನಾಗರೀಕ ಹಕ್ಕು ಜಾರಿ ನಿರ್ದೇಶನಾಲಯ, ಬೆಂಗಳೂರು ಇವರುಗಳ ವರದಿ ಮತ್ತು ವಿಚಾರಣೆಗಳನ್ನಾಧರಿಸಿ ಕೆ.ಜೆ. ಉಮಾಕಾಂತ ಪ್ರವರ್ಗ–1ರಲ್ಲಿ ಬರುವ ಬೋವಿ (ಒಕ್ಕಲಿಗ) ಜಾತಿಗೆ ಸೇರಿದವರೆಂದು ದೃಢಪಟ್ಟಿರುವುದರಿಂದ ಅವರು ಪಡೆದಿರುವ ಪರಿಶಿಷ್ಟ ಜಾತಿ 'ಭೋವಿ' ಜಾತಿ ಪ್ರಮಾಣ ಪತ್ರವನ್ನು ರದ್ದುಪಡಿಸಲಾಗಿದೆ.

# ಇಂದು ಶ್ರೀ ಅಂಬಾಭವಾನಿ ಕಾರ್ತೀಕೋತ್ಸವ

**ದಾವಣಗೆರೆ:** ನಗರದ ಶಂಕರ ವಿಹಾರ ಬಡಾವಣೆಯ ಶ್ರೀ ಅಂಬಾಭವಾನಿ ದೇವಸ್ಥಾನದಲ್ಲಿ ಕಾರ್ತಿಕ ದೀಪೋತ್ಸವ ಕಾರ್ಯಕ್ರಮವು ಡಿ.12ರಂದು ದೇವಸ್ಥಾನದ ಆವರಣದಲ್ಲಿ ಜರುಗಲಿದೆ.

ಸಂಜೆ 6 ಗಂಟೆಗೆ ವಿಶೇಷ ಪೂಜಾ ಕಾರ್ಯಕ್ರಮದ ಮುಖೇನ ದೀಪೋತ್ಸವ ಪ್ರಾರಂಭಗೊಂಡು ದೇವಸ್ಥಾನದ ಆವರಣ ಹಾಗೂ ಗರ್ಭಗುಡಿಯ ಪ್ರಾಂಗಣದಲ್ಲಿ ರಾತ್ರಿ 8.30 ಕ್ಕೆ ಸಮಾಪನಗೊಳ್ಳಲಿದೆ ಎಂದು ಶ್ರೀ ಅಂಬಾಭವಾನಿ ದೇವಸ್ಥಾನ ಶಂಕರ್ ವಿಹಾರ ಬಡಾವಣೆಯ ಪ್ರಧಾನ ಕಾರ್ಯದರ್ಶಿ ಮಹೇಶ್ ಕೆ ಸೋಳಂಕಿ ತಿಳಿಸಿದ್ದಾರೆ.

# ಶ್ರೀ ದುರ್ಗಾಂಬಿಕಾ ಕಾರ್ತೀಕೋತ್ಸವ

**ದಾವಣಗೆರೆ:** ನಗರ ದೇವತೆ ಶ್ರೀ ದುರ್ಗಾಂಬಿಕಾ ದೇವಿ ಕಡೆ ಕಾರ್ತಿಕೋತ್ಸವ ಡಿ. 16ರಂದು ಜರುಗಲಿದೆ.

ಅಂದು ಬೆಳಗ್ಗೆ 6 ಗಂಟೆಗೆ ಶ್ರೀ ದುರ್ಗಾಂಬಿಕ ದೇವಿಗೆ ಅಭಿಷೇಕ ಬೆಳಗ್ಗೆ 9 ರಿಂದ ನಗರದ ಮುಖ್ಯ ಬೀದಿಗಳಲ್ಲಿ ಹೂವಿನ ಹಾರದ ಮೆರವಣಿಗೆ ನಂತರ ಶ್ರೀದೇವಿಗೆ ಹೂವಿನ ಹಾರದ ಅಲಂಕಾರ, ಮಹಾಪೂಜೆ, ಮಂಗಳಾರತಿ ನಡೆಯಲಿದೆ.

ಅಂದು ರಾತ್ರಿ 8:30ಕ್ಕೆ ದೇವಸ್ಥಾನ ಟ್ರಸ್ಟ್ ನ ಗೌರವಾಧ್ಯಕ್ಷರು ಹಾಗೂ ಶಾಸಕ ಶಾಮನೂರ್ ಶಿವಶಂಕರಪ್ಪ ಮತ್ತು ಟ್ರಸ್ಟ್ ಕಾರ್ಯಾಧ್ಯಕ್ಷ, ಜಿಲ್ಲಾ ಉಸ್ತುವಾರಿ ಸಚಿವ ಎಸ್‌ಎಸ್ ಮಲ್ಲಿಕಾರ್ಜುನ್ ಅವರು ಬಾಳೆಯ ದಿಂಡಿನಿಂದ ಅಲಂಕೃತವಾದ ಕದಲಿ ಪೂಜೆಯೊಂದಿಗೆ ಸುಮಾರು 101 ದೀಪಗಳಿರುವ ಕಂಬಗಳಿಂದ ದೀಪೋತ್ಸವಕ್ಕೆ ಚಾಲನೆ ನೀಡಲಿದ್ದಾರೆ. ಭಕ್ತಾದಿಗಳು ಕಾರ್ತಿಕೋತ್ಸವದಲ್ಲಿ ಪಾಲ್ಗೊಳ್ಳುವಂತೆ ಶ್ರೀ ದುರ್ಗಾಂಬಿಕಾ ದೇವಸ್ಥಾನ ಟ್ರಸ್ಟ್ ಕೋರಿದೆ.

# ಹೊರಟ್ಟಿ ವಿರುದ್ಧ ಭ್ರಷ್ಟಾಚಾರ ಆರೋಪ

## ಯಾದವ್ ಹೇಳಿಕೆ ಬಗ್ಗೆ ತನಿಖೆಗೆ ಒತ್ತಾಯಿಸಲು ಒಗ್ಗಟ್ಟಾದ ಪರಿಷತ್ ಸದಸ್ಯರು!



**ಬೆಳಗಾವಿ:** ವಿಧಾನ ಪರಿಷತ್ ಸಭಾಧ್ಯಕ್ಷ ಬಸವರಾಜ ಹೊರಟ್ಟಿ ಅವರ ವಿರುದ್ಧ ಕಾಂಗ್ರೆಸ್ ಶಾಸಕ ನಾಗರಾಜ್ ಯಾದವ್ ಅವರು ಮಾಡಿರುವ ಭ್ರಷ್ಟಾಚಾರ ಆರೋಪಗಳಿಗೆ ಪಕ್ಷಾತೀತವಾಗಿ ತೀವ್ರ ಆಕ್ಷೇಪ ವ್ಯಕ್ತಪಡಿಸಿದ ವಿಧಾನ ಪರಿಷತ್ ಸದಸ್ಯರು, ಸಭಾಧ್ಯಕ್ಷರ ವಿರುದ್ಧ ನೀಡಿರುವ ಆಕ್ಷೇಪಾರ್ಹ ಹೇಳಿಕೆಗಳ ಕುರಿತು ತನಿಖೆ ನಡೆಸಲು ಉಪಾಧ್ಯಕ್ಷ ಎಂ.ಕೆ. ಪ್ರಾಣೇಶ್ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಲು ಸರ್ವಾನುಮತದಿಂದ ಒಪ್ಪಿಕೊಂಡರು.

ಚಳಿಗಾಲದ ಅಧಿವೇಶನ ಪ್ರಾರಂಭವಾಗುವ ಮುನ್ನ, ಪರಿಷತ್ ಸಚಿವಾಲಯದಲ್ಲಿ ಇತ್ತೀಚೆಗೆ 30 ಸಿಬ್ಬಂದಿಗಳ ನೇಮಕಾತಿಯಲ್ಲಿ ಭ್ರಷ್ಟಾಚಾರ ನಡೆದಿದ್ದು, ಇದರಲ್ಲಿ ಹೊರಟ್ಟಿ ಭಾಗಿಯಾಗಿದ್ದಾರೆ ಎಂದು ಕಾಂಗ್ರೆಸ್ ಸದಸ್ಯರು ಆರೋಪಿಸಿದ್ದರು. ಅಲ್ಲದೆ ಅವರು ಪಕ್ಷಪಾತಿಯಾಗಿದ್ದು, ಬಿಜೆಪಿ ಪರವಾಗಿದ್ದಾರೆ ಮತ್ತು ಅಧಿಕಾರವನ್ನು ದುರುಪಯೋಗಪಡಿಸಿಕೊಂಡಿದ್ದಾರೆ ಎಂದು ನಾಗರಾಜ್ ಯಾದವ್ ಆರೋಪಿಸಿದ್ದರು. ಈ ಆರೋಪಗಳನ್ನು ಹೊರಟ್ಟಿ ಸ್ಪಷ್ಟವಾಗಿ ತಳ್ಳಿಹಾಕಿದ್ದಾರೆ.

ಬುಧವಾರ, ಜೆಡಿಎಸ್ ಎಂಎಲ್ಸಿ ಎಲ್ ಭೋಜೇಗೌಡ ಅವರು ಈ ವಿಷಯವನ್ನು ಪ್ರಸ್ತಾಪಿಸಿ, ಯಾದವ್ ಅವರ ಹೇಳಿಕೆಗೆ ಆಕ್ಷೇಪ ವ್ಯಕ್ತಪಡಿಸಿದರು ಮತ್ತು ಸಭಾಧ್ಯಕ್ಷರಿಗೆ ಅಗೌರವ ತೋರಿಸಿದ್ದಾರೆ ಎಂದಿದ್ದರು.

ಸಭಾಧ್ಯಕ್ಷರ ವಿಶ್ವಾಸಾರ್ಹತೆಯನ್ನು ಪ್ರಶ್ನಿಸುವುದು ಗಂಭೀರವಾಗಿದೆ ಮತ್ತು ಸಭಾಧ್ಯಕ್ಷರು ನೀಡಿದ ನಿಯಮದ ವಿರುದ್ಧ ಮಾತನಾಡುವುದು ಸಂಪೂರ್ಣ ಸಂವಿಧಾನಬಾಹಿರವಾಗಿದೆ ಎಂದು ಬಿಜೆಪಿ ಎಂಎಲ್ಸಿ ಸಿ.ಟಿ. ರವಿ ಹೇಳಿದರು. ಕಾಂಗ್ರೆಸ್ ಎಂಎಲ್‌ಸಿಗಳಾದ ಬಿ.ಕೆ. ಹರಿಪ್ರಸಾದ್ ಮತ್ತು ಕೆ.ಎಸ್. ಪುಟ್ಟಣ್ಣಯ್ಯ ಅವರು, ಈ ವಿಷಯವನ್ನು ಸದನದಲ್ಲಿ ಚರ್ಚಿಸುವುದು ನ್ಯಾಯಯುತವಲ್ಲ, ಆದರೆ ಹಿರಿಯ ಎಂಎಲ್‌ಸಿಗಳ ಸಮಿತಿಯನ್ನು ರಚಿಸಿ ನಿರ್ಧರಿಸುವ ಅಗತ್ಯವಿದೆ ಎಂದು ವಾದಿಸಿದರು.

ಮಾಜಿ ಸ್ಪೀಕರ್ ಮತ್ತು ಉತ್ತರ ಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ವಿಧಾನಸಭಾ ಸ್ಪೀಕರ್ ಯು.ಟಿ. ಖಾದರ್ ವಿರುದ್ಧ ಮಾಡಿರುವ ಭ್ರಷ್ಟಾಚಾರ ಆರೋಪಗಳ ಬಗ್ಗೆ ಹರಿಪ್ರಸಾದ್ ಆಕ್ಷೇಪ ವ್ಯಕ್ತಪಡಿಸಿದರು ಮತ್ತು ಅಂತಹ ಆರೋಪಗಳ ಬಗ್ಗೆಯೂ ವಿರೋಧ ಪಕ್ಷದ ನಿಲುವು ಏನೂ ಎಂದು ಪ್ರಶ್ನಿಸಿದರು.

ಆದಾಗ್ಯೂ, ಪುಟ್ಟಣ್ಣ ಅವರು ಉಪ ಸಭಾಪತಿ ಎಂ.ಕೆ. ಪ್ರಾಣೇಶ್ ನೇತೃತ್ವದಲ್ಲಿ ಸದನ ಮತ್ತು ವಿರೋಧ ಪಕ್ಷದ ನಾಯಕರು ಹಾಗೂ ಕೆಲವು ಹಿರಿಯ ಸದಸ್ಯರನ್ನು ಒಳಗೊಂಡ ಸಮಿತಿ ರಚಿಸುವಂತೆ ಮತ್ತು ಆ ವಿಷಯದ ಬಗ್ಗೆ ಚರ್ಚಿಸುವಂತೆ ಸಲಹೆ ನೀಡಿದರು.

# ಕುಡಿದ ಮತ್ತಿನಲ್ಲಿ ಕಳ್ಳನಿಂದಲೇ ಕದ್ದ ಚಿನ್ನ ದೋಚಿದ ನಾಲ್ವರು; ಐವರ ಬಂಧನ

**ಬೆಂಗಳೂರು:** ಮಂದೂರಿನ ಸ್ಮಶಾನವೊಂದರಲ್ಲಿ ತಮಿಳುನಾಡು ಮೂಲದ 30 ವರ್ಷದ ಕಳ್ಳನ ಮೇಲೆ ದಾಳಿ ಮಾಡಿ, ದರೋಡೆ ಮಾಡಿದ್ದ ನಾಲ್ವರು ಕುಡುಕರನ್ನು ಆವಲಹಳ್ಳಿ ಪೊಲೀಸರು ಬಂಧಿಸಿದ್ದಾರೆ. 70 ಲಕ್ಷ ರೂ. ಮೌಲ್ಯದ ಕದ್ದ ಸೊತ್ತನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ಮೂರು ಮನೆ ಕಳ್ಳತನ ಮಾಡಿದ್ದಕ್ಕಾಗಿ ಕಳ್ಳನನ್ನು ಸಹ ಬಂಧಿಸಲಾಗಿದೆ.

ಕಳ್ಳನನ್ನು ಇಸ್ಮೈ ರಾಜ್ ಅಲಿಯಾಸ್ ಕುಂಟ ಅಲಿಯಾಸ್ ಶರವಣ ಎಂದು ಗುರುತಿಸಲಾಗಿದೆ. ಕಟ್ಟಡ ನಿರ್ಮಾಣ ಕಾರ್ಮಿಕನಾಗಿರುವ ಇಸ್ಮೈ ವಿರುದ್ಧ ಸಂಪಿಗೆಹಳ್ಳಿ, ಯಲಹಂಕ, ಸಂಜಯನಗರ, ಬಾಗಲೂರು ಮತ್ತು ಅಮೃತಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಏಳು ಮನೆ ಕಳ್ಳತನ ಪ್ರಕರಣಗಳು ದಾಖಲಾಗಿವೆ.

ಇಸ್ಮೈ ಮೇಲೆ ದಾಳಿ ಮಾಡಿ ದರೋಡೆ ಮಾಡಿದ ನಾಲ್ವರು ಆರೋಪಿಗಳನ್ನು ದಿನಗೂಲಿ ಕಾರ್ಮಿಕ ಎಸ್ ಮೌನೇಶ್ ರಾವ್ (22), ಡೆಲಿವರಿ ಬಾಯ್ ಎಂ. ದರ್ಶನ್ ಅಲಿಯಾಸ್ ಅಪ್ಪು (23), ಡೆಲಿವರಿ ಬಾಯ್ ಚಂದನ್ ಆರ್. ರಾಜಪ್ಪ (23) ಮತ್ತು ದಿನಗೂಲಿ ಕಾರ್ಮಿಕ ಎಂ. ಸುನಿಲ್ (20) ಎಂದು ಗುರುತಿಸಲಾಗಿದೆ. ಇವರೆಲ್ಲರೂ ಬಿದರಹಳ್ಳಿ ನಿವಾಸಿಗಳು. ನಾಲ್ವರು ಆರೋಪಿಗಳಲ್ಲಿ ಯಾರೂ ಈ ಹಿಂದೆ ಯಾವುದೇ ಪ್ರಕರಣಗಳಲ್ಲಿ ಭಾಗಿಯಾಗಿಲ್ಲ.

ನವೆಂಬರ್ 22 ರಂದು, ಮಂಡೂರು ಸ್ಮಶಾನದಲ್ಲಿ ತನ್ನ ಸ್ಕೂಟರ್ ನಿಲ್ಲಿಸಿದ ನಂತರ ಇಸ್ಮೈ ಸುತ್ತಮುತ್ತಲಿನ ಬೀಗ ಹಾಕಿದ ಮನೆಯಿಂದ 330 ಗ್ರಾಂ ಚಿನ್ನಾಭರಣ ಮತ್ತು ಹಣವನ್ನು ಕದ್ದಿದ್ದಾನೆ. ಸ್ಮಶಾನದಲ್ಲಿ ಮದ್ಯಪಾನ ಮಾಡುತ್ತಿದ್ದ ಇತರ ನಾಲ್ವರು ಆರೋಪಿಗಳು ನಿಲ್ಲಿಸಿದ್ದ ಸ್ಕೂಟರ್ ಅನ್ನು ನೋಡಿ ಅದರ ಹ್ಯಾಂಡಲ್ ಮುರಿದಿದ್ದಾರೆ.

ತನ್ನ ಸ್ಕೂಟರ್ ತೆಗೆದುಕೊಳ್ಳಲು ಹಿಂತಿರುಗಿದ ಇಸ್ಮೈ ತನ್ನ ದ್ವಿಚಕ್ರ ವಾಹನವನ್ನು ಸ್ಟಾರ್ಟ್ ಮಾಡಲು ಸಾಧ್ಯವಾಗಿಲ್ಲ. ಮದ್ಯಪಾನ ಮಾಡುತ್ತಿದ್ದ ನಾಲ್ವರು ಇಸ್ಮೈನನ್ನು ಗಮನಿಸಿದ್ದಾರೆ. ಬಳಿಕ ಆತನ ಮೇಲೆ ಹಲ್ಲೆ ಮಾಡಿ ಕದ್ದಿದ್ದ ಚಿನ್ನ ಮತ್ತು ನಗದನ್ನು ದೋಚಿದ್ದಾರೆ. ಇಸ್ಮೈ ತಮಿಳುನಾಡಿಗೆ ಹೋಗಬೇಕಾಗಿದ್ದರಿಂದ ಸ್ವಲ್ಪ ಹಣ ನೀಡುವಂತೆ ಇಸ್ಮೈ ಬೇಡಿಕೊಂಡಿದ್ದಾನೆ ಬಳಿಕ ಆತನ ಮೇಲೆ ಹಲ್ಲೆ ಮಾಡಿ ಕದ್ದಿದ್ದ ಚಿನ್ನ ಮತ್ತು ನಗದನ್ನು ದೋಚಿದ್ದಾರೆ. ಇಸ್ಮೈ ತಮಿಳುನಾಡಿಗೆ ಹೋಗಬೇಕಾಗಿದ್ದರಿಂದ ಸ್ವಲ್ಪ ಹಣ ನೀಡುವಂತೆ ಇಸ್ಮೈ ಬೇಡಿಕೊಂಡಿದ್ದಾನೆ. ಆಗ, ಅವರು ಆತನಿಗೆ 3,000 ರೂ.ಗಳನ್ನು ಹಿಂದಿರುಗಿಸಿದ್ದಾರೆ.

ನಂತರ ಕುಡಿದು ಬಂದ ಇಸ್ಮೈ, ಖಾಲಿ ಕೈಯಲ್ಲಿ ಹಿಂತಿರುಗಲು ಮನಸ್ಸಾಗದೆ ಮತ್ತೆ ಕಳ್ಳತನ ಮಾಡಲು ನಿರ್ಧರಿಸಿದ್ದಾನೆ. ಅದೇ ರಾತ್ರಿ ಮಂಡೂರಿನಲ್ಲಿರುವ ವಿಲ್ಲಾ ಮತ್ತು ಮನೆಯಲ್ಲಿ ಕಳ್ಳತನ ಮಾಡಿದ್ದಾನೆ.

ಕುಟುಂಬದೊಂದಿಗೆ ಧರ್ಮಸ್ಥಳಕ್ಕೆ ಹೋಗಿದ್ದ ವಿಲ್ಲಾ ಮಾಲೀಕರು ನವೆಂಬರ್ 24 ರಂದು ಆವಲಹಳ್ಳಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.ಐವರು ಆರೋಪಿಗಳಿಂದ ಪೊಲೀಸರು 447 ಗ್ರಾಂ ಚಿನ್ನಾಭರಣ, 28,250 ರೂ. ನಗದು ಮತ್ತು ಅಪರಾಧಕ್ಕೆ ಬಳಸಲಾದ ಒಂದು ದ್ವಿಚಕ್ರ ವಾಹನವನ್ನು ವಶಪಡಿಸಿಕೊಂಡಿದ್ದು, ಒಟ್ಟು 70 ಲಕ್ಷ ರೂ. ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ.

ಡಿಸೆಂಬರ್ 2 ರಂದು ಮೇಡಹಳ್ಳಿಯ ಪಾರ್ವತಿನಗರದಲ್ಲಿ ಇಸ್ಮೈ ಚಿನ್ನದ ಸರ ಮಾರಾಟ ಮಾಡಲು ಯತ್ನಿಸುತ್ತಿದ್ದಾಗ ಪೊಲೀಸರು ಬಂಧಿಸಿದ್ದಾರೆ.


# ರಾಜ್ಯದಲ್ಲಿ 37.48 ಲಕ್ಷ ವಸತಿ ರಹಿತರು ಜಮೀರ್ ಅಹ್ಮದ್ ಖಾನ್ ಮಾಹಿತಿ

**ಬೆಂಗಳೂರು:** ಕೇಂದ್ರದ ಮಾರ್ಗಸೂಚಿಗಳ ಪ್ರಕಾರ ರಾಜ್ಯದಲ್ಲಿ 20.17 ಲಕ್ಷ ಮನೆ ರಹಿತರು ಮತ್ತು 17.31 ಲಕ್ಷ ನಿವೇಶನ ರಹಿತರು ಸೇರಿ ಒಟ್ಟು 37,48,700 ವಸತಿ ರಹಿತರು ಇದ್ದಾರೆ ಎಂದು ವಸತಿ ಸಚಿವ ಜಮೀರ್ ಅಹಮದ್ ಖಾನ್ ತಿಳಿಸಿದರು.ವಿಧಾನ ಪರಿಷ□□ನಲ್ಲಿ ಸದಸ್ಯ ಶಿವಕುಮಾರ್ ಕೆ. ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ಮಂಜೂರಾದ 3,12,040 ವಸತಿಗಳಲ್ಲಿ ಶೇ.83 (2,60,799) ಮನೆಗಳ ಕಾಮಗಾರಿ ಇನ್ನೂ ಆರಂಭಗೊಂಡಿಲ್ಲ.2024–25ನೇ ಸಾಲಿಗೆ ವಿವಿಧ ಯೋಜನೆಗಳಡಿ 7,38,881 ಮನೆಗಳ ಗುರಿ ನೀಡಿದ್ದು, 3,27,747ಕ್ಕೆ ಅನುಮೋದನೆ ದೊರೆತಿದೆ. ಆದರೆ, ಈ ಪೈಕಿ ಕೇವಲ 9,839 ಮನೆಗಳು ಪೂರ್ಣಗೊಂಡಿವೆ. 2,70,977 ಮನೆಗಳ ಕಾಮಗಾರಿ ಆರಂಭಗೊಂಡಿಲ್ಲ ಎಂದರು. ವಸತಿ ನಿರ್ಮಾಣಕ್ಕೆ ನೀಡುವ ಅನುದಾನವನ್ನು ಪರಿಶಿಷ್ಟ ಜಾತಿ/ಪಂಗಡದವರಿಗೆ 4 ಲಕ್ಷ ರೂ.ಗೆ ಮತ್ತು ಸಾಮಾನ್ಯ ವರ್ಗದವರಿಗೆ 3.5 ಲಕ್ಷ ರೂ.ಗೆ ಹೆಚ್ಚಿಸುವ ಬಗ್ಗೆ ಸರ್ಕಾರ ಚಿಂತಿಸುತ್ತಿದೆ ಎಂದು ಮಾಹಿತಿ ನೀಡಿದರು.2024–2025ರ ಹಣಕಾಸು ವರ್ಷದಲ್ಲಿ, ವಿವಿಧ ವಸತಿ ಯೋಜನೆಗಳಿಗೆ 7,38,881 ಮನೆಗಳನ್ನು ನಿರ್ಮಿಸಲು ಗುರಿಯನ್ನು ನಿಗದಿಪಡಿಸಲಾಗಿದ್ದು, ಅದರಲ್ಲಿ 3,27,747 ಮನೆಗಳನ್ನು ಅನುಮೋದಿಸಲಾಗಿದೆ ಎಂದು ಖಾನ್ ಹೇಳಿದರು. ಇನ್ನೂ 4,11,134 ಮನೆಗಳು ಅನುಮೋದನೆಗಾಗಿ ಕಾಯುತ್ತಿವೆ ಎಂದು ಅವರು ಹೇಳಿದರು, ಮನೆ ನಿರ್ಮಾಣಕ್ಕೆ ಸಹಾಯಧನವನ್ನು ಎಸ್‌ಸಿ/ಎಸ್‌ಟಿಗಳಿಗೆ 4 ಲಕ್ಷ ರೂ.ಗಳಿಗೆ ಮತ್ತು ಸಾಮಾನ್ಯ ವರ್ಗದ ಕುಟುಂಬಗಳಿಗೆ 3.5 ಲಕ್ಷ ರೂ.ಗಳಿಗೆ ಹೆಚ್ಚಿಸುವ ಯೋಜನೆ ಇದೆ ಎಂದು ಹೇಳಿದರು.ಎಂಎಲ್‌ಸಿ ಬಿಲ್ಕಿಸ್ ಬಾನು ಕೇಳಿದ ಮತ್ತೊಂದು ಪ್ರಶ್ನೆಗೆ ಉತ್ತರಿಸಿದ ಜಮೀರ್ ಅಹ್ಮದ್ ಖಾನ್, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಡಿಯಲ್ಲಿರುವ 405 ವಸತಿ ವಸಾಹತುಗಳಲ್ಲಿ ಪ್ಲಾಟ್‌ಫಾರ್ಮ್‌ಗಳು ಮತ್ತು ಶೆಡ್‌ಗಳಂತಹ ಮೂಲಭೂತ ಸೌಲಭ್ಯಗಳಿಗಾಗಿ ಟೆಂಡರ್‌ಗಳನ್ನುಕರೆಯಲಾಗಿದೆ

ಎಂದು ಹೇಳಿದರು.ಇಲಾಖೆಯ 2011 ರ ನೇಮಕಾತಿ ಮತ್ತು ಮಾರ್ಗಸೂಚಿಗಳು ಪ್ರಸ್ತುತ ಪರಿಶೀಲನೆಯಲ್ಲಿವೆ . ಪರಿಷ್ಕರಣೆಯ ನಂತರ, ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಲಾಗುವುದು ಎಂದು ಅವರು ಹೇಳಿದರು.

## ಪರಪ್ಪನ ಅಗ್ರಹಾರ ಜೈಲಿನ ಮೇಲೆ ದಾಳಿ

# 60ಕ್ಕೂ ಹೆಚ್ಚು ಫೋನ್, ನಗದು ವಶ




**ಬೆಂಗಳೂರು:** ಬೆಂಗಳೂರಿನ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ಸಜಾಬಂದಿ ಹಾಗೂ ವಿಚಾರಣಾಧೀನ ಕೈದಿಗಳಿಗೆ ನೀಡಲಾಗಿದ್ದ ವಿಶೇಷ ಆತಿಥ್ಯಕ್ಕೆ ಸಂಬಂಧಿಸಿದ ವಿಡಿಯೋಗಳು ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆದ ನಂತರ, ಬೆಂಗಳೂರು ಕೇಂದ್ರ ಕಾರಾಗೃಹದ ಅಧಿಕಾರಿಗಳು ಜೈಲು ಆವರಣದಲ್ಲಿ ಹಲವು ಬಾರಿ ಶೋಧ ನಡೆಸುತ್ತಿದ್ದಾರೆ.

ಅಧಿಕಾರಿಗಳು ಮಂಗಳವಾರ ಜೈಲಿನ ಮೇಲೆ ದಾಳಿ ನಡೆಸಿ, ಹಲವಾರು ಬ್ಯಾರಕ್‌ಗಳಲ್ಲಿ 14 ಮೊಬೈಲ್ ಫೋನ್‌ಗಳು, ಒಂಬತ್ತು ಸಿಮ್ ಕಾರ್ಡ್‌ಗಳು, ಐದು ಚಾರ್ಜರ್‌ಗಳು, 10 ಚೂಪಾದ ವಸ್ತುಗಳು ಮತ್ತು ಎರಡು ಇಯರ್‌ಫೋನ್‌ಗಳನ್ನು ವಶಪಡಿಸಿಕೊಂಡಿದ್ದಾರೆ.

ಇದರೊಂದಿಗೆ, ಕಳೆದ ಹದಿನೈದು ದಿನಗಳಲ್ಲಿ ಅಧಿಕಾರಿಗಳು 67 ಮೊಬೈಲ್ ಫೋನ್‌ಗಳು, 48 ಸಿಮ್ ಕಾರ್ಡ್‌ಗಳು ಮತ್ತು 64,880 ರೂ. ನಗದು ಹಾಗೂ ಇತರ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ.

60 ಕ್ಕೂ ಹೆಚ್ಚು ಮೊಬೈಲ್ ಫೋನ್‌ಗಳನ್ನು ವಶಪಡಿಸಿಕೊಳ್ಳುವುದು ಜೈಲಿನಲ್ಲಿ ಗಂಭೀರ ಭದ್ರತಾ ಲೋಪದ ಬಗ್ಗೆ ಪ್ರಶ್ನೆಗಳನ್ನು ಹುಟ್ಟುಹಾಕಿದೆ. ಇತ್ತೀಚೆಗೆ, ಜೈಲಿಗೆ ಮಾದಕ ದ್ರವ್ಯ ಮತ್ತು ಮೊಬೈಲ್ ಫೋನ್‌ಗಳನ್ನು ಕಳ್ಳಸಾಗಣೆ ಮಾಡುತ್ತಿರುವ ಕೆಲವು ಘಟನೆಗಳು ಸಹ ಬೆಳಕಿಗೆ ಬಂದಿವೆ.

ಪತ್ರಿಕಾ ಪ್ರಕಟಣೆಯ ಪ್ರಕಾರ, ನವೆಂಬರ್ 26 ರಿಂದ ಇಲ್ಲಿಯವರೆಗೆ, ಜೈಲು ಅಧಿಕಾರಿಗಳು 67 ಮೊಬೈಲ್ ಫೋನ್‌ಗಳು, 14 ಚಾರ್ಜರ್‌ಗಳು, 48 ಸಿಮ್ ಕಾರ್ಡ್‌ಗಳು, 10 ಇಯರ್‌ಫೋನ್‌ಗಳು, 64,480 ರೂ. ನಗದು, 13 ಚೂಪಾದ ವಸ್ತುಗಳು ಮತ್ತು ಸಿಗರೇಟ್ ಸೇರಿದಂತೆ ಇತರ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ.

ಈ ಸಂಬಂಧ ಪರಪ್ಪನ ಅಗ್ರಹಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಇಲ್ಲಿಯವರೆಗೆ ಆರು ಎಫ್‌ಐಆರ್‌ಗಳು ದಾಖಲಾಗಿವೆ.


# ಗ್ರಾಮ ಪಂಚಾಯಿತಿ ಅತ್ತಿಗೆರೆ

ಜಿಲ್ಲಾ ಪಂಚಾಯತ್:ದಾವಣಗೆರೆ ತಾಲ್ಲೂಕು ಪಂಚಾಯತ್:ದಾವಣಗೆರೆ

ಸಂಖ್ಯೆ:ಗ್ರಾಪಂ/ಕೆಪಿಪಿಪಿ/ಟೆಂಡರ್ ಪ್ರಕಟಣೆ/ /2025–26 ದಿನಾಂಕ: 11–12–2025

## –:ಟೆಂಡರ್ ಪ್ರಕಟಣೆ:–

2024–25ನೇ & 2025–26 ಸಾಲಿನ 15ನೇ ಹಣಕಾಸು ಯೋಜನೆಯಡಿ
ಕಾಮಗಾರಿಗಳನ್ನು ಕೆಪಿಪಿಪಿ ಟೆಂಡರ್ ಪ್ರಕಟಣೆ

ಈ ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ. 2024–25ನೇ & 2025–26ನೇ ಸಾಲಿನ 15ನೇ ಹಣಕಾಸು ಯೋಜನೆಯಡಿಯ ದಾವಣಗೆರೆ ಜಿಲ್ಲೆ ದಾವಣಗೆರೆ ತಾಲ್ಲೂಕು, ಅತ್ತಿಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಅನುಮೋದನೆಯಾದ ಕಾಮಗಾರಿಗಳನ್ನು ಕೆಪಿಪಿಪಿ ಟೆಂಡರ್ ಪ್ರಕಟಣೆಯನ್ನು ಹೊರಡಿಸಲಾಗಿರುತ್ತದೆ. ಆದ್ದರಿಂದ ದಿನಪತ್ರಿಕೆಯಲ್ಲಿ ಪ್ರಕಟಿಸಬೇಕಾದ ಕೆಪಿಪಿಪಿ ಟೆಂಡರ್.

1)RDPR/2025-26BD/WORK INDENT21445
2)RDPR/2025-26BD/WORK INDENT21444
3)RDPR/2025-26BD/WORK INDENT2143
4)RDPR/2025-26BD/WORK INDENT21442

ಪ್ರಕಟಣೆಯನ್ನು ಒಂದು ದಿನದ ಮಟ್ಟಿಗೆ ಸ್ಥಳೀಯ ಕನ್ನಡದ ಒಂದು ದಿನ ಪತ್ರಿಕೆಯಲ್ಲಿ ಮಿತವ್ಯಯದಲ್ಲಿ ಪ್ರಕಟಿಸಲು ಕ್ರಮ ಕೈಗೊಳ್ಳುವಂತೆ ಕೋರಿದೆ. ಜಾಹಿರಾತುಗೊಳಿಸಲಾದ ದಿನಪತ್ರಿಕೆಯ ಜಾಹಿರಾತಿನ ವೆಚ್ಚದ ಬಿಲ್ಲಿನೊಂದಿಗೆ ಈ ಕಛೇರಿಗೆ ತಲುಪಿಸಲು ಕೋರಲಾಗಿದೆ.

ಸಹಿ/–
ಪಂಚಾಯಿತಿ ಅಭಿವೃದ್ಧಿ ಅಧಿಕಾರಿ
ಗ್ರಾಮ ಪಂಚಾಯಿತಿ ಕಾರ್ಯಾಲಯ ಅತ್ತಿಗೆರೆ

# ಸಭೆ ಮೂಂದೂಡಿಕೆ

**ದಾವಣಗೆರೆ:** ಹರಿಹರ ನಗರಸಭೆಯ ಬರುವ ಸಾಲಿನ ಆಯವ್ಯಯ ತಯಾರಿಸಲು ಪ್ರಥಮ ಪೂರ್ವಭಾವಿ ಸಭೆಯನ್ನು ಆಯೋಜಿಸಲಾಗಿದ್ದು, ಕಾರಣಾಂತರಗಳಿಂದ ಸಭೆ ಮೂಂದೂಡಲಾಗಿದೆ ಎಂದು ನಗರಸಭೆಯ ಪೌರಾಯುಕ್ತರು ತಿಳಿಸಿದ್ದಾರೆ.

# ಅಂಚೆ ಇಲಾಖೆಯಿಂದ ಸೆಲ್ಫ್ ಬುಕ್ಕಿಂಗ್ ಸೌಲಭ್ಯ

**ದಾವಣಗೆರೆ :** ಭಾರತೀಯ ಅಂಚೆ ಇಲಾಖೆಯಿಂದ ಸೆಲ್ಫ್ ಬುಕ್ಕಿಂಗ್ ಹೊಸ ಸೌಲಭ್ಯವನ್ನು ಆಯೋಜಿಸಲಾಗಿದೆ. ಈ ಸೌಲಭ್ಯದಿಂದ ನಾಗರಿಕರು ತಮ್ಮ ಮೊಬೈಲ್ ಅಥವಾ ಕಂಪ್ಯೂಟರ್ ಬಳಸಿ ಸ್ಪೀಡ್ ಪೋಸ್ಟ್ , ಪಾರ್ಸಲ್ ಸೇರಿದಂತೆ ವಿವಿಧ ಅಂಚೆ ಸೇವೆಗಳನ್ನು ಮನೆಯಿಂದಲೇ ಬುಕ್ ಮಾಡುವ ಅವಕಾಶವನ್ನು ಪಡೆಯಬಹುದು. ಇದರ ಮೂಲಕ ಅಂಚೆ ಕಚೇರಿಯಲ್ಲಿ ಸಾಲಿನಲ್ಲಿ ನಿಲುವ ಅನಿವಾರ್ಯತೆ ಕಡಿಮೆಯಾಗುತ್ತದೆ ಹಾಗೂ ಸಮಯದ ಉಳಿತಾಯವಾಗುತ್ತದೆ.

ಸೇವೆಯನ್ನುಮೂಲಕ https://app.indiapost.gov.in/customer.selfservice/home ಪೂರ್ಣಗೊಳಿಸಿದ ನಂತರ ಸೃಷ್ಟಿಯಾಗುವ ಲೇಬಲ್, ಕ್ಯೂಆರ್ ಅನ್ನು ಮುದ್ರಿಸಿ ಹತ್ತಿರದ ಯಾವುದೇ ಅಂಚೆ ಕಚೇರಿಯಲ್ಲಿ ಸ್ಪೀಡ್ ಪೋಸ್ಟ್, ಪಾರ್ಸೆಲ್ ಅನ್ನು ಬುಕ್ಕಿಂಗ್ ಸಂಖ್ಯೆಯ ಮೂಲಕ ಹಸ್ತಾಂತರಿಸಬಹುದು. ಸಾರ್ವಜನಿಕರು ಈ ನವೀನ ಡಿಜಿಟಲ್ ಸೌಲಭ್ಯವನ್ನು ಹೆಚ್ಚಿನ ಸಂಖ್ಯೆಯಲ್ಲಿ ಬಳಸಿಕೊಳ್ಳಬೇಕೆಂದು ಅಂಚೆ ಅಧೀಕ್ಷಕರಾದ ಚಂದ್ರಶೇಖರ ತಿಳಿಸಿದ್ದಾರೆ.

ಜನವರಿ 1 ರೊಳಗೆ ಗೃಹಲಕ್ಷ್ಮೀ ಯೋಜನೆಯಡಿ ಶೇ 100 ರಷ್ಟು ಪ್ರಗತಿ ಸಾಧಿಸಿ

# ಫಲಾನುಭವಿಗಳನ್ನು ಗುರುತಿಸಿ, ಯೋಜನೆ ತಲುಪಿಸಿ




**ಗದಗ :** ರಾಜ್ಯದ ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಗದಗ ತಾಲೂಕು ಅಗ್ರಸ್ಥಾನ ಪಡೆದಿದ್ದರೂ, ಗೃಹಲಕ್ಷ್ಮಿಯ ಯೋಜನೆಯ ಪ್ರಗತಿ ಇನ್ನೂ ಹೆಚ್ಚಿಸಬೇಕಿದೆ ಎಂಬುದಾಗಿ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಅವರು ಬುಧವಾರ ಹೇಳಿದರು.

ಉಪ ವಿಭಾಗಾಧಿಕಾರಿಗಳ ಕಾರ್ಯಾಲಯದಲ್ಲಿ ಬುಧವಾರ ಗದಗ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ತಾಲೂಕು ಸಮಿತಿ ಕಚೇರಿಯಲ್ಲಿ ನಡೆದ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ನಂತರ ಮಾತನಾಡಿ "ಯೋಜನೆಯ ಶೇಕಡಾ 100 ಪ್ರಗತಿ ಸಾಧನೆಗೆ ಎಲ್ಲ ಅಂಗನವಾಡಿ ಕಾರ್ಯಕರ್ತೆಯರ ಪಾತ್ರ ಮಹತ್ವವಾಗಿದೆ ಎಂದರು, ಪ್ರತಿ ವಾರ್ಡಗಳಲ್ಲಿ ನಗರಸಭೆಯ ಸದಸ್ಯರು, ಅಧಿಕಾರಿಗಳು, ಮತ್ತು ಸಮಿತಿ ಸದಸ್ಯರ, ಸಹಕಾರದೊಂದಿಗೆ ನಗರದ 1 ರಿಂದ 35 ವಾಡಗಳಲ್ಲಿ ಯೋಜನೆಯ ಸೌಲಭ್ಯದಿಂದ ಯಾರೂ ವಂಚಿತರಾಗಬಾರದು" ಮತ್ತು ವಂಚಿತರಾದವರನ್ನು ಗುರುತಿಸಿ ಮಾಹಿತಿ ಕೊಡಲು ಅಂಗನವಾಡಿ ಕಾರ್ಯಕರ್ತೆಯರಿಗೆ ಸೂಚಿಸಿದರು.

ರಾಜ್ಯದಲ್ಲಿಯೇ ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಗದಗ ತಾಲೂಕು ಅಗ್ರಸ್ಥಾನ ಪಡೆದಿದ್ದು ಇದಕ್ಕೆ ಕಾರಣೀಕರ್ತರಾದ ರಾಜ್ಯ ಗ್ಯಾರಂಟಿ ಯೋಜನೆಗಳ ಅಧ್ಯಕ್ಷ ಎಚ್.ಎಂ.ರೇವಣ್ಣ, ಉಪಾಧ್ಯಕ್ಷ ಎಸ್.ಆರ್.ಪಾಟೀಲ, ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರ ಮಾರ್ಗದರ್ಶದಲ್ಲಿ ಪ್ರಗತಿ ಸಾಧಿಸಿದ್ದು ಅಭಿನಂದನಾರ್ಹವಾಗಿದೆ ಎಂದರು.

ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ತಾಲೂಕು ಸಮಿತಿ ಸದಸ್ಯರಾದ ಕೃಷ್ಣಗೌಡ ಪಾಟೀಲ ಇವರು ಮಾತನಾಡಿ ಪಂಚಗ್ಯಾರಂಟಿ ಯೋಜನೆಗಳು ಬಡಜನರನ್ನು ಆರ್ಥಿಕವಾಗಿ ಸಬಲೀಕರಿಸುವ ಉದ್ದೇಶ ಹೊಂದಿವೆ ಅರ್ಹ ಫಲಾನುಭವಿಗಳು ಸೌಲಭ್ಯ ಪಡೆಯುವಲ್ಲಿ ವಿಳಂಬ ಆಗಬಾರದು ಪ್ರತಿ ವಾರ್ಡಗಳಿಗೆ ಅಂಗನವಾಡಿ ಕಾರ್ಯಕರ್ತೆಯರು ಬೇಟಿ ನೀಡಿ ಎಂದರು.

"ಗ್ಯಾರಂಟಿ ಯೋಜನೆ ಅನುಷ್ಠಾನದಲ್ಲಿ ಶೇಕಡಾ 100 ಪ್ರಗತಿ ಸಾಧಿಸಲು ಎಲ್ಲ ಅಂಗನವಾಡಿ ಕಾರ್ಯಕರ್ತೆಯರು ಕಾರ್ಯನಿರ್ವಹಿಸಬೇಕು" ಹಾಗೂ ಪ್ರತಿ ವಾರ್ಡಗಳಲ್ಲಿ ಕ್ಯಾಂಪೇನ್ ಮಾಡುವ ಮೂಲಕ ಸೌಲಭ್ಯ ವಂಚಿತರನ್ನು ಮತ್ತು ಅರ್ಹ ಫಲಾನುಭವಿಗಳನ್ನು ಗುರುತಿಸಿ ಸೌಲಭ್ಯ ಒದಗಿಸಲು ಮುಂದಾಗಬೇಕೆಂದರು.

ಅರ್ಹರಿಗೆ ಸೌಲಭ್ಯ ತಲುಪಿಸುವುದು ಗೃಹಲಕ್ಷ್ಮಿ ಯೋಜನೆಯಡಿ ಜುಲೈ 2025 ರವರೆಗೆ ಗದಗ ತಾಲೂಕಿನಲ್ಲಿ ಯಜಮಾನಿ ಹೆಸರಿನಲ್ಲಿ ಒಟ್ಟು 82193 ಜನರು ಪಡಿತರ ಹೊಂದಿರುತ್ತಾರೆ. 81967 ಅರ್ಜಿಗಳು ನೊಂದಣಿಯಾಗಿದ್ದು ಅದರಲ್ಲಿ 78986 ಅರ್ಜಿಗಳಿಗೆ ಮಂಜೂರಾತಿ ದೊರೆತಿದೆ. ಶೇ 96.36 ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದರು. ಈ ಸಂದರ್ಭದಲ್ಲಿ ಸಂಬಂಧಿತ ಅಧಿಕಾರಿಗಳು, ಅಂಗನವಾಡಿ ಕಾರ್ಯಕರ್ತೆಯರು, ಉಪಸ್ಥಿತರಿದ್ದರು.

# ಜಿಲ್ಲಾಮಂತ್ರಿ, ಸಂಸದರ ಬಗ್ಗೆ ಮಾತನಾಡಿದರೆ ಮಹಿಳೆಯರೇ ಪೊರಕೆ ಸೇವೆ ಮಾಡುತ್ತಾರೆ: ಮಾಗಾನಹಳ್ಳಿ ಬಿ.ಕೆ.ಪರಶುರಾಮ

**ದಾವಣಗೆರೆ:** ಸಂಸದರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರ ವಿರುದ್ಧ ವೈಯಕ್ತಿಕ ಟೀಕೆ ಮಾಡುತ್ತಿರುವ ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ವರ್ತನೆ ಇದೇ ರೀತಿ ಮುಂದುವರೆದರೆ ಮಹಿಳೆಯರೇ ಪೊರಕೆ ಸೇವೆ ಮಾಡುತ್ತಾರೆಂದು ಕಾಂಗ್ರೆಸ್ ಮುಖಂಡ, ಕಡ್ಲೆಬಾಳು ಗ್ರಾಪಂ ಮಾಜಿ ಅಧ್ಯಕ್ಷ ಮಾಗಾನಹಳ್ಳಿ ಬಿ.ಕೆ.ಪರಶುರಾಮ ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಯುರೋಪ್ ಮಾದರಿಯಲ್ಲಿ ಜಿಲ್ಲಾ ಕೇಂದ್ರದ ರಸ್ತೆ, ವೃತ್ತಗಳನ್ನು ಸಚಿವ ಎಸ್.ಎಸ್.ಮಲ್ಲಿಕಾರ್ಜುನ ಅಭಿವೃದ್ಧಿಪಡಿಸುತ್ತಿದ್ದಾರೆ. ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಲೋಕಸಭೆಯಲ್ಲಿ ದಾವಣಗೆರೆ ಸೇರಿದಂತೆ ರಾಜ್ಯದ ಜ್ವಲಂತ ಸಮಸ್ಯೆ ಬಗ್ಗೆ ಧ್ವನಿ ಎತ್ತಿ, ಕೇಂದ್ರದ ಗಮನ ಸೆಳೆಯುತ್ತಿದ್ದಾರೆ. ಆದರೂ ಇವರಿಬ್ಬರ ಬಗ್ಗೆ ಬಿಜೆಪಿಯ ಧನಂಜಯ ಕಡ್ಲೇಬಾಳು ಹಗುರವಾಗಿ ಮಾತಾಡಿರುವುದು ಸರಿಯಲ್ಲ. ರಾಜಕೀಯದಲ್ಲಿ ಟೀಕೆ ಆರೋಗ್ಯಕರವಾಗಿರಬೇಕು. ಅಭಿವೃದ್ಧಿ ಬಗ್ಗೆ ಪ್ರಶ್ನಿಸುವುದಾದರೆ ಕಡ್ಲೇಬಾಳು ಆಂಜನೇಯಸ್ವಾಮಿ ದೇವಸ್ಥಾನದಲ್ಲಿ ಚರ್ಚೆಗೆ ಬರಲಿ. ಅದನ್ನು ಬಿಟ್ಟು ಪದೇಪದೇ ಸುಳ್ಳು ಆರೋಪ ಮಾಡಿದರೆ ಗ್ರಾಮದ ಮಹಿಳೆಯರೇ ಪೊರಕೆ ಸೇವೆ ಮಾಡುತ್ತಾರೆ ಎಂದು ಎಚ್ಚರಿಸಿದರು.

ನಮ್ಮ ಕಡ್ಲೆಬಾಳು ಭಾಗದಲ್ಲಿ ಈತನೊಬ್ಬ ಜೋಕರ್ ಇದ್ದಂತೆ. ಗ್ರಾಮದ ದೇವಸ್ಥಾನದಲ್ಲಿ ಯಾತ್ರಿ ನಿವಾಸ ನಿರ್ಮಿಸಲು ಮಂಜೂರಾಗಿದ್ದ 78 ಲಕ್ಷ ರೂ.ಗಳಲ್ಲಿ ಧನಂಜಯ ಕಡ್ಲೇಬಾಳು ಗುತ್ತಿಗೆ ಪಡೆದು, 33 ಲಕ್ಷ ವೆಚ್ಚದಲ್ಲಿ 5 ವರ್ಷ ಅರೆಬರೆ ಕಾಮಗಾರಿ ಮಾಡಿ ಬಿಟ್ಟುಹೋಗಿದ್ದರು. ತನ್ನ ಬಾಯಿಯಲ್ಲಿ ಮಚ್ಚೆ ಇದೆ ಎನ್ನುವ ಧನಂಜಯ ಕಡ್ಲೇಬಾಳು ದಾವಣಗೆರೆ ನಗರದ ಜಗಳೂರು ಬಸ್ ನಿಲ್ದಾಣದಲ್ಲಿ ಮಳಿಗೆ ಪಡೆದು ಗಿಣಿಶಾಸ್ತ್ರ ಹೇಳಲಿ. ಬೇಕಿದ್ದರೆ ನಾವೇ ಬಾಡಿಗೆ ಕೊಡುತ್ತೇವೆ ಎಂದು ಅವರು ಟೀಕಿಸಿದರು.

ಅಪೆಕ್ಸ್ ಬ್ಯಾಂಕ್ ನೂತನ ನಿರ್ದೇಶಕ ಮುದೇಗೌಡ್ರು ಗಿರೀಶ ಮಾತನಾಡಿ, ಜಿಲ್ಲೆಯಲ್ಲಿ 750 ಮೆಟ್ರಿಕ್ ಟನ್ ಮೆಕ್ಕೆಜೋಳ ಖರೀದಿಸಲು ಕುಕ್ಕವಾಡ ಶುಗರ್ ಫ್ಯಾಕ್ಟರಿಗೆ ಜಿಲ್ಲಾಧಿಕಾರಿ ಸೂಚಿಸಿದ್ದಾರೆ. ಕುಕ್ಕುಟೋದ್ಯಮದವರಿಗೂ ಮೆಕ್ಕೆಜೋಳ ಖರೀದಿಗೆ ಮನವಿ ಮಾಡಿದ್ದಾರೆ.

# ಸರಕಾರದ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸಲು ತಾರತಮ್ಯ



**ಹೊನ್ನಾಳಿ :** ಹೊನ್ನಾಳಿ ಮತ್ತು ನ್ಯಾಮತಿ ಅವಳಿ ತಾಲೂಕಿನ ಸರಕಾರಿ ಕಚೇರಿಗಳಲ್ಲಿ ನಡೆಯುತ್ತಿರುವ ವಿಳಂಬ ನೀತಿ, ಸರಕಾರದ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸಲು ತಾರತಮ್ಯ ನೀತಿ ಅನುಸರಿಸುವುದು ಕಳಪೆ ಕಾಮಗಾರಿ, ಹಣ ದುರುಪಯೋಗ ಕುರಿತ ದೂರುಗಳನ್ನು ಸಲ್ಲಿಸುವವರು ಪ್ರಪತ್ರ 1 ಮತ್ತು 2 ರಲ್ಲಿ ಅಫಿಡವಿಟ್ ನೊಂದಿಗೆ ಸಲ್ಲಿಸಬೇಕು ಎಂದು ದಾವಣಗೆರೆ ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಎಂ.ಎಸ್. ಕೌಲಾಪೂರೆ ಹೇಳಿದರು.

ಬುಧವಾರ ಪಟ್ಟಣದ ಪ್ರವಾಸಿ ಮಂದಿರದ ಸಭಾಂಗಣದಲ್ಲಿ ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಿ ಅವರು ಮಾತನಾಡಿದರು. ಒಂದು ವೇಳೆ ತಾವು ಕೊಡುವ ದೂರುಗಳು ನ್ಯಾಯಾಲಯದಲ್ಲಿ ವಿಚಾರಣಾ ಬಾಕಿ ಇದ್ದರೆ ಅಂತಹ ದೂರುಗಳನ್ನು ಸ್ವೀಕರಿಸುವುದಿಲ್ಲ ಎಂದು ಹೇಳಿದರು.

ಸಾರ್ವಜನಿಕರು ತಮ್ಮ ಕೆಲಸ ಕಾರ್ಯಗಳನ್ನು ಮಾಡಿಕೊಡುವಲ್ಲಿ ಅಧಿಕಾರಿಗಳು ಹಣ, ಲಂಚ ಕೇಳುತ್ತಿದ್ದಲ್ಲಿ ಅಂಥವರ ವಿರುದ್ಧ ಲಿಖಿತ ದೂರು ನೀಡಬಹುದು ಎಂದರು. ಹೊನ್ನಾಳಿಯಲ್ಲಿ ಲಿಖಿತವಾಗಿ ಐದು ದೂರುಗಳು ಸ್ವೀಕರಿಸಲಾಗಿದೆ. ಮೌಖಿಕವಾಗಿ ಮೂರು ದೂರುಗಳನ್ನು ಆಲಿಸಲಾಗಿದ್ದು ಅವುಗಳನ್ನು ನಾವು ನೊಂದಾಯಿಸಿಕೊಂಡಿದ್ದೇವೆ ಎಂದು ಹೇಳಿದರು.

ಲೋಕಾಯುಕ್ತ ಪೊಲೀಸ್ ಅಧೀಕ್ಷಕರು ಸಭೆ ಕರೆದಾಗ ತಾಲೂಕು ಮಟ್ಟದ ಅಧಿಕಾರಿಗಳು ತಾವೇ ಸ್ವತಹ ಖುದ್ದಾಗಿ ಬರಬೇಕು ಬರುವಾಗ ಇಲಾಖೆಯ ಪೂರ್ಣ ಮಾಹಿತಿಯನ್ನು ತಿಳಿದುಕೊಂಡು ಬರಬೇಕು, ವಿಚಾರಣೆ ವೇಳೆ ಸಮರ್ಪಕವಾದ ಮಾಹಿತಿ ನೀಡುವುದಿಲ್ಲ ಎಂದರು.

ಸಂಬಂಧಪಟ್ಟ ಅಧಿಕಾರಿಗಳು ಸಭೆಗೆ ಬರದೇ ತಮ್ಮ ಕೆಳಗಿನ ಸಿಬ್ಬಂದಿಗಳ ಮೂಲಕ ಮಾಹಿತಿ ಕಳಿಸಿಕೊಡುತ್ತಿರುವುದು ಸಮಂಜಸವಲ್ಲ ಎಂದ ಅವರು ಮುಂದಿನ ಸಭೆಗೆ ಬರಬೇಕಾದರೆ ಎಲ್ಲಾ ಇಲಾಖೆಗಳಿಗೆ ಹಾಗೂ ಸಾರ್ವಜನಿಕರಿಗೆ ಮಾಹಿತಿ ನೀಡುವ ದೃಷ್ಟಿಯಿಂದ ತಹಶೀಲ್ದಾರ್ ಕಚೇರಿಯಿಂದ ಪತ್ರಿಕೆಗಳಿಗೆ ಮಾಹಿತಿ ಕೊಡಬೇಕು, ಇದರಿಂದ ಸಾರ್ವಜನಿಕರಿಗೆ ದೂರು ಕೊಡಲು ಅನುಕೂಲವಾಗುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಲೋಕಾಯುಕ್ತ ಡಿವೈಎಸ್‌ಪಿ ಕಲಾವತಿ, ಇನ್ಸ್‌ಪೆಕ್ಟರ್ ಗುರುಬಸವರಾಜ್, ಪ್ರಭು ಸೂರಿನ ಹಾಗೂ ಸರಳ ಅವರು ಉಪಸ್ಥಿತರಿದ್ದರು.

ತಾಲ್ಲೂಕು ಮಟ್ಟದ ಅಧಿಕಾರಿಗಳು ಹಾಗೂ ಅವರ ಸಿಬ್ಬಂದಿಗಳು ಸಭೆಯಲ್ಲಿ ಭಾಗವಹಿಸಿದ್ದರು.

# ಮಾನವ ಹಕ್ಕುಗಳ ಸಂರಕ್ಷಣೆ ಪ್ರತಿಯೊಬ್ಬರ ಹೊಣೆ : ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ

**ವಿಜಯನಗರ(ಹೊಸಪೇಟೆ) :** ಮಾನವ ಹಕ್ಕುಗಳಿಂದ ಪ್ರತಿಯೊಬ್ಬರ ಸರ್ವತೋಮುಖ ಅಭಿವೃದ್ಧಿ ಮತ್ತು ಮಾನವನ ಅಸ್ತಿತ್ವ ಸಾಧ್ಯವಾಗಿದೆ. ಇವುಗಳ ಸಂರಕ್ಷಣೆ ಎಲ್ಲರ ಹೊಣೆಯಾಗಿದೆ ಎಂದು ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ ಹೇಳಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್ ವತಿಯಿಂದ ಏರ್ಪಡಿಸಿದ್ದ ಮಾನವ ಹಕ್ಕುಗಳ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಬುಧವಾರ ಅವರು ಮಾತನಾಡಿದರು.



ಮಾನವ ಹಕ್ಕುಗಳ ದಿನಾಚರಣೆಯನ್ನು ಪ್ರತಿ ವರ್ಷ ಡಿಸೆಂಬರ್ 10 ರಂದು ವಿಶ್ವದಾದ್ಯಂತ ಆಚರಿಸಲಾಗುತ್ತದೆ, ಇದು 1948 ರಲ್ಲಿ ವಿಶ್ವಸಂಸ್ಥೆಯು ಅಂಗೀಕರಿಸಿದ ಮಾನವ ಹಕ್ಕುಗಳ ಸಾರ್ವತ್ರಿಕ ಘೋಷಣೆಯನ್ನು ಸ್ಮರಿಸುತ್ತದೆ, ಪ್ರತಿಯೊಬ್ಬ ವ್ಯಕ್ತಿಯ ಘನತೆ, ಸಮಾನತೆ ಮತ್ತು ಸ್ವಾತಂತ್ರ್ಯವನ್ನು ಖಾತ್ರಿಪಡಿಸುವ ಈ ಹೆಗ್ಗುರುತು ದಾಖಲೆಯ ಮಹತ್ವದ ಬಗ್ಗೆ ಜಾಗೃತಿ ಮೂಡಿಸುವುದು ಇದರ ಉದ್ದೇಶವಾಗಿದೆ.

ಈ ದಿನ ಸಮಾನತೆ, ನ್ಯಾಯ ಮತ್ತು ಮಾನವ ಘನತೆಯ ತತ್ವಗಳನ್ನು ಎತ್ತಿಹಿಡಿಯಲು ಮತ್ತು ತಾರತಮ್ಯದ ವಿರುದ್ಧ ಹೋರಾಡಲು ಪ್ರೋತ್ಸಾಹಿಸುತ್ತದೆ. ಯಾವುದೇ ಜಾತಿ ಜನಾಂಗ, ಬಣ್ಣ, ಧರ್ಮ, ಲಿಂಗ, ಭಾಷೆ, ರಾಜಕೀಯ, ಸ್ಥಾನಮಾನಗಳಿಗೆ ಬೆಲೆ ಕೊಡದೇ ಎಲ್ಲರೂ ಕೂಡ ಸರಿಸಮಾನರು. ಹೀಗಾಗಿ ಸಮಾಜದಲ್ಲಿರುವ ಪ್ರತಿಯೊಬ್ಬರು ಬದುಕುವ ಹಕ್ಕಿನೊಂದಿಗೆ ಇತರೆ ಹಕ್ಕಿಗಳನ್ನು ಹೊಂದಿದ್ದಾರೆ.

ಸಮಾಜದಲ್ಲಿ ಮಾನವನಿಗೆ ಯಾವುದೇ ಸ್ವಾತಂತ್ರ ಹಾಗೂ ಹಕ್ಕುಗಳು ಇರದೇ ಹೋಗಿದ್ದರೆ ಮನುಷ್ಯ ಹೇಗೆ ಬೇಕೋ ಹಾಗೆ ಬದುಕುತ್ತಿದ್ದ ಭವಿಷ್ಯದಲ್ಲಿ ಮಾನವನ ಅಸ್ತಿತ್ವವೇ ಇಲ್ಲವಾಗಿರುತ್ತಿತ್ತು. ಮಾನವ ಹಕ್ಕುಗಳು ನಾಗರಿಕ ಸಮಾಜದಲ್ಲಿ ಸ್ವಾತಂತ್ರವನ್ನು ಎತ್ತಿ ಹಿಡಿಯುತ್ತದೆ ಎಂದರು.

ಹಂಪಿ ವಿಶ್ವವಿದ್ಯಾಲಯದ ಕನ್ನಡ ಪ್ರಾಧ್ಯಪಕರಾದ ವೆಂಕಟಗಿರಿ ತಳವಾಯಿ ಮಾತನಾಡಿ, ಮಾನವ ಹಕ್ಕುಗಳು ಉಲ್ಲಂಘನೆಯಾದಲ್ಲಿ ಸಂವಿಧಾನಾತ್ಮಕವಾಗಿ ಪರಿಹಾರ ಕಂಡುಕೊಳ್ಳಬಹುದು. ಅಂಬೇಡ್ಕರ್ ಅವರು ಭಾರತ ದೇಶಕ್ಕೆ ಅತಿ ದೊಡ್ಡ ಸಂವಿಧಾನದಲ್ಲಿ ಮೂಲಭೂತ ಹಕ್ಕುಗಳನ್ನು ನೀಡುವ ಮೂಲಕ ಪ್ರತಿಯೊಬ್ಬರ ಅಭಿವೃದ್ಧಿ ಹಾಗೂ ಅಸ್ತಿತ್ವಕ್ಕೆ ಕಾರಣವಾಗಿದ್ದಾರೆ. ಎರಡು ಮಹಾಯದ್ದಗಳನ್ನು ನಂತರದಲ್ಲಿ ವಿಶ್ವ ಮಾನವ ಹಕ್ಕುಗಳ ಆಯೋಗ ಸ್ಥಾಪನೆಯಾಯಿತು ಮಾನವ ಹಕ್ಕುಗಳ ಸಂರಕ್ಷಣೆ ಮಾಡುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಿದೆ. ಪ್ರತಿಯೊಬ್ಬರು ಶಿಕ್ಷಣಕ್ಕೆ ಹೆಚ್ಚಿನ ಮಹತ್ವವನ್ನು ನೀಡಬೇಕು ಎಂದರು.

ಇದೇ ವೇಳೆ ಮಾನವ ಹಕ್ಕುಗಳ ದಿನಾಚರಣೆಯ ಪ್ರತಿಜ್ಞಾ ವಿಧಿಯನ್ನು ಸ್ವೀಕರಿಸಲಾಯಿತು.

ಈ ವೇಳೆ ಅಪರ ಜಿಲ್ಲಾಧಿಕಾರಿ ಇ.ಬಾಲಕೃಷ್ಣಪ್ಪ, ಜಿಲ್ಲಾ ಪಂಚಾಯತಿ ಉಪ ಕಾರ್ಯದರ್ಶಿ ಕೆ.ತಿಮ್ಮಪ್ಪ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಸಿದ್ದಲಿಂಗೇಶ ರಂಗಣ್ಣನವರ್. ಹೊಸಪೇಟೆ ಬಿಇಓ ಶೇಖರಪ್ಪ ಹೊರಪೇಟೆ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

# ಪತ್ರಿಕೋದ್ಯಮ ಅಪ್ರೆಂಟಿಸ್ ತರಬೇತಿಗೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ 2025–26ನೇ ಸಾಲಿಗೆ ಎಸ್.ಸಿ.ಎಸ್.ಪಿ ಮತ್ತು ಟಿ.ಎಸ್.ಪಿ ಯೋಜನೆಯಡಿ ಪರಿಶಿಷ್ಟ ಜಾತಿಯ 01 ಮತ್ತು ಪರಿಶಿಷ್ಟ ಪಂಗಡದ 01 ಅಭ್ಯರ್ಥಿಗಳ ಆಯ್ಕೆಗೆ ಪತ್ರಿಕೋದ್ಯಮ ಪದವೀಧರ ಅಥವಾ ಸ್ನಾತಕೋತ್ತರ ಪದವೀಧರರಿಗೆ ಚಿಕ್ಕಬಳ್ಳಾಪುರ ಜಿಲ್ಲಾ ಕಚೇರಿಯಲ್ಲಿ 12 ತಿಂಗಳ ಅವಧಿಯ ಅಪ್ರೆಂಟಿಸ್ ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಕರ್ನಾಟಕದಲ್ಲಿ ಕಾನೂನಾತ್ಮಕವಾಗಿ ಸ್ಥಾಪಿತಗೊಂಡ ವಿಶ್ವವಿದ್ಯಾನಿಲಯದಿಂದ ಪತ್ರಿಕೋದ್ಯಮದಲ್ಲಿ ಪದವಿ ಅಥವಾ ಸ್ನಾತಕೋತ್ತರ ಪದವಿ ಪೂರ್ಣಗೊಳಿಸಿರುವ ಹಾಗೂ ಕಂಪ್ಯೂಟರ್ ಜ್ಞಾನವಿರುವ ಕನ್ನಡ ಭಾಷೆ ಬಳಸಲು ಪ್ರಬುದ್ಧತೆ ಇರುವ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಬಹುದಾಗಿದೆ.

ಮೆರಿಟ್ ಹಾಗೂ ಸಂದರ್ಶನದ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಅರ್ಜಿಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳಿಗೆ 35ವರ್ಷ ಒಳಗಿರಬೇಕು.

ತರಬೇತಿಯ ಅವಧಿ ವೇಳೆ ಮಾಹೆಯಾನ 15 ಸಾವಿರ ರೂಪಾಯಿ ಸ್ಟೈಪೆಂಡ್ ನೀಡಲಾಗುವುದು. ಒಮ್ಮೆ ಫಲಾನುಭವಿಯಾದವರನ್ನು ಈ ಯೋಜನೆಯಡಿ ಮತ್ತೊಂದು ಅವಧಿಗೆ ಆಯ್ಕೆ ಮಾಡಲು ಅವಕಾಶವಿರುವುದಿಲ್ಲ. ವಿಶೇಷ ಘಟಕ ಯೋಜನೆಯಡಿ ಹಾಗೂ ಗಿರಿಜನ ಉಪಯೋಜನೆಯಡಿ ಯಾವುದೇ ಜಿಲ್ಲೆಯಲ್ಲಿ ಅರ್ಹ ಅಭ್ಯರ್ಥಿಗಳು ದೊರೆಯದೆ ಇದ್ದಲ್ಲಿ ನೆರೆಯ ಜಿಲ್ಲೆಗಳಿಂದ ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಳ್ಳಲಾಗುವುದು.

2025ರ ಡಿಸೆಂಬರ್ 23 ರೊಳಗೆ ಅರ್ಜಿಸಲ್ಲಿಸಬೇಕು. ಅರ್ಜಿಯನ್ನು ಹಿರಿಯ ಸಹಾಯಕ ನಿರ್ದೇಶಕರ ಕಚೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾಡಳಿತ ಭವನ, ಚಿಕ್ಕಬಳ್ಳಾಪುರ ಇಲ್ಲಿ ಪಡೆದು ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ಈ ಕಚೇರಿಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಹಿರಿಯ ಸಹಾಯಕ ನಿರ್ದೇಶಕರ ಮೊ.ನಂ.9480841224, ವಾರ್ತಾ ಸಹಾಯಕರ ಮೊ.ನಂ. 9353592472 ಸಂಪರ್ಕಿಸುವಂತೆ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಅಸ್ತಮಾಕ್ಕೆ ಔಷಧಿ ವಿತರಣೆ

**ದಾವಣಗೆರೆ:** ತಾಲ್ಲೂಕಿನ ಪಾಮೇನಹಳ್ಳಿ ಸಮೀಪದ ಶ್ರೀರಾಮನಗರದ ಸುಶ್ರುತ ಆಯುರ್ವೇದ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ಅಲರ್ಜಿ ಮತ್ತು ಅಸ್ತಮಾ ರೋಗಿಗಳಿಗೆ ವಿಶೇಷ ಔಷಧಿ ವಿತರಣೆ ಮಾಡಲಾಗುತ್ತದೆ. ನಾಳೆ ದಿನಾಂಕ 5 ರ ಶುಕ್ರವಾರ ಬೆಳಿಗ್ಗೆ 5 ರಿಂದ 7 ರವರೆಗೆ ಔಷಧವನ್ನು ನೀಡಲಾಗುತ್ತದೆ. ವಿವರಕ್ಕೆ ಸಂಪರ್ಕಿಸುವ ಮೊಬೈಲ್ ಸಂಖ್ಯೆ : 97403 –80466 – 08192–272020.

ಬೀದಿ ನಾಯಿಗಳ ಹಾವಳಿ ನಿಯಂತ್ರಣ ಕುರಿತ ಸಭೆ

# ಬೀದಿ ನಾಯಿ ನಿಯಂತ್ರಣಕ್ಕೆ ಕ್ರಮ ವಹಿಸಿ : ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ



**ಗದಗ:** ಜಿಲ್ಲೆಯಲ್ಲಿ ಬೀದಿ ನಾಯಿಗಳ ಹಾವಳಿ ನಿಯಂತ್ರಣಕ್ಕೆ ಸೂಕ್ತ ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಬೀದಿ ನಾಯಿಗಳ ಹಾವಳಿ ನಿಯಂತ್ರಣ ಕುರಿತು ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ನಗರದ ಬಸ್ ನಿಲ್ದಾಣ, ಅಂಗನವಾಡಿ ಕೇಂದ್ರ, ಹೋಟೆಲ್ , ಹಾಸ್ಟೆಲ್‌ಗಳ ವ್ಯಾಪ್ತಿಯಲ್ಲಿ ಸಂಬಂಧಿತ ಅಧಿಕಾರಿಗಳು ನೋಡಲ್ ಅಧಿಕಾರಿಗಳನ್ನು ನೇಮಕ ಮಾಡಿ ಅವರ ಮೂಲಕ ಬೀದಿ ನಾಯಿಗಳ ಸಂಖ್ಯೆಯ ವಿವರವನ್ನು ನಗರ ಸ್ಥಳೀಯ ಸಂಸ್ಥೆಗಳ ಮುಖ್ಯಸರು ಹಾಗೂ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಸಲ್ಲಿಸಬೇಕು ಎಂದರು.

ಬೀದಿ ನಾಯಿಗಳ ಸಂತಾನ ಹರಣ ಚಿಕಿತ್ಸಾ ಕೇಂದ್ರಗಳನ್ನು ಸ್ಥಾಪಿಸಲು ಸೂಕ್ತ ಜಾಗೆಗಳನ್ನು ಗುರುತಿಸಿ ಕ್ರಮ ಜರುಗಿಸಬೇಕು. ಪ್ರತಿ ಹೋಬಳಿ ಮಟ್ಟಗಳಲ್ಲಿ ಬೀದಿ ನಾಯಿಗಳ ಸಾಕು ಪಾಲನಾ ಕೇಂದ್ರಗಳನ್ನು ಸ್ಥಾಪಿಸಬೇಕು. ಸರ್ವೋಚ್ಚ ನ್ಯಾಯಾಲಯದ ಆದೇಶದನ್ವಯ ಈವರೆಗೆ ಕೈಗೊಂಡ ಕ್ರಮಗಳ ಕುರಿತು ಆಯಾ ಸಂಸ್ಥೆಗಳ ಮುಖ್ಯಸ್ಥರು ಮುಚ್ಚಳಿಕೆ ಪತ್ರ ಸಲ್ಲಿಸಲು ಜಿಲ್ಲಾಧಿಕಾರಿಗಳು ಸೂಚಿಸಿದರು.

ಬೀದಿ ನಾಯಿಗಳಿಂದ ಮಕ್ಕಳಿಗೂ, ಮಹಿಳೆಯರಿಗೂ, ಹಿರಿಯ ನಾಗರಿಕರಿಗೂ ಅಪಾಯ ಉಂಟಾಗುತ್ತಿರುವ ಘಟನೆಗಳು ಕೆಲವೆಡೆ ವರದಿಯಾಗಿರುವ ಹಿನ್ನೆಲೆಯಲ್ಲಿ, ಸಮಸ್ಯೆ ಗಂಭೀರವಾಗುವ ಮುನ್ನ ಪರಿಣಾಮಕಾರಿ ಕ್ರಮ ಕೈಗೊಳ್ಳಬೇಕೆಂದು ಸಿ ಎನ್ ಶ್ರೀಧರ ಸೂಚಿಸಿದರು.

ಜಿಲ್ಲೆಯಾದ್ಯಂತ ಕಸದ ಸಮರ್ಪಕ ನಿರ್ವಹಣೆಗಾಗಿ ಮಾರುಕಟ್ಟೆ, ಹೋಟೆಲ್, ಮಾಂಸದಂಗಡಿಗಳು, ಸಾರ್ವಜನಿಕ ಸ್ಥಳಗಳ ತ್ಯಾಜ್ಯವನ್ನು ಮುಚ್ಚಿದ ಡಬ್ಬಿಗಳಲ್ಲಿ ಸಂಗ್ರಹಿಸುವ ಬಗ್ಗೆ ಕಟ್ಟುನಿಟ್ಟಿನ ಸೂಚನೆ ನೀಡಲು ಸಭೆಯಲ್ಲಿ ಚರ್ಚಿಸಲಾಯಿತು.

ಈ ಸಂದರ್ಭದಲ್ಲಿ ಜಿ.ಪಂ. ಉಪಕಾರ್ಯದರ್ಶಿ ಸಿ.ಆರ್.ಮುಂಡರಗಿ, ಡಿ.ವೈ.ಎಸ್.ಪಿ.ಮಹಾಂತೇಶ ಸಜ್ಜನ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೋಟೂರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಎಸ್.ಎಸ್.ನೀಲಗುಂದ, ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ವೆಂಕಟೇಶ ರಾಠೋಡ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಮೆಹಬೂಬ ತುಂಬರಮಟ್ಟಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಶ್ರೀಮತಿ ಪದ್ಮಾವತಿ ಜಿ, ನಗರ ಹಾಗೂ ಸ್ಥಳೀಯ ಸಂಸ್ಥೆಯ ಮುಖ್ಯಸ್ಥರು, ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ ಸಿಬ್ಬಂದಿಗಳು ಹಾಜರಿದ್ದರು.

# 12–13 ರಂದು ಕಂದಾಯೋತ್ಸವ : ಅಭಿಷೇಕ್ ವಿ

**ಶಿವಮೊಗ್ಗ :** ಒತ್ತಡದಲ್ಲಿ ಕಾರ್ಯನಿರ್ವಹಿಸುವ ಕಂದಾಯ ಇಲಾಖೆಯ ಅಧಿಕಾರಿ–ಸಿಬ್ಬಂಧಿಗಳು ತಮ್ಮ ದೈನಂದಿನ ಒತ್ತಡದಿಂದ ಹೊರಬಂದು ಕ್ರೀಡೆ, ಮನೋರಂಜನೆ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಭಾಗವಹಿಸುವುದರಿಂದ ಕಾರ್ಯಕ್ಷೇತ್ರದಲ್ಲಿ ಇನ್ನಷ್ಟು ಹೊಸತನದಿಂದ ಕಾರ್ಯನಿರ್ವಹಿಸಲು ಸಾಧ್ಯವಾಗಲಿದೆ. ಈ ಕಾರಣದಿಂದಾಗಿ ಇದೇ ಮೊದಲ ಬಾರಿಗೆ ಶಿವಮೊಗ್ಗದಲ್ಲಿ ಡಿಸೆಂಬರ್12 ಮತ್ತು 13ರಂದು ಕಂದಾಯ ಇಲಾಖಾ ನೌಕರರು, ಅವರ ಕುಟುಂಬದ ಸದಸ್ಯರಿಗಾಗಿ ಕ್ರೀಡಾಕೂಟ, ಸಾಂಸ್ಕೃತಿಕ ಸ್ಪರ್ಧೆ ಹಾಗೂ ಸಮ್ಮೇಳನವನ್ನು ಆಯೋಜಿಸಲಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಅಭಿಷೇಕ್ವಿ. ಅವರು ಹೇಳಿದರು.

ಅವರು ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಕಂದಾಯ ನೌಕರರ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು. ಡಿಸೆಂಬರ್12ರಂದು ಪಿ.ಇ.ಎಸ್.ಇಂಜಿನಿಯರಿಂಗ್ಕಾಲೇಜಿನ ಅಬ್ದುಲ್ಕಲಾ ಕ್ರೀಡಾಂಗಣದಲ್ಲಿ ಕ್ರೀಡಾಕೂಟ ನಡೆಯಲಿದ್ದು, ಪುರುಷ ಮತ್ತು ಮಹಿಳೆಯರಿಗೆ ವೈಯಕ್ತಿಕ ಮತ್ತು ಗುಂಪು ಸ್ಪರ್ಧೆಗಳನ್ನು ಆಯೋಜಿಸಲಾಗಿದೆ. ಡಿಸೆಂಬರ್13ರಂದು ರಾಜ್ಯ ಸರ್ಕಾರಿ ನೌಕರರ ಸೇವಾ ವಿಕಾಸ ಕೇಂದ್ರದಲ್ಲಿ ಸಂಗೀತ ನೃತ್ಯ ಮುಂತಾದ ಸಾಂಸ್ಕೃತಿಕ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ.ಡಿ.12ರಂದು ಬೆಳಿಗ್ಗೆ 08ಗಂಟೆಗೆ ಪಿ.ಇ.ಎಸ್. ಇಂಜಿನಿಯರಿಂಗ್ಕಾಲೇಜಿನ ಅಬ್ದುಲ್ಕಲಾ ಕ್ರೀಡಾಂಗಣದಲ್ಲಿ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅವರು ಕ್ರೀಡಾಕೂಟವನ್ನು ಉದ್ಘಾಟಿಸಲಿದ್ದಾರೆ.

# ಡಿ.18 ರಂದು ಸಾರ್ವಜನಿಕ ಸಮಾಲೋಚನೆ ಸಭೆ

**ಹಾಸನ :** ಕೆಎಂಎಬಿಆರ್2006ರ ನಿಯಮ 131 ರಿಂದ 133 ರಲ್ಲಿರುವಂತೆ,ಹಾಸನ ಮಹಾನಗರ ಪಾಲಿಕೆಯ 2026–27ನೇ ಸಾಲಿನ ಆಯವ್ಯಯಅಂದಾಜು ಪಟ್ಟಿತಯಾರಿಸುವ ಸಂಬಂಧ ನೊಂದಾಯಿತ ವಸತಿಕ್ಷೇಮಾಭಿವದ್ದಿ ಸಂಘಗಳು, ನೊಂದಾಯಿತ ಸರ್ಕಾರೇತರ ಸಂಘ ಸಂಸ್ಥೆಗಳು, ವಾಣಿಜ್ಯ ಮತ್ತುಕೈಗಾರಿಕಾ ಸಂಘಗಳು, ಇತರೆ ಸಂಘ ಸಂಸ್ಥೆಗಳ ಪ್ರತಿನಿಧಿಗಳು, ರಾಜಕೀಯ ಮುಖಂಡರುಗಳು, ಹಿರಿಯ ನಾಗರೀಕರು, ಮಾಧ್ಯಮದವರು ಮತ್ತು ಸಾರ್ವಜನಿಕ ಅಭಿಪ್ರಾಯಗಳನ್ನು ಸಂಗ್ರಹಿಸಲು ಮೊದಲನೇ ಸುತ್ತಿನ ಸಾರ್ವಜನಿಕ ಸಮಾಲೋಚನೆ ಸಭೆಯನ್ನುಡಿ.18ರಂದುಅಪರಾಹ್ನ 12.30 ಗಂಟೆಗೆನಗರದಬಿ.ಎಂ ರಸ್ತೆಯಲ್ಲಿರುವ ಸಂತೇಪೇಟೆಯ ಮಹಾನಗರ ಪಾಲಿಕೆಯ "ಕುವೆಂಪು ಸಭಾಂಗಣ"ದಲ್ಲಿಮೈಸೂರು ವಿಭಾಗದಪ್ರಾದೇಶಿಕ ಆಯುಕ್ತರುಹಾಗೂ ಹಾಸನ ಮಹಾನಗರ ಪಾಲಿಕೆಯಆಡಳಿತಾಧಿಕಾರಿಗಳಅಧ್ಯಕ್ಷತೆಯಲ್ಲಿಏರ್ಪಡಿಸಲಾಗಿದೆ.ಸದರಿ ಸಭೆಗೆ ಸಾರ್ವಜನಿಕರು, ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಸಮಾಜ ಸೇವಕರು ಹಾಗೂ ರಾಜಕೀಯ ಮುಖಂಡರುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮಅಮೂಲ್ಯ ಸಲಹೆಗಳನ್ನು ನೀಡಿ ಹಾಸನ ಮಹಾನಗರ ಪಾಲಿಕೆಯ 2025–26ನೇ ಸಾಲಿನ ನಗರಅಭಿವೃದ್ಧಿಗೆ ಸಂಬಂಧಿಸಿದಂತೆ ಚರ್ಚಿಸಿ ಸಭೆಯನ್ನು ಯಶಸ್ವಿಗೊಳಿಸಲುಮಹಾನಗರಪಾಲಿಕೆಯಆಯುಕ್ತರು ತಿಳಿಸಿದ್ದಾರೆ.

# ಸರ್ಕಾರಿ ನೌಕರರ ಸಂಘಕ್ಕೆ ಕಾರ್ಯದರ್ಶಿಗಳಾಗಿ ಆಯ್ಕೆ





**ದಾವಣಗೆರೆ :** ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಕಾರ್ಯಕಾರಿ ಸಭೆಯಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರ ಸಂಘ ದಾವಣಗೆರೆ ಜಿಲ್ಲೆ ಶಾಖೆಯ ನೂತನ ಜಿಲ್ಲಾ ಶಾಖೆಯ ಕಾರ್ಯದರ್ಶಿಗಳಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಸಿ.ಪರಶುರಾಮಪ್ಪ ಆಯ್ಕೆಯಾಗಿದ್ದಾರೆ ಹಾಗೂ ರಾಜನಹಳ್ಳಿ ಸೀತಮ್ಮ ಬಾಲಕಿಯರ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರಾದ ಬಿ.ಪಾಲಾಕ್ಷಿ ಯವರು ಕಾರ್ಯ ಅಧ್ಯಕ್ಷರಾಗಿ ಆಯ್ಕೆ ಆಗಿದ್ದಾರೆ ಎಂದು ಸಂಘದ ರಾಜ್ಯ ಉಪಧ್ಯಕ್ಷರು ಹಾಗೂ ಜಿಲ್ಲಾ ಅಧ್ಯಕ್ಷರಾದ ಎಸ್.ವೀರೇಶ್ ವಡೇನಪುರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೇವನಹಳ್ಳಿಯಲ್ಲಿ ಬಸ್ಸಿಗೆ ಕಾರು ಡಿಕ್ಕಿ, ಮೂವರು ಸಾವು

**ದೇವನಹಳ್ಳಿ:** ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ಹೊರವಲಯದ ಲಾಲಗೊಂಡನಹಳ್ಳಿ ಗೇಟ್ ಬಳಿ ರಾತ್ರಿ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಮೂವರು ಸ್ಥಳದಲ್ಲೇ ದುರ್ಮರಣ ಹೊಂದಿದ್ದಾರೆ. ದೇವನಹಳ್ಳಿ ಸಂಚಾರಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ದುರ್ಘಟನೆ ನಡೆದಿದೆ. ಚಿಕ್ಕಬಳ್ಳಾಪುರ ದಿಕ್ಕಿನಿಂದ ದೇವನಹಳ್ಳಿ ಕಡೆಗೆ ಬರುತ್ತಿದ್ದ ಕಾರು ಅತಿವೇಗದಲ್ಲಿ ಸಂಚರಿಸುತ್ತಿತ್ತು ಎನ್ನಲಾಗಿದೆ. ಚಾಲಕನ ನಿಯಂತ್ರಣ ತಪ್ಪಿದ ಕಾರು ಡಿವೈಡರ್ ಹಾರಿ ಎದುರುಗಡೆಯಿಂದ ಬರುತ್ತಿದ್ದ ಕೆಎಸ್?ಆರ್?ಟಿಸಿ ಬಸ್‌ಗೆ ಡಿಕ್ಕಿಯಾಗಿದೆ.

ಡಿಕ್ಕಿಯ ರಭಸಕ್ಕೆ ಕಾರು ಸಂಪೂರ್ಣ ನಜ್ಜುಗುಜ್ಜಾಗಿದ್ದು, ಕಾರಿನಲ್ಲಿದ್ದ ಮೂವರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಎಂ 50 ಒಂ 0789 ಸಂಖ್ಯೆಯ ಕಾರ್ ವೇಗವಾಗಿ ಚಿಕ್ಕಬಳ್ಳಾಪುರ ಕಡೆಯಿಂದ ದೇವನಹಳ್ಳಿಯತ್ತ ತೆರಳುತ್ತಿತ್ತು. ಮೃತರನ್ನು ಮೋಹನ್ ಕುಮಾರ್ (33), ಸುಮನ್ (28), ಸಾಗರ್ (23) ಎಂದು ಗುರುತಿಸಲಾಗಿದೆ. ಅಪಘಾತಕ್ಕೆ ಅತಿಯಾದ ವೇಗ ಕಾರಣ ಎಂದು ಹೇಳಲಾಗುತ್ತಿದೆ. ಕೆಎಸ್‌ಆರ್‌ಟಿಸಿ ಬಸ್‌ನಲ್ಲಿ ಪ್ರಯಾಣಿಸುತ್ತಿದ್ದ ಕೆಲವರಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಘಟನಾ ಸ್ಥಳಕ್ಕೆ ದೇವನಹಳ್ಳಿ ಸಂಚಾರಿ ಪೊಲೀಸ್ ಠಾಣೆಯ ಸಿಬ್ಬಂದಿ ಧಾವಿಸಿದ್ದು ರಕ್ಷಣಾ ಕಾರ್ಯಾಚರಣೆ ನಡೆಸಿದ್ದಾರೆ.

ಅಪಘಾತದ ಕಾರಣ ಹೈದರಾಬಾದ್ ಬೆಂಗಳೂರು ಹೆದ್ದಾರಿಯಲ್ಲಿ ರಾತ್ರಿ ಟ್ರಾಫಿಕ್ ಜಾಮ್ ಉಂಟಾಯಿತು. ಅಪಘಾತದ ರಭಸಕ್ಕೆ ನಜ್ಜುಗುಜ್ಜಾದ ಕಾರಿನಲ್ಲಿ ಸಿಲುಕಿದ್ದ ಮೃತದೇಹಗಳನ್ನು ಹೊರ ತೆಗೆಯಲು ಪೊಲೀಸರು ಹರಸಾಹಸ ಪಡಬೇಕಾಯಿತು.

ಇದರಿಂದಾಗಿ ಹೆದ್ದಾರಿಯಲ್ಲಿ ಸಂಚಾರ ದಟ್ಟಣೆ ಉಂಟಯಿತು. ಸದ್ಯ ಮೃತದೇಹಗಳನ್ನು ಆಕಾಶ್ ಆಸ್ಪತ್ರೆಯ ಶವಾಗಾರಕ್ಕೆ ರವಾನಿಸಲಾಗಿದೆ. ಮೃತರ ಗುರುತು ಪತ್ತೆ ಇನ್ನಷ್ಟೇ ಆಗಬೇಕಿದೆ.

# ಒಂಟಿ ಮಹಿಳೆಯ ಸರ ಕಳವು: ಆರೋಪಿಗಳ ಬಂಧನ, ಮಾಲು ವಶ

**ಚಿಕ್ಕಬಳ್ಳಾಪುರ:** ಬಟ್ಲಹಳ್ಳಿ ಠಾಣಾ ವ್ಯಾಪ್ತಿಯ ದಿಗವಕೋಟೆ ಗ್ರಾಮದ ಶಾರದಮ್ಮ ಅವರು ಅಕ್ಟೋಬರ್ 16ರಂದು ಒಂಟಿಯಾಗಿ ಮನೆಯಲ್ಲಿದ್ದಾಗ ಯಾರೋ ಇಬ್ಬರು ಅಪರಿಚಿತರು ಕೊಲ್ಲುವುದಾಗಿ ಬೆದರಿಸಿ ಈಕೆಯ ಬಳಿಯಿದ್ದ 35 ಗ್ರಾಂ ತೂಕದ ಬಂಗಾರದ ಮಾಂಗಲ್ಯದ ಸರವನ್ನು ಕಸಿದು ಹೋಗಿದ್ದರು. ಈ ಸಂಬಂಧ ಸಂತ್ರಸ್ಥೆ ನೀಡಿದ ದೂರನ್ನು ದಾಖಲಿಸಿಕೊಂಡಿದ್ದ ಬಟ್ಲಹಳ್ಳಿ ಠಾಣೆ ಪೊಲೀಸರು ತನಿಖೆ ಮುಂದುವರೆಸಿದ್ದರು.

ಜಿಲ್ಲೆಯ ಎಸ್ಪಿ ಕುಶಾಲ್ ಚೌಕ್ಸೆ, ಎಸ್ಪಿ ಜಗನ್ನಾಥರೈ, ಚಿಂತಾಮಣಿ ಉಪವಿಭಾಗದ ಡಿವೈಎಸ್ಪಿ ಪಿ.ಮುರಳೀಧರ್, ಕೆಂಚಾರ್ಲಹಳ್ಳಿ ವೃತ್ತದ ಸರ್ಕಲ್ ಇನ್ಸ್‌ಪೆಕ್ಟರ್ ನಾರಾಯಣಸ್ವಾಮಿ,ಬಟ್ಲಹಳ್ಳಿ, ಪೊಲೀಸ್ ಠಾಣೆಯ ಪಿ.ಎಸ್.ಐ ಶಿವಕುಮಾರ್ ಹಾಗೂ ಸಿಬ್ಬಂದಿಗಳಾದ ಹೆಚ್.ಸಿ 37 ಮಂಜುನಾಥ ಬಿ.ಎನ್, ಪಿಸಿ 126 ವೆಂಕಟೇಶ್ ಮತ್ತು ಪಿಸಿ 117 ಪುವೀಣ್ ಕುಮಾರ್ ಅವರ ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಪ್ರಕರಣದ ಆರೋಪಿಗಳಾದ ಎ1 ಶ್ರೀರಾಮಪ್ಪ ಎನ್ ಬಿನ್ ವೆಂಕಟೇಶಪ್ಪ, 35 ವರ್ಷ, ಬೋವಿ ಜನಾಂಗ, ಗಾರೆ ಕೆಲಸ, ನಾರಾಯಣಹಳ್ಳಿ ಗ್ರಾಮ, ಚಿಂತಾಮಣಿ ತಾಲ್ಲೂಕು. ಎ2 ಶ್ರೀ ಮಾರಪ್ಪ ಬಿನ್ ನಾರಾಯಣಪ್ಪ, 32 ವರ್ಷ, ಬೋವಿ ಜನಾಂಗ, ಗಾರೆ ಕೆಲಸ, ನಾರಾಯಣಹಳ್ಳಿಗ್ರಾಮ, ಚಿಂತಾಮಣಿ ತಾಲ್ಲೂಕು ರವರನ್ನು ಡಿ.8ರಂದು ವಶಕ್ಕೆ ಪಡೆದು ಆರೋಪಿಗಳಿಂದ 325000 ರೂ ಬೆಲೆ ಬಾಳುವ 25.17 ಗ್ರಾಂ ತೂಕದ ಬಂಗಾರದ ಚೈನ್‌ನ್ನು ವಶಕ್ಕೆ ಪಡೆದು ಆರೋಪಿಗಳನ್ನು ಜೈಲಿಗೆ ಅಟ್ಟಿದ್ದಾರೆ.

ತನಿಖೆಯಲ್ಲಿ ಪಾಲ್ಗೊಂಡಿದ್ದ ಪೊಲೀಸ್ ಅಧಿಕಾರಿಗಳಾದ ನಾರಾಯಣಸ್ವಾಮಿ ಜಿ.ಸಿ, ವೃತ್ತ ನಿರೀಕ್ಷಕರು, ಕೆಂಚಾರ್ಲಹಳ್ಳಿ ವೃತ್ತ,ಶಿವಕುಮಾರ್ ಪಿ.ಎಸ್.ಐ ಬಟ್ಲಹಳ್ಳಿ ಪೊಲೀಸ್ ಠಾಣೆ ಹಾಗೂ ಸಿಬ್ಬಂದಿಗಳಾದ ಹೆಚ್.ಸಿ 37 ಮಂಜುನಾಥ ಬಿ.ಎನ್, ಪಿಸಿ 126 ವೆಂಕಟೇಶ್ ಹಾಗೂ ಪಿಸಿ 117 ಪ್ರವೀಣ್ ಕುಮಾರ್ ರವರ ಉತ್ತಮ ಕಾರ್ಯವನ್ನು ಎಸ್ಪಿ ಶ್ಲಾಘಿಸಿ ಅಭಿನಂದಿಸಿರುತ್ತಾರೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 1000 ಅಡಿ ಕಂದಕಕ್ಕುರುಳಿದ ಕಾರ್ಮಿಕರಿದ್ದ ಟ್ರಕ್; 21 ಜನರು ಸ್ಥಳದಲ್ಲಿ ಮೃತಪಟ್ಟಿರುವ ಶಂಕೆ

**ದಿಸ್ಪುರ:** ಅರುಣಾಚಲ ಪ್ರದೇಶದ ಹಯುಲಿಯಾಂಗ್ ಚಾಗಲಗಂ ರಸ್ತೆಯ ಬಳಿ ಡಿಸೆಂಬರ್ 7 ರಂದು ಅಸ್ಸಾಂನ ಕಾರ್ಮಿಕರನ್ನು ಹೊತ್ತೊಯ್ಯುತ್ತಿದ್ದ ಟ್ರಕ್ 1,000 ಅಡಿ ಆಳದ ಕಮರಿಗೆ ಉರುಳಿಬಿದ್ದ ಪರಿಣಾಮ ಕನಿಷ್ಠ 21 ಕಾರ್ಮಿಕರು ಸಾವನ್ನಪ್ಪಿರುವ ಶಂಕೆ ವ್ಯಕ್ತವಾಗಿದೆ. ಈ ಘಟನೆ ಐದು ದಿನಗಳ ಹಿಂದೆ ನಡೆದಿದ್ದರೂ, ಬುಧವಾರ ರಾತ್ರಿಯಷ್ಟೇ ಪೊಲೀಸರಿಗೆ ಮಾಹಿತಿ ಸಿಕ್ಕಿದೆ. ಗುರುವಾರ ಬೆಳಗಿನ ಜಾವ ಶೋಧ ಮತ್ತು ರಕ್ಷಣಾ ಕಾರ್ಯಾಚರಣೆ ಆರಂಭವಾಯಿತು. ಕಾರ್ಮಿಕರನ್ನು ನಿರ್ಮಾಣ ಸ್ಥಳಕ್ಕೆ ಕರೆದೊಯ್ಯುತ್ತಿದ್ದಾಗ ರಸ್ತೆಯಿಂದ ಜಾರಿ ಆಳವಾದ ಕಂದಕ-ಕ್ಕೆ ಬಿದ್ದಿದೆ ಎಂದು ಹೇಳಲಾಗಿದೆ.

ಮಿಥುಂಗ್ಲಾ ಮತ್ತು ಮೈಲಾಂಗ್ ಬಸ್ತಿ ನಡುವೆ ಇರುವ ಲೈಲಾಂಗ್ ಬಸ್ತಿಯ ಈ ಅಪಘಾತ ಸಂಭವಿಸಿದೆ ಎಂದು ವರದಿಯಾಗಿದೆ, ಆದರೆ ಘಟನೆಯ ಸುತ್ತಲಿನ ವಿವರಗಳು ಇನ್ನೂ ಸ್ಪಷ್ಟವಾಗಿಲ್ಲ.


**ಕರ್ನಾಟಕ ನೀರಾವರಿ ನಿಗಮ ನಿಯಮಿತ**
(ಕರ್ನಾಟಕ ಸರ್ಕಾರದ ಉದ್ಯಮ)
**ಕಾರ್ಯಪಾಲಕ ಇಂಜಿನಿಯರ್‌ರವರ ಕಛೇರಿ, ಕನೀನಿನಿ, ನಂ.5, ಭದ್ರಾ ನಾಲಾ ವಿಭಾಗ, ದಾವಣಗೆರೆ. ಫೋ: 08192-264669**
**ಇ-ಮೇಲ್: eebcddvg@yahoo.co.in**

ಸಂ: ಕಾ.ಇಂ/ಕ.ನೀ.ನಿ.ನಿ/ಭ.ನಾ.ವಿ.5/ದಾ/ಪಿ.ಬಿ-1/2700ಭದ್ರಾ/2025-26/1850
ದಿನಾಂಕ:09-12-2025

**ಟೆಂಡರ್ ಪ್ರಕಟಣೆ**

ಉಲ್ಲೇಖ:- **No: EE/KNNL/ BCD-5/DVG/PB-1/2700 works/ 2025-26/ 1849, Dated: 09-12-2025**

ವ್ಯವಸ್ಥಾಪಕ ನಿರ್ದೇಶಕರು, ಕ.ನೀ.ನಿ.ನಿ, ಬೆಂಗಳೂರು ಇವರ ಪರವಾಗಿ ಕಾರ್ಯಪಾಲಕ ಇಂಜಿನಿಯರ್, ಕ.ನೀ.ನಿ.ನಿ, ನಂ.5 ಭದ್ರಾ ನಾಲಾ ವಿಭಾಗ, ದಾವಣಗೆರೆ ರವರು, ಉಲ್ಲೇಖಿತ ಟೆಂಡರ್ ಪ್ರಕಟಣೆಯಲ್ಲಿ ಲೆಕ್ಕ ಶೀರ್ಷಿಕೆ 2700 ಭದ್ರಾ ಅಡಿಯಲ್ಲಿನ ಕಾಮಗಾರಿಗಳಿಗೆ ಏಕ ಲಕೋಟೆ ಪದ್ಧತಿಯಲ್ಲಿ ಕೆಪಿಪಿಪಿ-ಪೋರ್ಟ್‌ಲ್ ಮುಖಾಂತರ ಟೆಂಡರ್‌ನ್ನು ಅಹ್ವಾನಿಸಿದ್ದು, ಟೆಂಡರ್‌ಗಿಟ್ಟ ಮೊತ್ತ ರೂ.1.24 ಲಕ್ಷಗಳಿಂದ ರೂ.10.07ಲಕ್ಷಗಳವರೆಗೆ ಇರುತ್ತದೆ. ಅರ್ಹ ಗುತ್ತಿಗೆದಾರರಿಂದ ಶೇಕಡಾವಾರು ಟೆಂಡರ್‌ಗಳನ್ನು ಕೆಪಿಪಿಪಿ-ಪೋರ್ಟ್‌ಲ್ ವೆಬ್‌ಸೈಟ್ (https://kppp.karnataka.gov.in) ಮುಖಾಂತರವೇ ದಿ: 10.12.2025 ರಿಂದ ಡೌನಲೋಡ್ ಮಾಡಿಕೊಂಡು ದಿ:18-12-2025 ರ ಸಂಜೆ 5.00 ಘಂಟೆವರೆಗೆ ಟೆಂಡರ್‌ಗಳನ್ನು ಸಲ್ಲಿಸಬಹುದಾಗಿರುತ್ತದೆ. ಟೆಂಡರ್ ಕುರಿತು ಸ್ಪಷ್ಟೀಕರಣಕ್ಕೆ ದಿನಾಂಕ: 15-12-2025 ರಂದು 4.00 ಘಂಟೆವರೆಗೆ ಅವಕಾಶವಿರುತ್ತದೆ ಮತ್ತು ಆರ್ಥಿಕ ಬಿಡ್‌ನ್ನು ತೆರೆಯುವ ದಿನಾಂಕ: 19-12-2025 ರಂದು ಸಂಜೆ 5.10 ಘಂಟೆಗೆ ತೆರೆಯಲಾಗುವುದು.

ಒಟ್ಟು ಕಾಮಗಾರಿ ಸಂಖ್ಯೆ :- 18 ಸಂಖ್ಯೆಗಳು.

ಯಾವುದೇ ಕಾರಣ ನೀಡದೆ ಟೆಂಡರ್‌ಗಳನ್ನು ಮುಂದೂಡುವ, ಅಂಗಿಕರೀಸುವ ಅಥವಾ ತಿರಸ್ಕರಿಸುವ ಹಕ್ಕನ್ನು ಕೆಳಗೆ ಸಹಿ ಮಾಡಿರುವ ಅಧಿಕಾರಿಗಳು ಕಾಯ್ದಿರಿಸಿಕೊಂಡಿರುತ್ತಾರೆ. ಹೆಚ್ಚಿನ ಮಾಹಿತಿಗಾಗಿ ಕೆಪಿಪಿಪಿ-ಪೋರ್ಟ್‌ಲ್ ಅಥವಾ ಕಛೇರಿ ವೇಳೆಯಲ್ಲಿ ಕೆಳಗೆ ಸಹಿ ಮಾಡಿದವರ ಕಛೇರಿಯನ್ನು ಸಂಪರ್ಕಿಸಬಹುದಾಗಿರುತ್ತದೆ.

ವಾಸಾಇ/ಡಿವಿಜಿ/554/ ಕೆಎಸ್‌ಎಂಸಿಎ/2025-26 — **ಸಹಿ/- ಕಾರ್ಯಪಾಲಕ ಇಂಜಿನಿಯರ್, ಕನೀನಿನಿ ನಂ.5 ಭದ್ರಾ ನಾಲಾ ವಿಭಾಗ, ದಾವಣಗೆರೆ.**


# ನರೇಂದ್ರ ಮೋದಿ ಮತ್ತು ರಾಹುಲ್ ಗಾಂಧಿ ನಡುವೆ 88 ನಿಮಿಷಗಳ ಮಾತುಕತೆ

**ನವದೆಹಲಿ:** ಖಾಲಿಯಿರುವ ಮಾಹಿತಿ ಆಯೋಗದ ಹುದ್ದೆಗಳಿಗೆ ನೇಮಕಾತಿ ವಿಷಯಕ್ಕೆ ಸಂಬಂಧಿಸಿದಂತೆ ಪ್ರಧಾನಿ ನರೇಂದ್ರ ಮೋದಿ ಹಾಗೂ ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ನಡುವೆ ನಡೆದ 88 ನಿಮಿಷಗಳ ಸುದೀರ್ಘ ಸಭೆ ಸಂಸತ್ತಿನಲ್ಲಿ ಊಹಾಪೋಹಗಳಿಗೆ ಕಾರಣವಾಗಿದೆ. ಚಳಿಗಾಲದ ಅಧಿವೇಶನ ನಡೆಯುತ್ತಿರುವ ಹಿನ್ನೆಲೆಯಲ್ಲಿ ಮಾಹಿತಿ ಆಯುಕ್ತರ ಅಭ್ಯರ್ಥಿಗಳ ಆಯ್ಕೆ ಕುರಿತು ಉಭಯ ನಾಯಕರು ಪರಸ್ಪರ ಚರ್ಚಿಸಿದ್ದಾರೆ ಎನ್ನಲಾಗಿದೆ. ಇನ್ನು ನಾಮನಿರ್ದೇಶಿತ ಒಬ್ಬ ಕೇಂದ್ರ ಸಚಿವರು ಹಾಗೂ ವಿರೋಧ ಪಕ್ಷದ ನಾಯಕರು ಮಾಹಿತಿ ಆಯೋಗ, ಚುನಾವಣಾ ಆಯೋಗ ಮತ್ತು ವಿಜಿಲೆನ್ಸ್ ಇಲಾಖೆಯ ಪ್ರಮುಖ ಉನ್ನತ ಹುದ್ದೆಗಳ ಕುರಿತು ಚರ್ಚಿಸಲು ಮತ್ತೊಂದು ಸುತ್ತಿನ ಸಭೆ ನಡೆಸುವ ನಿರೀಕ್ಷೆಯಿದೆ. ಸಭೆಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಹಾಗೂ ರಾಹುಲ್ ಗಾಂಧಿಯವರು ಮಧ್ಯಾಹ್ನ 1 ಗಂಟೆಗೆ ಪ್ರಧಾನಿ ಕಛೇರಿಗೆ ತಲುಪಿದ ಬಳಿಕ 1 ಗಂಟೆ 7 ನಿಮಿಷಕ್ಕೆ ಸರಿಯಾಗಿ ಸಭೆ ಆರಂಭವಾಗಿದೆ. ಸಭೆಯಲ್ಲಿ ಮಾಹಿತಿ ಆಯೋಗ, ಚುನಾವಣಾ ಆಯೋಗದ ಕುರಿತು ಚರ್ಚೆ ನಡೆಸಿದ ಬಳಿಕ ಮಾಹಿತಿ ಆಯುಕ್ತರ ನೇಮಕ ಮಾತ್ರವಲ್ಲ, ಎಂಟು ಜನ ಮಾಹಿತಿ ಆಯುಕ್ತರು ಮತ್ತು ವಿಜಿಲೆನ್ಸ್ ಆಯುಕ್ತರ ನೇಮಕದ ಬಗ್ಗೆಯೂ ಚರ್ಚೆಯಾಗಿದೆ ಎಂದು ತಿಳಿದು ಬಂದಿದೆ. ಮೂಲಗಳ ಪ್ರಕಾರ ರಾಹುಲ್ ಗಾಂಧಿಯವರು ಎಲ್ಲಾ ನೇಮಕಾತಿಗಳಿಗೆ ಆಕ್ಷೇಪ ವ್ಯಕ್ತಪಡಿಸಿದ್ದಾರೆ.



ಹಾಗೂ ಲಿಖಿತ ರೂಪದಲ್ಲಿ ತಮ್ಮ ಆಕ್ಷೇಪಣೆ ಸಲ್ಲಿಸಿದ್ದು, ಆಯ್ಕೆಯ ಮಾನದಂಡಗಳ ಕುರಿತಾಗಿ ತಕರಾರು ಮತ್ತು ಭಿನ್ನಾಭಿಪ್ರಾಯಗಳನ್ನು ಹೊಂದಿದ್ದಾರೆ ಎನ್ನಲಾಗಿದೆ.

ಕಾಂಗ್ರೆಸ್ ಮೂಲಗಳ ಪ್ರಕಾರ, ಸಮಿತಿಯ ಮುಂದೆ ಪ್ರಸ್ತಾಪಿಸಲಾದ ದಲಿತ, ಆದಿವಾಸಿ, ಒಬಿಸಿ/ಇಬಿಸಿ ಮತ್ತು ಅಲ್ಪಸಂಖ್ಯಾತ ಅಭ್ಯರ್ಥಿಗಳು ಸಭೆಗೆ ಗೈರು ಹಾಜರಾಗಿರುವ ವಿಚಾರದಲ್ಲಿ ರಾಹುಲ್ ಗಾಂಧಿಯವರು ಅಸಮಧಾನ ವ್ಯಕ್ತ ಪಡಿಸಿದ್ದಾರೆ. ಈ ಹುದ್ದೆಗಳಿಗೆ ಅರ್ಜಿದಾರರ ಜಾತಿವಾರು ಮಾಹಿತಿಯನ್ನು ರಾಹುಲ್ ಗಾಂಧಿಯವರು ಕೇಳಿದ್ದು, ಅರ್ಜಿದಾರರ ಗುಂಪಿನಲ್ಲಿ ಶೇ. 7ಕ್ಕಿಂತ ಕಡಿಮೆ ಜನರು ಬಹುಜನ ಬಹುಸಂಖ್ಯಾತ ಸಮುದಾಯಗಳಿಂದ ಬಂದಿದ್ದಾರೆ ಎಂದು ತಿಳಿದು ಬಂದಿದೆ.

ನ್ಯಾಷನಲ್ ಹೆರಾಲ್ಡ್ ಪ್ರಕರಣ; ಸೋನಿಯಾ ಗಾಂಧಿ, ರಾಹುಲ್ ಗಾಂಧಿ ವಿರುದ್ಧ ಕ್ರಿಮಿನಲ್ ಪಿತೂರಿ ಆರೋಪ. ಈ ಕುರಿತು ಸಂಸತ್ತಿನ ಕಾರಿಡಾರ್‌ಗಳಲ್ಲಿ ಚರ್ಚೆ ತೀವ್ರವಾಗಿದ್ದು, ಕೇಂದ್ರ ಮಾಹಿತಿ ಆಯೋಗದಲ್ಲಿ ಮುಖ್ಯ ಆಯುಕ್ತರ ಹುದ್ದೆಯೂ ಸೇರಿದಂತೆ ಒಟ್ಟು 8 ಹುದ್ದೆಗಳು ಖಾಲಿಯಿವೆ. ಆರ್‌ಟಿಐ ಅರ್ಜಿದಾರರು ಸಲ್ಲಿಸಿರುವ ದೂರುಗಳು ಮತ್ತು ಮೇಲ್ಮನವಿಗಳನ್ನು ಅಧಿಕಾರಿಗಳೇ ಪರಿಶೀಲಿಸುತ್ತಾರೆ.

ಸೆಪ್ಟೆಂಬರ್ ಮಧ್ಯದವರೆಗೆ ಹಿರಾಲಾಲ್ ಸಮಾರಿಯಾ ಭಾರತದ ಮುಖ್ಯ ಮಾಹಿತಿ ಆಯುಕ್ತರಾಗಿ ಸೇವೆ ಸಲ್ಲಿಸಿದರು. ಸೆಪ್ಟೆಂಬರ್ 13 ರಂದು ಅವರು ನಿವೃತ್ತಿ ಹೊಂದಿದ ಬಳಿಕ ಈ ಹುದ್ದೆ ಖಾಲಿಯಾಗಿದೆ. ಪ್ರಸ್ತುತ ಇಲಾಖೆಯಲ್ಲಿ ಕೇವಲ ಇಬ್ಬರು ಮಾಹಿತಿ ಆಯುಕ್ತರು ಮಾತ್ರ ಕೆಲಸ ನಿರ್ವಹಿಸುತ್ತಿದ್ದಾರೆ.

ಅಂತಿಮ ನೇಮಕಾತಿಗಳನ್ನು ಶೀಘ್ರದಲ್ಲೇ ಪ್ರಕಟಿಸುವ ನಿರೀಕ್ಷೆಯಿದೆ.

ಮಾಹಿತಿ ಹಕ್ಕು ಕಾಯ್ದೆಯ ಸೆಕ್ಷನ್ 12(3) ರ ಅಡಿಯಲ್ಲಿ, ಪ್ರಧಾನ ಮಂತ್ರಿಗಳು ಆಯ್ಕೆ ಸಮಿತಿಯ ಅಧ್ಯಕ್ಷರಾಗಿದ್ದಾರೆ.

ಮುಖ್ಯ ಮಾಹಿತಿ ಆಯುಕ್ತರು ಮತ್ತು ಮಾಹಿತಿ ಆಯುಕ್ತರ ನೇಮಕಾತಿಗೆ ಹೆಸರುಗಳನ್ನು ಆಯ್ಕೆ ಮಾಡಲು ಮತ್ತು ಶಿಫಾರಸು ಮಾಡಲು ವಿರೋಧ ಪಕ್ಷದ ನಾಯಕರು ಮತ್ತು ಪ್ರಧಾನ ಮಂತ್ರಿಗಳು ನಾಮನಿರ್ದೇಶನ ಮಾಡಿದ ಕೇಂದ್ರ ಸಚಿವರು ಇರುತ್ತಾರೆ.

# ಧರ್ಮಸ್ಥಳ ಬುರುಡೆ ಕೇಸ್ ಹಿಂದೆ ಅರ್ಬನ್ ನಕ್ಸಲರ ಸಂಚು: ಬಿಜೆಪಿ ಆರೋಪ

**ಬೆಳಗಾವಿ:** ಧರ್ಮಸ್ಥಳ ಪ್ರಕರಣ ಹಿಂದೆ ಷಡ್ಯಂತ್ರವಿದೆ ಎಂದು ನಾವು ಮೊದಲೇ ಹೇಳಿದ್ದೆವು. ಅದು ಈಗ ನಿಜವಾಗಿದ್ದು, ಸತ್ಯಕ್ಕೆ ಜಯವಾಗಿದೆ. ಈ ಬುರುಡೆ ಗ್ಯಾಂಗ್ ಹಿಂದೆ ಯಾರಿದ್ದಾರೆ ಎಂಬುದು ಹೊರಬರಬೇಕು ಎಂದು ಬಿಜೆಪಿ ನಾಯಕರು ಆಗ್ರಹಿಸಿದ್ದಾರೆ. ಸುವರ್ಣ ವಿಧಾನಸೌಧದ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಧರ್ಮಸ್ಥಳ ವಿಚಾರದಲ್ಲಿ ಅರ್ಬನ್ ನಕ್ಸಲ್ ಕೈವಾಡವಿದೆ ಎಂದು ಆರೋಪಿಸಿದರು.



ಆರು ಜನ ಪಿತೂರಿ ಮಾಡಿ, ಷಡ್ಯಂತ್ರ ಮಾಡಿದ್ದಾರೆ ಎಂದು ಬಿಜೆಪಿ ಮೊದಲೇ ಹೇಳಿತ್ತು. ಆ ಆರು ಜನರಿಗೆ ಹಣ ಸಹಾಯ ಮಾಡಿದ್ದು ಯಾರು ಆ ತಿಮಿಂಗಿಲ ಯಾರು ಎಂಬುದು ಹೊರಬರಬೇಕು. ಆ ಸೂತ್ರಧಾರನನ್ನು ಎಸ್‌ಐಟಿ ಪತ್ತೆ ಹಚ್ಚಿ ಬಂಧಿಸಬೇಕು. ಅಯ್ಯಪ್ಪ, ಶನಿ ಸಿಂಗ್ನಾಪುರ, ಧರ್ಮಸ್ಥಳ ಆಯಿತು. ಈಗ ಹಳ್ಳಿಯಲ್ಲಿರುವ ಮಾರಮ್ಮ, ಆಂಜನೇಯ ಸೇರಿ ಎಲ್ಲಾ ದೇವರನ್ನು ತರುತ್ತಾರೆ. ಸದನದಲ್ಲಿ ಈ ಬಗ್ಗೆಯೂ ಚರ್ಚೆ ಮಾಡುತ್ತೇವೆ ಎಂದರು.

ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಮಾತನಾಡಿ, ಧರ್ಮಸ್ಥಳ ಪ್ರಕರಣ ಕೋಟ್ಯಂತರ ಭಕ್ತರ ಧಾರ್ಮಿಕ ಭಾವನೆ ದುರ್ಬಲಗೊಳಿಸಲು ಮಾಡಿರುವ ಷಡ್ಯಂತ್ರ ಎಂದು ನಾನು ಮೊದಲೇ ಹೇಳಿದ್ದೆ. ಆಗ ನನ್ನ ಮಾತನ್ನು ಅನೇಕರು ಟೀಕಿಸಿದ್ದರು. ಎಸ್‌ಐಟಿ ಪ್ರಾಥಮಿಕ ತನಿಖೆಯಲ್ಲಿ ಷಡ್ಯಂತ್ರ ಎಂಬುದು ಬೆಳಕಿಗೆ ಬಂದಿದೆ. ಬುರುಡೆ ಗ್ಯಾಂಗ್ ಏಕೆ ಧರ್ಮಸ್ಥಳದ ವಿರುದ್ಧ ಷಡ್ಯಂತ್ರ ಮಾಡಿತು ಎಂದು ನಾನು ಸರ್ಕಾರವನ್ನು ಕೇಳುತ್ತೇನೆ. ಇದೊಂದು ಮತಾಂತರ ಮಾಫಿಯಾ ಎನ್ನುವುದು ಗೊತ್ತಾಗಿದೆ. ನಿಯೋ ಕಮ್ಯುನಿಸ್ಟ್ ಮಿದುಳು ಇದರಲ್ಲಿ ಕೆಲಸ ಮಾಡುತ್ತಿದೆ. ಇದಕ್ಕೆ ಅವರೇ ನೀರು, ಗೊಬ್ಬರ ಹಾಕಿದ್ದಾರೆ. ಇದೆಲ್ಲವನ್ನೂ ಆಧರಿಸಿ ಸಮಗ್ರ ತನಿಖೆ ನಡೆಸಬೇಕು. ಸರ್ಕಾರ ಇದನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಆಗ್ರಹಿಸಿದರು. ಹಣದ ಆಮಿಷದಿಂದ ಬುರುಡೆ ಚಿನ್ನಯ್ಯ ಸುಳ್ಳು ದೂರು, 6 ಜನರ ಪಿತೂರಿ: ಧರ್ಮಸ್ಥಳ ಕೇಸ್‌ನ ಪ್ರಾಥಮಿಕ ವರದಿ ಸಲ್ಲಿಕೆ ಬುರುಡೆ ಗ್ಯಾಂಗ್ ಮಾತು ನಂಬಿ, ಅವರು ಹೇಳಿದ ಕಡೆ ಅಗೆಯಲಾಯಿತು. ಧರ್ಮಸ್ಥಳದ ಬಗ್ಗೆ ಅರಿತು ಸರ್ಕಾರ ಕ್ರಮ ಕೈಗೊಳ್ಳಬೇಕಿತ್ತು. ಆದರೆ, ಈ ಸರ್ಕಾರಕ್ಕೆ ಬುರುಡೆ ಗ್ಯಾಂಗ್ ಮೇಲೆ ನಂಬಿಕೆ ಹೆಚ್ಚಿತ್ತು. ಜನಾಭಿಪ್ರಾಯದ ಮೇಲೆ ನಂಬಿಕೆ ಇರಲಿಲ್ಲ.

ಆರಂಭದಲ್ಲೇ ಧರ್ಮಸ್ಥಳ ಬಗ್ಗೆ ಆರೋಪ ಮಾಡಿದವರ ಪೂರ್ವಾಪರ ತಿಳಿಯಬೇಕಿತ್ತು. ಗುಂಡಿ ಅಗೆದಾಗ ಖಳನಾಯಕರೇ ನಾಯಕರಾಗಿದ್ದರು. ನಾಯಕರು ಖಳನಾಯಕರಾಗಿದ್ದರು. ಭಾರತದಲ್ಲಿ ಧರ್ಮ ಎನ್ನುವುದು ನಂಬಿಕೆ. ಅದಕ್ಕೆ ಅಪಮಾನ ಮಾಡಬಾರದು. ಏನೇ ಇರಲಿ, ದೇವರು ದೊಡ್ಡವನು, ಸತ್ಯಮೇಯ ಜಯತೆ ಎಂದು ಸಿ.ಟಿ.ರವಿ ನುಡಿದರು.


ಇದರಲ್ಲಿ ಆರು ಜನರ ಜೊತೆ ಬೇರೆಯವರೂ ಇದ್ದಾರೆ. ಯುಟ್ಯೂಬರ್ಸ್‌ಗೆ ಹಣಕಾಸು ವ್ಯವಸ್ಥೆ ಮಾಡಿದ್ದಾರೆ. ಈ ಪ್ರಕರಣವನ್ನು ಫಾಸ್ಟ್‌ಟ್ರ್ಯಾಕ್ ಕೋರ್ಟ್‌ಗೆ ತಂದು ಶೀಘ್ರವಾಗಿ ಮುಗಿಸಬೇಕು. ಈ ಷಡ್ಯಂತ್ರದಲ್ಲಿ ಭಾಗಿಯಾದವರಿಗೆ ಶಿಕ್ಷೆ ಕೊಡಿಸಬೇಕು ಎಂದು ಆಗ್ರಹಿಸಿದರು.

ಧರ್ಮಸ್ಥಳ ಪ್ರಕರಣ; ಆರೋಪಿ ಚಿನ್ನಯ್ಯನಿಗೆ ಷರತ್ತುಬದ್ಧ ಜಾಮೀನು ಮಂಜೂರು

ಶಾಸಕ ಚನ್ನಬಸಪ್ಪ ಮಾತನಾಡಿ, ಧರ್ಮಸ್ಥಳ ಪ್ರಕರಣದಲ್ಲಿ ಷಡ್ಯಂತ್ರ ಮಾಡಿದ ಆರು ಜನರಿಗೆ ಶಿಕ್ಷೆ ಆಗಬೇಕು. ಸರ್ಕಾರ ಇದರಲ್ಲಿ ಆಟ ಆಡಲು ಹೋಗಬಾರದು. ಇದನ್ನು ಖಂಡಿತವಾಗಿಯೂ ನಾವು ಸದನದಲ್ಲಿ ಪ್ರಸ್ತಾಪ ಮಾಡುತ್ತೇವೆ. ಷಡ್ಯಂತ್ರ ಮಾಡಿದವರ ವಿರುದ್ಧ ಕ್ರಮಕ್ಕೆ ಆಗ್ರಹಿಸುತ್ತೇವೆ. ಹಿಂದೂ ಧರ್ಮದ ವಿರುದ್ಧ, ಹಿಂದೂಗಳ ವಿರುದ್ಧ ಯಾರೇ ಷಡ್ಯಂತ್ರ ಮಾಡಿದರೂ ಶಿಕ್ಷೆ ಆಗಬೇಕು ಎಂದು ಒತ್ತಾಯಿಸಿದರು.

# ಶಾಲೆ, ಕಾಲೇಜು ವಿದ್ಯಾರ್ಥಿನಿಯರಿಗೂ ಋತುಚಕ್ರ ರಜೆ: ಇಂದು ಸಂಪುಟ ನಿರ್ಣಯ

**ಬೆಳಗಾವಿ:** ರಾಜ್ಯದಲ್ಲಿ ಶಾಲಾ-ಕಾಲೇಜು ವಿದ್ಯಾರ್ಥಿನಿಯರು ಹಾಗೂ ಮಹಿಳಾ, ಲಿಂಗತ್ವ ಅಲ್ಪಸಂಖ್ಯಾತ ಉದ್ಯೋಗಿಗಳಿಗೆ ಪ್ರತಿ ತಿಂಗಳು ಒಂದರಂತೆ ವರ್ಷಕ್ಕೆ 12 ವೇತನ ಸಹಿತ ಋತುಚಕ್ರ ರಜೆ ನೀಡಲು ಅನುವಾಗುವಂತೆ ಕರ್ನಾಟಕ ಮಹಿಳಾ ಯೋಗಕ್ಷೇಮ ಕಾಯ್ದೆ- 2025 ಜಾರಿಗೆ ರಾಜ್ಯ ಸರ್ಕಾರ ಸಜ್ಜಾಗಿದ್ದು, ಗುರುವಾರ ನಡೆಯಲಿರುವ ಸಂಪುಟ ಸಭೆಯಲ್ಲಿ ಅನುಮೋದನೆ ಪಡೆಯುವ ಸಾಧ್ಯತೆಯಿದೆ. ಕಾಯ್ದೆಯಡಿ ರಾಜ್ಯದಲ್ಲಿ ಕರ್ನಾಟಕ ಯೋಗಕ್ಷೇಮ ಪ್ರಾಧಿಕಾರ ರಚಿಸಲಾಗುವುದು. ಜತೆಗೆ, ಮುಟ್ಟು ಅವಧಿಯಲ್ಲಿ ಮಹಿಳೆಗೆ ರಜೆ ನೀಡದಿರುವುದು, ಭೇದಭಾವ ಮಾಡುವುದು, ಅಸ್ಪೃಶ್ಯರಂತೆ ಕಂಡರೆ 5,000 ರು. ದಂಡ ವಿಧಿಸಲು ಕಾಯ್ದೆಯಲ್ಲಿ ಅವಕಾಶ ಕಲ್ಪಿಸಲಾಗುತ್ತಿದೆ.



ನ್ಯಾಯಾಲಯದಲ್ಲಿ ಪ್ರಶ್ನಿಸುವಂತಿಲ್ಲ: ಇತ್ತೀಚೆಗೆ ಸಚಿವ ಸಂಪುಟ ಸಭೆಯಲ್ಲಿ ಋತುಚಕ್ರ ರಜೆ ನೀಡಲು ಸರ್ಕಾರ ನಿರ್ಧಾರ ಮಾಡಿತ್ತು. ಇದರ ವಿರುದ್ಧ ಹೋಟೆಲ್ ಮಾಲೀಕರ ಸಂಘ ಸೇರಿ ವಿತರರು ನ್ಯಾಯಾಲಯದ ಮೊರೆ ಹೋಗಿದ್ದಾರೆ. ಹೀಗಾಗಿ ರಾಜ್ಯ ಸರ್ಕಾರವು ಪ್ರಸಕ್ತ ಬೆಳಗಾವಿ ಅಧಿವೇಶನದಲ್ಲೇ ಪ್ರತ್ಯೇಕ ಕಾಯ್ದೆ ಜಾರಿಗೆ ನಿರ್ಧರಿಸಿದ್ದು, ಕಾಯ್ದೆಯ ಸದುದ್ದೇಶದ ವಿರುದ್ಧ ಯಾರೂ ನ್ಯಾಯಾಲಯದ ಮೆಟ್ಟಿಲೇರುವಂತಿಲ್ಲ ಎಂಬುದನ್ನು ಕಾಯ್ದೆಯಲ್ಲೇ ಸ್ಪಷ್ಟಪಡಿಸಲಾಗಿದೆ.

**ಯಾರ್‍ಯಾರಿಗೆ ಅನ್ವಯ :** ಋತುಚಕ್ರ ರಜೆ ಶಿಕ್ಷಣ ಸಂಸ್ಥೆಗಳು, ಖಾಸಗಿ ಸಂಸ್ಥೆಗಳು, ಕಾರ್ಖಾನೆಗಳು ಹಾಗೂ ಸರ್ಕಾರಿ, ಅರೆ ಸರ್ಕಾರಿ ಸಂಸ್ಥೆಗಳಲ್ಲಿನ ಮಹಿಳಾ ಉದ್ಯೋಗಿಗಳಿಗೆ ರಜೆ ಅನ್ವಯವಾಗಲಿದೆ. ಇದು ಮಹಿಳೆಯರು, ಯುವತಿಯರು ಹಾಗೂ ಲಿಂಗತ್ವ ಅಲ್ಪಸಂಖ್ಯಾತ ವ್ಯಕ್ತಿಗಳಿಗೆ ಅನ್ವಯವಾಗಲಿದೆ. ಲಿಂಗತ್ವ ಅಲ್ಪಸಂಖ್ಯಾತ ವ್ಯಕ್ತಿಗಳಲ್ಲಿ ಟ್ರಾನ್ಸ್ ಮೆನ್ ಹಾಗೂ ಟ್ರಾನ್ಸ್ ವುಮೆನ್ ಇಬ್ಬರಿಗೂ ಈ ಸೌಲಭ್ಯ ಕಲ್ಪಿಸಲು ಉದ್ದೇಶಿಸಲಾಗಿದೆ. ಇನ್ನು ಮುಟ್ಟು ಅವಧಿ ಮುಗಿದ ಅಥವಾ 52 ವರ್ಷ ದಾಟಿದ ಮಹಿಳಾ ಉದ್ಯೋಗಿಗೆ ಮುಟ್ಟಿನ ರಜೆ ಅನ್ವಯವಾಗುವುದಿಲ್ಲ. ಜತೆಗೆ ಮುಟ್ಟಿನ ಅವಧಿಯು ಸರ್ಕಾರಿ ರಜೆ ದಿನ ಅಥವಾ ಭಾನುವಾರ ಉಂಟಾದ-ರೆ ವಾರದ ಒಂದು ದಿನ ರಜೆ ಪಡೆಯಬಹುದು. ಒಂದು ತಿಂಗಳ ರಜೆಯನ್ನು ಮತ್ತೊಂದು ತಿಂಗಳಲ್ಲಿ ಸೇರಿಸಿ ಪಡೆಯಲು ಅವಕಾಶವಿಲ್ಲ.

ವಿದ್ಯಾರ್ಥಿನಿಯರಿಗೆ ಪ್ರತಿ ತಿಂಗಳು ಒಂದು ದಿನ ರಜೆ ನೀಡಲಾಗುವುದು. ಇದರಿಂದ ಶೈಕ್ಷಣಿಕ ಹಾಜರಾತಿಗೆ ಸಮಸ್ಯೆಯಾಗದಂತೆ ಶಿಕ್ಷಣ ಸಂಸ್ಥೆಗಳಲ್ಲಿ ಶೇ.2 ರಷ್ಟು ಹಾಜರಾತಿ ವಿನಾಯಿತಿ ನೀಡಲು ವಿಧೇಯಕದಲ್ಲಿ ಪ್ರಸ್ತಾಪಿಸಲಾಗಿದೆ.

# ಜನೌಷಧಿ ಕೇಂದ್ರ ಮುಚ್ಚುವ ರಾಜ್ಯ ಸರ್ಕಾರ ಆದೇಶ ರದ್ದುಗೊಳಿಸಿದ ಕರ್ನಾಟಕ ಹೈಕೋರ್ಟ್

**ಬೆಂಗಳೂರು:** ಕರ್ನಾಟಕದಲ್ಲಿ ಸರ್ಕಾರಿ ಆಸ್ಪತ್ರೆಗಳ ಆವರಣದಲ್ಲಿನ ಜನೌಷಧ ಕೇಂದ್ರಗಳನ್ನು ಸ್ಥಗಿತಗೊಳಿಸುವಂತೆ ರಾಜ್ಯ ಸರಕಾರ ಹೊರಡಿಸಿದ್ದ ಆದೇಶವನ್ನು ಕರ್ನಾಟಕ ಹೈಕೋರ್ಟ್ ಧಾರವಾಡ ಪೀಠ ರದ್ದುಗೊಳಿಸಿದೆ. ರಾಕೇಶ್ ಮಹಾಲಿಂಗಪ್ಪ ಎಲ್ ಮತ್ತು ಇತರರು ಸಲ್ಲಿಸಿದ ಅರ್ಜಿಯನ್ನು ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಏಕಸದಸ್ಯ ಪೀಠ ಅಂಗೀಕರಿಸಿದ್ದು, ಸರ್ಕಾರಿ ಆಸ್ಪತ್ರೆಗಳ ಆವರಣದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಜನೌಷಧಿ ಕೇಂದ್ರಗಳನ್ನು ಮುಚ್ಚುವಂತೆ ನಿರ್ದೇಶಿಸಿ ಮೇ 14 ರಂದು ಹೊರಡಿಸಲಾದ ಸರ್ಕಾರಿ ಆದೇಶವನ್ನು ರದ್ದುಗೊಳಿಸಿ ಮೌಖಿಕ ಆದೇಶ ಹೊರಡಿಸಿದೆ.




ಸರ್ಕಾರಿ ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ ಪ್ರಧಾನಮಂತ್ರಿ ಜನೌಷಧಿ ಕೇಂದ್ರ ಮುಚ್ಚುವಂತೆ ರಾಜ್ಯ ಸರ್ಕಾರ ಸುತ್ತೋಲೆ ಹೊರಡಿಸಿತ್ತು. ಇದನ್ನು ಪ್ರಶ್ನಿಸಿ ರಾಕೇಶ್ ಮಹಾಲಿಂಗಪ್ಪ ಮತ್ತು ಇತರರು ಅರ್ಜಿ ಸಲ್ಲಿಸಿದ್ದರು. ಇದ-ಕ್ಕೆ ಸರ್ಕಾರಿ ವಕೀಲರು ಸಹ ಆಕ್ಷೇಪಣೆ ಸಲ್ಲಿಸಿದ್ದು, ರಾಜ್ಯ ಸರ್ಕಾರವು ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತ ಔಷಧವನ್ನು ಪೂರೈಸಲು ನಿರ್ಧರಿಸಿದೆ. ಆದ್ದರಿಂದ ಸರ್ಕಾರಿ ಆಸ್ಪತ್ರೆಗಳ ಒಳಗೆ ಜನೌಷಧಿ ಕೇಂದ್ರಗಳ ಕಾರ್ಯಾಚರಣೆ ಅನಿವಾರ್ಯವಲ್ಲ ಎಂದು ವಾದಿಸಿದರು. ಅಲ್ಲದೇ ಆಸ್ಪತ್ರೆ ಆವರಣದೊಳಗಿದ್ದ ಜನೌಷಧಿ ಕೇಂದ್ರಗಳನ್ನು ಮುಚ್ಚಿಸಲಾಗಿದೆ. ಇನ್ನುಳಿದಂತೆ ಅದರಾಚೆಗೆ ಇರುವ ಜನೌಷಧ ಕೇಂದ್ರಗಳನ್ನು ಸ್ಥಗಿತಗೊಳಿಸಿಲ್ಲ ಎಂದು ತಿಳಿಸಿದರು.

ಬಳಿಕ ವಾದ ಮಾಡಿದ ಅರ್ಜಿದಾರರ ಪರ ವಕೀಲರು, ಈ ಬಗ್ಗೆ ಸಮಾಲೋಚಿಸದೆ ಅಥವಾ ಯಾವುದೇ ಮುಂಚಿತ ಮಾಹಿತಿ ನೀಡದ ತರಾತುರಿಯಲ್ಲಿ ಮುಚ್ಚಿಸಲಾಗಿದೆ. ಉಚಿತ ಔಷಧ ವಿತರಣೆಗೆ ಸಣ್ಣ ಕೇಂದ್ರವೊಂದು ಅಡ್ಡ ಬರುತ್ತಿದೆ ಎಂಬುದು ರಾಜ್ಯದ ವಾದವಾಗಲು ಸಾಧ್ಯವಿಲ್ಲ. ಸರ್ಕಾರ ಯಾವಾಗಲೂ ಉಚಿತವಾಗಿ ಔಷಧ ನೀಡುತ್ತಿದೆ. ನಾವಿಬ್ಬರೂ ಸಾರ್ವಜನಿಕ ಹಿತಾಸಕ್ತಿಗಾಗಿ ಕೆಲಸ ಮಾಡುತ್ತಿದ್ದೇವೆ ಎಂದು ಕೋರ್ಟ್‌ಗೆ ತಿಳಿಸಿದರು.

ಕೇಂದ್ರ ಸರ್ಕಾರದಿಂದ ರೈತರಿಗೆ ಗುಡ್ ನ್ಯೂಸ್; ಜನೌಷಧಿ ಮಾದರಿಯಲ್ಲಿ ಕೀಟನಾಶಕ ಕೇಂದ್ರ ಸ್ಥಾಪನೆ

ಮೂಲಸೌಕರ್ಯ ಅಭಿವೃದ್ಧಿ, ಔಷಧ ದಾಸ್ತಾನು, ಉಪಕರಣಗಳು ಮತ್ತು ಪೀಠೋಪಕರಣಗಳು, ಸಿಬ್ಬಂದಿ ವೇತನ, ಕೇಂದ್ರವನ್ನು ನಡೆಸುವ ಉದ್ದೇಶಕ್ಕಾಗಿ ಅಗತ್ಯ ಪರವಾನಗಿ ಪಡೆದಿರುವುದು ಕಾನೂನುಬದ್ಧವಾಗಿದೆ. ಆದಾಗ್ಯೂ ಸಂವಿಧಾನದ 19(1)(ಜಿ) ಅಡಿಯಲ್ಲಿ ಅವರ ಜೀವನೋಪಾಯದ ಹಕ್ಕನ್ನು ಮತ್ತು ಸಂವಿಧಾನದ 21ನೇ ವಿಧಿಯ ಅಡಿಯಲ್ಲಿ ಬದುಕುವ ಹಕ್ಕನ್ನು ಉಲ್ಲಂಘಿಸಲಾಗಿದೆ ಎಂದು ಪ್ರಬಲ ವಾದ ಮಂಡಿಸಿದರು.

ಈ ವಾದ ಪ್ರತಿವಾದ ಆಲಿಸಿದ ನ್ಯಾಯಮೂರ್ತಿ ಎಂ. ನಾಗಪ್ರಸನ್ನ, ರಾಜ್ಯದ ಸರ್ಕಾರಿ ಆಸ್ಪತ್ರೆಗಳ ಆವರಣದಲ್ಲಿರುವ ಜನೌಷಧಿ ಕೇಂದ್ರಗಳನ್ನು ಮುಚ್ಚುವಂತೆ ನಿರ್ದೇಶಿಸಿ ಮೇ 14 ರಂದು ಹೊರಡಿಸಲಾದ ಆದೇಶವನ್ನು ರದ್ದುಗೊಳಿಸಿ ಆದೇಶ ಆದೇಶಿಸಿದ್ದಾರೆ.

ಜನೌಷಧಿ ಕೇಂದ್ರ ಮುಚ್ಚಿಲ್ಲ, ಸರ್ಕಾರಿ ಆಸ್ಪತ್ರೆ ಆವರಣದಲ್ಲಿ ಮಾತ್ರ ನಿರ್ಬಂಧ: ದಿನೇಶ್ ಗುಂಡೂರಾವ್ ಸ್ಪಷ್ಟನೆ.

# ಪೊಲೀಸ್ ಮುಂಬಡ್ತಿ ಅನುಪಾತ ಹೆಚ್ಚಳಕ್ಕೆ ಕ್ರಮ ಡಾ. ಪರಮೇಶ್ವರ್

**ಬೆಂಗಳೂರು:** ದೈಹಿಕ ಸಧೃಡತೆ ಹೊಂದಿರುವುದು, ಯುವಕರು ಬರಬೇಕೆನ್ನುವ ಕಾರಣಕ್ಕೆ ಮುಂಬಡ್ತಿ ನೀಡುವಾಗ ಶೇ70-30ರ ಅನುಪಾತವನ್ನು ಪೊಲೀಸ್ ಇಲಾಖೆಯಲ್ಲಿ ಅಳವಡಿಸಿದ್ದು, ಇದನ್ನು ಬದಲಾವಣೆ ಮಾಡಲು ಅಗತ್ಯಬಿದ್ದರೆ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರಲಾಗುವುದು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರು ಮೇಲ್ಮನೆಯಲ್ಲಿ ತಿಳಿಸಿದರು.



ಪ್ರಶ್ನೋತ್ತರ ವೇಳೆಯಲ್ಲಿ ಕಾಂಗ್ರೆಸ್ ನ ಡಿ.ಟಿ.ಶ್ರೀನಿವಾಸ್ ಅವರ ಪ್ರಶ್ನೆಗೆ ಉತ್ತರ ನೀಡಿದ ಸಚಿವರು ನೇಮಕಾತಿಗೊಂಡ ಪೇದೆಗಳು ಹೆಚ್ಚಿನ ವಿದ್ಯಾಭ್ಯಾಸ ಹೊಂದಿದ್ದರೆ ಅವರಿಗೆ ಪಿಎಸ್ ಐ ಹುದ್ದೆಗಳ ನೇಮಕಾತಿಯಲ್ಲಿ 7 ವರ್ಷಗಳವರೆಗೆ ಅವಕಾಶ ನೀಡಲಾಗುವುದು ಎಂದು ಹೇಳಿದರು.

ಕ್ರೀಡಾಪಟುಗಳಿಗೆ ಪೊಲೀಸ್ ಸಿಬ್ಬಂದಿಯ ನೇಮಕಾತಿಯಲ್ಲಿ ಶೇ 3 ರಷ್ಟು ಹುದ್ದೆಗಳನ್ನು ಮೀಸಲಿಡಲಾಗಿದೆ ಪದವೀಧರ, ಸ್ನಾತಕೋತ್ತರ ಪದವೀಧರರು ಹೆಚ್ಚು ಪೊಲೀಸ್ ಸಿಬ್ಬಂದಿಯಾಗಿ ನೇಮಕಾತಿಗೊಳ್ಳುತ್ತಿದ್ದಾರೆ ಎಂದು ತಿಳಿಸಿದರು.

ಪೊಲೀಸ್ ಇಲಾಖೆಯ ಎಎಸ್‌ಐ ಮತ್ತು ಸಿಬ್ಬಂದಿಗಳು ಪಿಎಸ್ ಐ ವೃಂದದ ಪತ್ರಾಂಕಿತ ರಜಾ ದಿವಸಗಳಲ್ಲಿ ಕಾರ್ಯನಿರ್ವಹಿಸಿದ್ದಕ್ಕೆ 15 ದಿವಸಗಳ ವೇತನವನ್ನು 30 ದಿವಸಗಳ ಪರಿಷ್ಕರಿಸುವ ಪ್ರಸ್ತಾವನೆಯು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿದೆ ಎಂದು ಹೇಳಿದರು.

ಎಎಸ್‌ಐ ರವರುಗಳಿಗೆ ಪಿಎಸ್‌ಐ ಮುಂಬಡ್ತಿ ಹುದ್ದೆಯ ರಿಕ್ತಸ್ಥಾನಕ್ಕೆ ಅನುಗುಣವಾಗಿ ಜೇಷ್ಠತೆಯ ಆಧಾರದ ಮೇಲೆ ವೃಂದ ಮತ್ತು ನೇಮಕಾತಿ ನಿಯಮಾನುಸಾರ ಕನಿಷ್ಟ ವರ್ಷಗಳ ಸೇವೆಯನ್ನು ಪೂರೈಸಿರುವ ಅರ್ಹ 4 ಎಎಸ್‌ಐ ರವರುಗಳಿಗೆ ಪಿಎಸ್‌ಐ ಹುದ್ದೆಗೆ ಮುಂಬಡ್ತಿ ನೀಡಲಾಗುತ್ತದೆ.

ಸುಮಾರು 29 ವರ್ಷಗಳು ಇಲಾಖೆಯಲ್ಲಿ ಸೇವೆ ಸಲ್ಲಿಸಿರುವ ಹಾಗೂ ಎಎಸ್ ಐ ಹುದ್ದೆಯಲ್ಲಿ 5 ವರ್ಷ 10 ತಿಂಗಳು ಸೇವೆಯನ್ನು ಪೂರೈಸಿರುವ ಎಎಸ್ ಐ ಗಳಿಗೆ ಮುಂಬಡ್ತಿ ನೀಡಲಾಗುತ್ತಿದೆ ಎಂದರು.

ಕಾನೂನು ಮತ್ತು ಸುವ್ಯವಸ್ಥೆಯ ನಿರ್ವಹಣೆ, ಅಪರಾಧ ತಡೆಗಟ್ಟುವಿಕೆ, ಅಪರಾಧ ಪ್ರಕರಣಗಳ ಪತ್ತೆ ಮತ್ತು ತನಿಖೆ, ಸಂಚಾರ ನಿರ್ವಹಣೆಯ ಕರ್ತವ್ಯ ನಿರ್ವಹಿಸಲು ದೈಹಿಕವಾಗಿ ಯುವ ಮತ್ತು ಮಾನಸಿಕವಾಗಿ ಸದೃಢರಾದ ಹಾಗೂ ತಾಂತ್ರಿಕ ನೈಪುಣ್ಯತೆಯುಳ್ಳ ಅಧಿಕಾರಿಗಳ ಅವಶ್ಯಕತೆ ಇರುತ್ತದೆ. ಅಲ್ಲದೇ ಇತ್ತೀಚಿನ ದಿನಗಳಲ್ಲಿ ಅಪರಾಧ ಪ್ರಕರಣಗಳು ಹೆಚ್ಚಿನ ತಾಂತ್ರಿಕತೆಯಿಂದ ಕೂಡಿದ್ದು, ಇಂತಹ ಪ್ರಕರಣಗಳ ಪತ್ತೆಗೆ ಹೆಚ್ಚಿನ ತಾಂತ್ರಿಕ ವಿದ್ಯಾರ್ಹತೆಯುಳ್ಳ ಯುವಕರ ಅವಶ್ಯಕತೆ ಇರುವುದರಿಂದ ಮುಂಬಡ್ತಿಯಲ್ಲಿ ಯುವಕರಿಗೆ ಅವಕಾಶ ನೀಡಲಾಗುತ್ತಿದೆ ಎಂದು ಹೇಳಿದರು.

ಸಾಮಾನ್ಯವಾಗಿ ಪೊಲೀಸ್ ಕಾನ್ಸ್-ಟೇಬಲ್ ವೃಂದದ ಸಿಬ್ಬಂದಿಗಳು ಕ್ರಮವಾಗಿ ಹೆಡ್ ಕಾನ್ಸ್ ಟೇಬಲ್ ಮತ್ತು ಎಎಸ್‌ಐ ಹುದ್ದೆಗಳಿಗೆ 2 ಮುಂಬಡ್ತಿಯನ್ನು ಹೊಂದಿ ನಂತರ ಪಿಎಸ್‌ಐ(ಸಿವಿಲ್) ಹುದ್ದೆಗೆ ಅರ್ಹರಾಗುತ್ತಾರೆ. ಇವರ ಶಿಕ್ಷಣವು ಮೂಲ ಹುದ್ದೆಯ ಕನಿಷ್ಠ ಮಟ್ಟದ್ದಾಗಿರುವುದರಿಂದ ವರದಿಯಾಗುತ್ತಿರುವ ಅಪರಾಧ ಪ್ರಕರಣ ಬೇಧಿಸುವುದು ಕಷ್ಟಸಾಧ್ಯವಾಗಿರುತ್ತದೆ ಎಂದು ತಿಳಿಸಿದರು.

# ರೈತರಿಗೆ ಗುಡ್‌ನ್ಯೂಸ್; ರಾಜ್ಯದಿಂದ 9.67 ಲಕ್ಷ ಮೆಟ್ರಿಕ್ ಟನ್ ತೊಗರಿ ಖರೀದಿಗೆ ಕೇಂದ್ರ ಅಸ್ತು

**ನವದೆಹಲಿ:** ಕರ್ನಾಟಕದ ರೈತರಿಗೆ ಕೇಂದ್ರ ಸರ್ಕಾರ ಗುಡ್‌ನ್ಯೂಸ್ ನೀಡಿದೆ. ರಾಜ್ಯದ ರೈತರಿಂದ ಬೆಂಬಲ ಬೆಲೆ ಯೋಜನೆಯಡಿ 9.67 ಲಕ್ಷ ಮೆಟ್ರಿಕ್ ಟನ್ ತೊಗರಿ ಖರೀದಿಗೆ ಕೇಂದ್ರ ಅಸ್ತು ಎಂದಿದೆ.




ಈ ಬಗ್ಗೆ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಮಾಹಿತಿ ನೀಡಿದ್ದು, ಕರ್ನಾಟಕ ರೈತರ ಹಿತರಕ್ಷಣೆಗೆ ಸದಾ ಬದ್ಧವಾಗಿರುವ ಕೇಂದ್ರ ಸರ್ಕಾರ, ಬೆಂಬಲ ಬೆಲೆ ಯೋಜನೆಯಡಿ ತೊಗರಿ ಖರೀದಿಗೆ ಒಪ್ಪಿದೆ. ರಾಜ್ಯದಲ್ಲಿ ಕನಿಷ್ಠ ಬೆಂಬಲ ಬೆಲೆಯಲ್ಲಿ ನಫೆಡ್ ಮತ್ತು ಎನ್‌ಸಿಸಿಎಫ್ ಮೂಲಕ ಆದ್ಯತೆ ಮೇಲೆ ತೊಗರಿ ಖರೀದಿಗೆ ತ್ವರಿತ ಅನುಮೋದನೆ ನೀಡುವ ಮೂಲಕ ತಮ್ಮ ವಿಶೇಷ ಮನವಿಗೆ ತಕ್ಷಣ ಸ್ಪಂದಿಸಿದೆ ಎಂದು ತಿಳಿಸಿದ್ದಾರೆ. ಕರ್ನಾಟಕದಲ್ಲಿ ತೊಗರಿ ಬೆಳೆಗಾರರು ಸಂಕಷ್ಟಕ್ಕೆ ಸಿಲುಕಿದ್ದು, ಈ ಕೂಡಲೇ ಬೆಂಬಲ ಬೆಲೆ ಯೋಜನೆಯಲ್ಲಿ ಖರೀದಿಗೆ ಮುಂದಾಗುವಂತೆ ಕೋರಿದರು.

# ಡಿಸೆಂಬರ್ 21ರಿಂದ 24ರವರೆಗೆ ರಾಜ್ಯದಲ್ಲಿ ಪಲ್ಸ್ ಪೋಲಿಯೋ ಅಭಿಯಾನ

**ಬೆಂಗಳೂರು:** ಆರೋಗ್ಯ ಇಲಾಖೆಯಿಂದ ಬೆಂಗಳೂರು ಸೇರಿ ರಾಜ್ಯಾದ್ಯಂತ ಡಿಸೆಂಬರ್ 21ರಿಂದ 24ರವರೆಗೆ ಪಲ್ಸ್ ಪೋಲಿಯೋ ಅಭಿಯಾನ ಹಮ್ಮಿಕೊಂಡಿದ್ದು, 5 ವರ್ಷಕ್ಕಿಂತ ಕಡಿಮೆ ವಯಸ್ಸಿನ ಪ್ರತಿಯೊಂದು ಮಗುವಿಗೂ 2 ಜೀವ ರಕ್ಷಕ ಪೋಲಿಯೋ ಹನಿಗಳನ್ನು ಹಾಕಿಸಲು ರಾಜ್ಯ ಸರ್ಕಾರ ಮನವಿ ಮಾಡಿದೆ.

ಬೆಂಗಳೂರಿನಲ್ಲಿ ನಾಲ್ಕು ದಿನಗಳ ಕಾಲ ನಡೆಯುವ ಅಭಿಯಾನದಲ್ಲಿ ಡಿಸೆಂಬರ್ 21ರಂದು ಬೆಳಗ್ಗೆ 8 ರಿಂದ ಸಂಜೆ 5 ಗಂಟೆ ಬೂತ್‌ಗಳಲ್ಲಿ ಲಸಿಕೆ ಹಾಕಲಾಗುತ್ತದೆ. ಡಿ. 22 ರಿಂದ 24ರವರೆಗೆ ಮನೆಮನೆಗೆ ಭೇಟಿ ನೀಡಿ ಲಸಿಕೆ ನೀಡುವ ಕಾರ್ಯ ನಡೆಯುತ್ತದೆ. ಎಲ್ಲಾ 4 ದಿನಗಳಲ್ಲಿ ಸಂಚಾರ ಕೇಂದ್ರಗಳು ಹಾಗೂ ಹೆಚ್ಚಿನ ಅಪಾಯ ಪ್ರದೇಶಗಳಲ್ಲಿ ವಿಶೇಷ ಅಭಿಯಾನ ಕೈಗೊಳ್ಳಲಾಗಿದೆ ಎಂದು ಗ್ರೇಟರ್ ಬೆಂಗಳೂರು ಪ್ರಾಧಿಕಾರ ಮಾಹಿತಿ ನೀಡಿದೆ.

ಬೆಂಗಳೂರು ಸೇರಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಪಲ್ಸ್ ಪೋಲಿಯೋ ಅಭಿಯಾನಕ್ಕೆ ಆರೋಗ್ಯ ಇಲಾಖೆ ಅಗತ್ಯ ಸಿದ್ಧತೆ ಮಾಡಿಕೊಂಡಿದೆ. ಈ ಅಭಿಯಾನದಲ್ಲಿ




ಆರೋಗ್ಯಾಧಿಕಾರಿಗಳ ನೇತೃತ್ವದ ತಂಡದ ಜತೆಗೆ ವೈದ್ಯಕೀಯ, ನರ್ಸಿಂಗ್ ಕಾಲೇಜುಗಳು, ಖಾಸಗಿ ಆಸ್ಪತ್ರೆಗಳು, ರೋಟರಿ ಲಯನ್ಸ್ ಕ್ಲಬ್‌ಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತು ಅನೇಕ ಸಂಘ?ಸಂಸ್ಥೆಗಳು ಸಹಭಾಗಿಯಾಗಲಿವೆ.

**ಪೋಲಿಯೋ ಲಸಿಕೆ ಏಕೆ ಅಗತ್ಯ?**

ಪೋಲಿಯೋ, ಪೋಲಿಯೊಮೈಲಿಟಿಸ್‌ಗೆ ಸಂಕ್ಷಿಪ್ತ ರೂಪವಾಗಿದ್ದು, ಇದು ಹೆಚ್ಚು ಸಾಂಕ್ರಾಮಿಕ ಮತ್ತು ಮಾರಕ ವೈರಲ್ ಕಾಯಿಲೆಯಾಗಿದೆ. ಇದು ಪ್ರಾಥಮಿಕವಾಗಿ ಐದು ವರ್ಷದೊಳಗಿನ ಮಕ್ಕಳ ಮೇಲೆ ಪರಿಣಾಮ ಬೀರುತ್ತದೆ, ಪಾರ್ಶ್ವವಾಯು ಮತ್ತು ಕೆಲವೊಮ್ಮೆ ಸಾವಿಗೆ ಕಾರಣವಾಗುತ್ತದೆ. ವೈರಸ್‌ನಿಂದ ಉಂಟಾಗುವ ಈ ಕಾಯಿಲೆ, ಮಲ-ಮೌಖಿಕ ಮಾರ್ಗದ ಮೂಲಕ ಹರಡುತ್ತದೆ.

# ಪ್ರಧಾನಿ ಮೋದಿಗೆ ಅವಹೇಳನ, ಕೊಡಗಿನಲ್ಲಿ ಮೂವರ ಸೆರೆ

**ಕೊಡಗು:** ಪ್ರಧಾನ ಮಂತ್ರಿ ನರೇಂದ್ರ ಮೋದಿ ವಿರುದ್ಧ ಅವಹೇಳನಕಾರಿ ವಿಡಿಯೋ ಮಾಡಿದ್ದ ಹಿನ್ನೆಲೆಯಲ್ಲಿ ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿ ಪೊಲೀಸರು ಮೂವರನ್ನು ಅರೆಸ್ಟ್ ಮಾಡಿದ್ದಾರೆ. ಬಂಧಿತರನ್ನು ಫಾಹಾದ್, ಬಾಸಿಲ್, ಹಾಗು ಸಮೀರ್ ಎಂದು ಗುರುತಿಸಲಾಗಿದೆ.

ಸ್ಪೈಸಸ್ ಅಂಗಡಿಯಲ್ಲಿ ಕುಳಿತು ಆರೋಪಿಗಳು ವಿಡಿಯೋ ಮಾಡಿದ್ದರು. ಅವಾಚ್ಯ ಪದಗಳಿಂದ ಪ್ರಧಾನಿ ನರೇಂದ್ರ ಮೋದಿಯನ್ನು ಆರೋಪಿಗಳು ನಿಂದಿಸಿದ್ದಾರೆ. ಸಾಮಾಜಿಕ ಜಾಲತಾಣಗಳಲ್ಲಿ ಈ ಮೂವರ ವಿರುದ್ಧ ಆಕ್ರೋಶ ವ್ಯಕ್ತವಾಗಿತ್ತು. ಈ ಕುರಿತು ಮಡಿಕೇರಿ ನಗರ ಠಾಣೆಗೆ ಕೊಡಗು ಜಿಲ್ಲಾ ಬಿಜೆಪಿ ದೂರು ನೀಡಿತ್ತು. ಈ ಹಿನ್ನೆಲೆಯಲ್ಲಿ ಪೊಲೀಸರು ತನಿಖೆ ನಡೆಸಿ ಮೂವರು ಆರೋಪಿಗಳನ್ನು ಆರೆಸ್ಟ್ ಮಾಡಿದ್ದಾರೆ.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**